


# ವಿಜಯ ಕಾಲ

ಪ್ರಧಾನ ಸಂಪಾದಕ: ಕೆ. ದೀಪಕ್

ಓದುಗರ ಒಡಲಾಳ

ಬೆಳಗಿನ ಕನ್ನಡ ದಿನಪತ್ರಿಕೆ

Bhavishya Academy

ಮೈಸೂರು | ಚಾಮರಾಜನಗರ | ಮಂಡ್ಯ | ಬೆಂಗಳೂರು

RNI:KARKAN/2017/74098 ಸಂಪುಟ: 08 ಸಂಚಿಕೆ: 04 ಬುಧವಾರ 05 ನವೆಂಬರ್ 2025 ದೂರವಾಣಿ – 9741511340 – 8123436767 ಪುಟ-6 ರೂ. 2


# ಸಚಿವ ಸಂಪುಟ ವಿಸ್ತರಣೆ ಖಚಿತ

## ಮೈಸೂರಿನಿಂದ ತನ್ವೀರ್, ಮಂಡ್ಯದಿಂದ ನರೇಂದ್ರಸ್ವಾಮಿ, ಚಾಮರಾಜನಗರದಿಂದ ಪುಟ್ಟರಂಗಶೆಟ್ಟಿ ಹೆಸರು ಮುನ್ನಲೆಗೆ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದ ರಾಮಯ್ಯ ನೇತೃತ್ವದ' ಸಚಿವ ಸಂಪುಟ ವಿಸ್ತರಣೆಗೆ ಕಾಲ ಸನ್ನಿಹಿತಗೊಂಡಿದ್ದು ಮೈಸೂರಿನಿಂದ ಶಾಸಕ ತನ್ವೀರ್ ಸೇಠ್, ಮಂಡ್ಯದಿಂದ ಶಾಸಕ ನರೇಂದ್ರಸ್ವಾಮಿ ಹಾಗೂ ಚಾಮರಾಜನಗರದಿಂದ ಶಾಸಕ ಕೆ.ಸಿ.ಪುಟ್ಟರಂಗಶೆಟ್ಟಿ ಅವರಿಗೆ ಸ್ಥಾನ ದೊರಕುವ ಸಾಧ್ಯತೆಗಳಿವೆ ಎಂದು ಮೂಲಗಳು ತಿಳಿಸಿವೆ. ಈ ಸಂಬಂಧ ಕೆಲ ದಿನಗಳಿಂದ ರಾಜಧಾನಿಯಲ್ಲಿ ಬಿರುಸಿನ ರಾಜಕೀಯ ಚಟುವಟಿಕೆಗಳು ನಡೆಯುತ್ತಿದೆ. ಈ ನಡುವೆ, ಮೈಸೂರಿಗೆ ಆಗಮಿಸಿದ್ದ ಮುಖ್ಯಮಂತ್ರಿ ಸಿದ್ದ ರಾಮಯ್ಯ ಅವರೂ ನವೆಂಬರ್ ಅಂತ್ಯಕ್ಕೆ ಸಚಿವ ಸಂಪುಟ ವಿಸ್ತರಣೆಯ ಸುಳಿವು ನೀಡಿದ್ದರು. ಈ ಹಿನ್ನೆಲೆಯಲ್ಲಿ ಸಚಿವ ಆಕಾಂಕ್ಷಿಗಳ ರಾಜಕೀಯ ಚಟುವಟಿಕೆ ತೀವ್ರಗೊಂಡಿದ್ದು, ಮೊದಲ ಹಂತದಲ್ಲಿ ಸಚಿವ ಸ್ಥಾನ ಕಳೆದುಕೊಂಡಿದ್ದ ಶಾಸಕರು ಎರಡನೇ ಹಂತದಲ್ಲಿ ಶತಾಯ ಗತಾಯ ಮಂತ್ರಿಗಿರಿ ಗಿಟ್ಟಿಸಿಕೊಳ್ಳಲು ಸಾಹಸಪಡುತ್ತಿದ್ದಾರೆ. ಮೂಲಗಳಪ್ರಕಾರ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಗಳಾಗಿ ಅಧಿಕಾರ ಸ್ವೀಕರಿಸಿ ಸಚಿವ ಸಂಪುಟ ರಚಿಸಿದ ಸಂದರ್ಭದಲ್ಲಿ ಆಕಾಂಕ್ಷಿಗಳ ಪಟ್ಟಿಯಲ್ಲಿ ಪ್ರಬಲವಾಗಿ ಕೇಳಿಬಂದಿದ್ದ ಶಾಸಕರುಗಳಾದ ಬಿ.ಕೆ. ಹರಿಪ್ರಸಾದ್, ಎಂ. ಕೃಷ್ಣಪ್ಪ, ಪುಟ್ಟರಂಗಶೆಟ್ಟಿ, ತನ್ವೀರ್ ಸೇಠ್, ಯು.ಟಿ. ಖಾದರ್, ನಾಡಗೌಡ, ಅಜಯ್ ಸಿಂಗ್, ಶಿವಲಿಂಗೇಗೌಡ ಸೇರಿ ದಂತೆ ಅನೇಕರ ಹೆಸರು ಮುನ್ನೆಲೆಗೆ ಬಂದಿದೆ. ಈ ನಡುವೆ, ಸರಕಾರಕ್ಕೆ ಮುಜುಗರವಾಗುವ ಹೇಳಿಕೆಗಳನ್ನು ಮಾಧ್ಯಮಗಳ ಮುಂದೆ ನೀಡಬಾರದು ಎಂದು ಶಾಸಕರಿಗೆ ಪಕ್ಷದ ಹೈಕಮಾಂಡ್ ಕಠಿಣ ಸೂಚನೆ ನೀಡಿದೆ.

### ಹೈಕಮಾಂಡೇ ಅಂತಿಮ



ಸಚಿವ ಸಂಪುಟ ಪುನಾರಚನೆ ಕುರಿತು ಗೃಹ ಸಚಿವ ಜಿ. ಪರಮೇಶ್ವರ್ ಮಾತನಾಡಿ, ಈ ಕುರಿತು ಹೈಕಮಾಂಡ್ ನಿರ್ಧಾರ ತೆಗೆದುಕೊಳ್ಳುತ್ತದೆ. ನಾವೆಲ್ಲರೂ ಹೈಕಮಾಂಡ್ ನಿರ್ಧಾರಗಳನ್ನು ಗೌರವಿಸುತ್ತೇವೆ ಮತ್ತು ಅನು ಸರಿಸುತ್ತೇವೆ. ಪಾಲಿಸದವರ ವಿರುದ್ಧ ಕ್ರಮ ಕೈಗೊಳ್ಳಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದು ಸರಿ. ಹೈಕಮಾಂಡ್ ಏನು ನಿರ್ಧರಿಸುತ್ತದೆಯೋ ಅದನ್ನು ನಾವು ಕೇಳುತ್ತೇವೆಂದು ತಿಳಿಸಿದರು.

ವರ್ತೂರು ಪೊಲೀಸ್ ಅಧಿಕಾರಿಯೊಬ್ಬರು ಮನೆಕೆಲಸದವಳ ಮೇಲೆ ನಡೆಸಿದ ಹಲ್ಲೆಯ ಘಟನೆಯ ಕುರಿತು ಮಾತನಾಡಿ, ಇದು ನನ್ನ ಗಮನಕ್ಕೆ ಬಂದಿದೆ. ಈ ಬಗ್ಗೆ ಪೊಲೀಸ್ ಆಯುಕ್ತರಿಂದ ವರದಿ ಕೇಳಿದ್ದೇನೆ. ವರದಿ ಬಂದ ನಂತರ, ಪರಿಶೀಲಿಸಿ, ಅಗತ್ಯವಿದ್ದರೆ ಪೊಲೀಸ್ ವಿರುದ್ಧ ಕ್ರಮ ಕೈಗೊಳ್ಳುತ್ತೇವೆಂದು ಹೇಳಿದರು.

### ಡಿಸಿಎಂ ಸ್ಥಾನದ ಮೇಲೆ ಜಮೀರ್ ಕಣ್ಣು



**ಹಾವೇರಿ:** ಒಂದು ವೇಳೆ ಹೈಕಮಾಂಡ್ ನಿರ್ಧರಿಸಿದರೆ ಉಪ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲು ನಾನು ಸಿದ್ಧನಿದ್ದೇನೆ. ಸಚಿವ ಸ್ಥಾನ ತ್ಯಾಗಕ್ಕೂ ಸಿದ್ಧ ನಾಗಿದ್ದೇನೆ. ಇದ್ಯಾ ವುದೂ ಇಲ್ಲವೆಂದರೆಕೇವಲಕಾರ್ಯಕರ್ತನಾಗಿ ಪಕ್ಷದ ಕೆಲಸ ಮಾಡಲು ಸಿದ್ಧ ಎಂದು ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಹೇಳಿದರು.

ಸುದ್ದಿಗಾರರ ಜತೆ ಮಾತನಾಡಿ, ನ.26ರಂದು ಸಿದ್ಧರಾಮಯ್ಯ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಲಿದ್ದಾರೆ, ಡಿಸಿಎಂ ಡಿ.ಕೆ. ಶಿವ ಕುಮಾರ್ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ, ಸತೀಶ ಜಾರಕಿಹೊಳಿ ಕೆಪಿಸಿಸಿ ಅಧ್ಯಕ್ಷರಾಗಲಿದ್ದಾರೆ ಎನ್ನುವುದು ಕೇವಲ ವದಂತಿ ಹೊರತು ವಾಸ್ತವ ಸಂಗತಿಗಳಲ್ಲ ಎಂದರು.

2028ರವರೆಗೆ ಸಿದ್ದ ರಾಮಯ್ಯ ಅವರೇ ಮುಖ್ಯಮಂತ್ರಿಯಾಗಿ ಮುಂದುವರಿಯುತ್ತಾರೆ. ಅವರ ನಂತರ ಪಕ್ಷಕ್ಕಾಗಿ ದುಡಿದಿರುವ ಡಿ.ಕೆ.ಶಿವಕುಮಾರ್ ಅವರನ್ನು ಮುಖ್ಯಮಂತ್ರಿಯನ್ನಾಗಿ ನೋಡಲು ಬಯಸುತ್ತೇವೆ ಎಂದು ಸಚಿವ ಜಮೀರ್ ತಿಳಿಸಿದರು.

ಡಿ.ಕೆ.ಶಿವಕುಮಾರ್ ಪಕ್ಷಕ್ಕಾಗಿ ದುಡಿದಿದ್ದಾರೆ. ಅವರು ಮುಖ್ಯ ಮಂತ್ರಿಯಾಗಬೇಕು ಎಂಬುದು ನಮ್ಮ ಬಯಕೆ. ಪಕ್ಷಕ್ಕೆ ದುಡಿದವರು ಮುಖ್ಯಮಂತ್ರಿಯಾಗಬೇಕು ಎಂದು ಬಯಸುವುದರಲ್ಲಿ ತಪ್ಪಿಲ್ಲ. ದಲಿತ ಮುಖ್ಯಮಂತ್ರಿಯಾಗಬೇಕು ಎಂಬ ಆಸೆಯೂ ಇದೆ ಎಂದರು.

# ಮಾಜಿ ಸಚಿವ ಮೇಟಿ ನಿಧನ

**ಬೆಂಗಳೂರು:** ಮಾಜಿ ಸಚಿವ, ಬಾಗಲಕೋಟೆ ಕಾಂಗ್ರೆಸ್ ಶಾಸಕ ಎಚ್.ವೈ.ಮೇಟಿ ಮಂಗಳವಾರ ನಿಧನರಾಗಿದ್ದಾರೆ. ಅನಾರೋಗ್ಯದಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಅವರು ಚಿಕಿತ್ಸೆ ಫಲಕಾರಿಯಾದೇ ಕೊನೆಯುಸಿರೆಳೆದಿದ್ದಾರೆ.

ಜಯನಗರ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದ ಎಚ್. ವೈ. ಮೇಟಿ ಇಂದು ಮೃತಪಟ್ಟಿದ್ದಾರೆ. ಕಳೆದ ಹಲವು ದಿನಗಳಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು.



ಹುಟ್ಟೂರಿನಲ್ಲಿ ಸಕಲ ಸರ್ಕಾರಿ ಗೌರವದೊಂದಿಗೆ ಬುಧವಾರ ಅಂತ್ಯಕ್ರಿಯೆ ನೆರವೇರಲಿದೆ. ಕಾರ್ಡಿಯಾಕ್ ಅರೆಸ್ಟ್‌ನಿಂದ ಅವರು ನಿಧನರಾಗಿದ್ದಾರೆ. ಅಕ್ಟೋಬರ್ 9, 1946 ರಲ್ಲಿ ಜನಿಸಿರುವ ಮೇಟಿ ಅವರು ಐದು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಬಾರಿ ಗುಳೇದ ಗುಡ್ಡ ಕ್ಷೇತ್ರದಿಂದ ಶಾಸಕರಾಗಿದ್ದರು. ಎರಡು ಬಾರಿ ಬಾಗಲಕೋಟೆ ಕ್ಷೇತ್ರದಿಂದ ಶಾಸಕರಾಗಿ ಸೇವೆ ಸಲ್ಲಿಸಿದ್ದಾರೆ. ಎರಡು ಬಾರಿ ಸಚಿವರಾಗಿದ್ದು, 2016 ರಲ್ಲಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.

ಕಳೆದ ವಾರವಷ್ಟೇ ಸಿಎಂ ಸಿದ್ದರಾಮಯ್ಯ ಆಸ್ಪತ್ರೆಗೆ ಭೇಟಿ ನೀಡಿ ಮೇಟಿಯವರ ಆರೋಗ್ಯ ವಿಚಾರಿಸಿದ್ದರು. ಎಕ್ಸ್ ತಾಣದಲ್ಲಿ ಸಂತಾಪ ಸೂಚಿಸಿರುವ ಸಿಎಂ ಅವರು ಮೈಸೂರಿನಿಂದ ನೇರವಾಗಿ ಜಯನಗರ ಖಾಸಗಿ ಆಸ್ಪತ್ರೆಗೆ ಆಗಮಿಸಿ ಪಾರ್ಥಿವ ಶರೀರಕ್ಕೆ ನಮನ ಸಲ್ಲಿಸಿದರು. ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿದರು.

**ಸಂಸದ ಬೊಮ್ಮಾಯಿ ಸಂತಾಪ:** "ಬಹುದೀರ್ಘ ಕಾಲ ಸಾರ್ವಜನಿಕ ಬದುಕಿನಲ್ಲಿದ್ದ ಮೇಟಿಯವರು ಜನಪರವಾಗಿ, ಕ್ಷೇತ್ರದ ಅಭಿವೃದ್ಧಿಯ ಬಗ್ಗೆಯಷ್ಟೇ ಚಿಂತಿಸುತ್ತಿದ್ದ ಮುತ್ಸದ್ದಿ ನಾಯಕರು. ಅವರ ನಿಧನದಿಂದ ಸಮಾಜ ಬಡವಾಗಿದೆ. ಮೃತರ ಆತ್ಮಕ್ಕೆ ಚಿರಶಾಂತಿ ದೊರಕಲಿ. ಮೇಟಿಯವರ ಕುಟುಂಬಸ್ಥರು ಹಾಗೂ ಅಭಿಮಾನಿಗಳಿಗೆ ಈ ದುಃಖ ಭರಿಸುವ ಶಕ್ತಿ ಸಿಗಲೆಂದು ಪ್ರಾರ್ಥಿಸುತ್ತೇನೆ" ಎಂದು ಮಾಜಿ ಸಚಿವ, ಸಂಸದ ಬಸವರಾಜ ಬೊಮ್ಮಾಯಿ ಸಂತಾಪದ ನುಡಿಗಳನ್ನಾಡಿದ್ದಾರೆ."ಬಾಗಲಕೋಟೆಯ ಹಿರಿಯ ಶಾಸಕರು ಹಾಗೂ ಮಾಜಿ ಸಚಿವರಾಗಿದ್ದ ಎಚ್. ವೈ. ಮೇಟಿ ಅವರು ಅನಾರೋಗ್ಯದಿಂದ ನಿಧನ ಹೊಂದಿರುವ ಸುದ್ದಿ ಕೇಳಿ ದುಃಖವಾಯಿತು. ಅತ್ಯಂತ ಸರಳ ಸಜ್ಜನಿಕೆಯ ವ್ಯಕ್ತಿಯಾಗಿದ್ದ ಅವರು ನನಗೆ ಅತ್ಯಂತ ಆತ್ಮೀಯರಾಗಿದ್ದರು. ಎಂದು" ಎಂದಿದ್ದಾರೆ.

### ಸಿಎಂ ಸೇರಿದಂತೆ ಗಣ್ಯರಿಂದ ಸಂತಾಪ

"ಮಾಜಿ ಸಚಿವರು, ಉತ್ತರ ಕರ್ನಾಟಕ ಭಾಗದ ಹಿರಿಯ ನಾಯಕರು, ಹಾಲಿ ಶಾಸಕರೂ ಆದ ಹೆಚ್.ವೈ.ಮೇಟಿ ಅವರ ನಿಧನವಾರ್ತೆ ನೋವುಂಟುಮಾಡಿದೆ. ಕಳೆದ ಗುರುವಾರವಷ್ಟೇ ಆಸ್ಪತ್ರೆಗೆಭೇಟಿನೀಡಿ,ಅವರಆರೋಗ್ಯವಿಚಾರಿಸಿದ್ದೆ. ಈ ವೇಳೆ ಗುಣಮುಖರಾಗಿ ಮತ್ತೆ ನಮ್ಮನ್ನು ಕೂಡಿಕೊಳ್ಳುತ್ತಾರೆ ಎನ್ನುವ ಭರವಸೆಯಿತ್ತು. ನನ್ನ ಭರವಸೆ, ಹಾರೈಕೆಗಳೆರಡೂ ಹುಸಿಯಾಗಿದೆ" ಎಂದು ಸಿಎಂ ಸಿದ್ದರಾಮಯ್ಯ ಸಂತಪಾ ಸೂಚಿಸಿದ್ದಾರೆ.

"ಬಹುದೀರ್ಘ ಕಾಲ ಸಾರ್ವಜನಿಕ ಬದುಕಿನಲ್ಲಿದ್ದ ಮೇಟಿಯವರು ಜನಪರವಾಗಿ, ಕ್ಷೇತ್ರದ ಅಭಿವೃದ್ಧಿಯ ಬಗ್ಗೆಯಷ್ಟೇ ಚಿಂತಿಸುತ್ತಿದ್ದ ಮುತ್ಸದ್ದಿ ನಾಯಕರು. ಅವರ ನಿಧನದಿಂದ ಸಮಾಜ ಬಡವಾಗಿದೆ. ಮೃತರ ಆತ್ಮಕ್ಕೆ ಚಿರಶಾಂತಿ ದೊರಕಲಿ. ಮೇಟಿಯವರ ಕುಟುಂಬಸ್ಥರು ಹಾಗೂ ಅಭಿಮಾನಿಗಳಿಗೆ ಈ ದುಃಖ ಭರಿಸುವ ಶಕ್ತಿ ಸಿಗಲೆಂದು ಪ್ರಾರ್ಥಿಸುತ್ತೇನೆ" ಎಂದು ಸಿಎಂ ತಿಳಿಸಿದ್ದಾರೆ.



ಮಂಗಳವಾರ ನಿಧನರಾದ ಮಾಜಿ ಸಚಿವ, ಶಾಸಕ ಎಚ್.ವೈ. ಮೇಟಿ ಅವರ ಅಂತಿಮ ದರ್ಶನ ಪಡೆದ ಮುಖ್ಯಮಂತ್ರಿ ಸಿದ್ದರಾಮಯ್ಯ ಕುಟುಂಬದವರಿಗೆ ಸಾಂತ್ವನ ಹೇಳಿದರು.

## ಸಾಲು ಸುದ್ದಿ

### ಭಾರಿ ಗಾತ್ರದ ಹೆಬ್ಬಾವು ರಕ್ಷಣೆ

**ಸಂತೆಮರಹಳ್ಳಿ:** ಸಮೀಪದ ಸಂತೆಮರಹಳ್ಳಿ ಮೋಳೆಯ ಜಮೀನಿನಲ್ಲಿ ಕಾಣಿಸಿಕೊಂಡ ಭಾರಿ ಗಾತ್ರದ ಹೆಬ್ಬಾವನ್ನು ರಕ್ಷಣೆ ಮಾಡಲಾಯಿತು.

ಗ್ರಾಮದ ಕಾಶಿ ಎಂಬುವವರ ಜಮೀನಿನಲ್ಲಿ ಹೆಬ್ಬಾವು ಕಾಣಿಸಿಕೊಂಡಿದ್ದು ಕೂಡಲೇ ಸ್ನೇಕ್ ಮಹೇಶ್ ಅವರಿಗೆ ಕರೆ ಮಾಡಿದ್ದಾರೆ. ಸ್ಥಳಕ್ಕೆ ಬಂದ ಸ್ನೇಕ್ ಮಹೇಶ್ ಜಮೀನಿನಲ್ಲಿದ್ದ 8 ಅಡಿ ಉದ್ದದ ಹೆಬ್ಬಾವನ್ನು ರಕ್ಷಣೆ ಮಾಡಿ ಅರಣ್ಯ ಇಲಾಖೆ ಅಧಿಕಾರಿಗಳ ಸಮ್ಮುಖದಲ್ಲಿ ಕಾಡಿಗೆ ಬಿಟ್ಟರು.

ಇತ್ತೀಚಿನ ದಿನಗಳಲ್ಲಿ ಹೆಬ್ಬಾವುಗಳು ಕಾಡಿನಲ್ಲದೇ ನಾಡಿನಲ್ಲಿಯೂ ಕಂಡುಬರುತ್ತಿವೆ. ಹೆಬ್ಬಾವುಗಳು ನೀರಿನಲ್ಲಿ ತುಂಬಾ ಹೊತ್ತು ಇರುವುದರಿಂದ ಕಾಡಿನಲ್ಲಿ ಜೋರು ಮಳೆಯಾದಾಗ ಹೆಬ್ಬಾವಿನ ಮರಿಗಳನ್ನ ಮಳೆ ನೀರು ಕೊಚ್ಚಿಕೊಂಡು ನಾಲೆಗಳ ಮೂಲಕ ಬಂದಿರುವ ಸಾಧ್ಯತೆಗಳಿವೆ ಎಂದು ಸ್ನೇಕ್ ಮಹೇಶ್ ತಿಳಿಸಿದರು.



### ಕ್ಯಾಂಟರ್ ಡಿಕ್ಕಿ: ಡ್ಯಾನ್ಸರ್ ಸಾವು

**ಬೆಂಗಳೂರು:** ನಿಂತಿದ್ದ ಕಾರಿಗೆ ಕ್ಯಾಂಟರ್ ಡಿಕ್ಕಿ ಹೊಡೆದ ಪರಿಣಾಮ ಡ್ಯಾನ್ಸರ್ ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ನೆಲಮಂಗಲ ತಾಲೂಕಿನ ಪೆಮ್ಮನಹಳ್ಳಿ ಬಳಿ ನಡೆದಿದೆ.

ಸುಧೀಂದ್ರ ಮೃತ ಡ್ಯಾನ್ಸರ್, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲೂಕಿನ ಪೆರ್ಮನಹಳ್ಳಿಯಲ್ಲಿ ಈ ಅಪಘಾತ ಸಂಭವಿಸಿದೆ. ರಸ್ತೆಯಲ್ಲಿ ಕೆಟ್ಟು ನಿಂತ ಕಾರನ್ನು ಡ್ಯಾನ್ಸರ್ ಸುಧೀಂದ್ರ ಪರಿಶೀಲನೆ ಮಾಡುವಾಗ ವೇಗವಾಗಿ ಬಂದ ಕ್ಯಾಂಟರ್ ಡಿಕ್ಕಿ ಹೊಡೆದಿದೆ.

ಪರಿಣಾಮ ಸುಧೀಂದ್ರ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಡ್ಯಾನ್ಸರ್ ಸುದೀಂಧ್ರ ವಿವಿಧ ರಿಯಾಲಿಟಿ ಶೋಗಳಲ್ಲಿ ಭಾಗಿಯಾಗಿದ್ದರು. ದಾಬಸ್ ಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

ಸುಧೀಂದ್ರ ಸೋಮವಾರವಷ್ಟೇ ಹೊಸ ಮಾರುತಿ ಸುಜುಕಿ ಎಕೋ ಕಾರು ಡೆಲಿವರಿ ಪಡೆದಿದ್ದರು. ರಸ್ತೆ ಮಧ್ಯೆ ಕಾರು ಕೆಟ್ಟು ನಿಂತಿದ್ದರಿಂದ ಪರೀಕ್ಷಿಸಲು ಕಾರಿನಿಂದ ಕೆಳಗಿಳಿದ ವೇಳೆ ಕ್ಯಾಂಟರ್ ಲಾರಿ ಡಿಕ್ಕಿ ಹೊಡೆದಿದೆ. ಅಪಘಾತದ ರಭಸಕ್ಕೆ ಸ್ಥಳದಲ್ಲೇ ಸುಧೀಂದ್ರ ಮೃತಪಟ್ಟಿದ್ದಾರೆ. ನೆಲಮಂಗಲ ತಾಲೂಕಿನ ತ್ಯಾಮಗೊಂಡ್ಲು ನಿವಾಸಿ ಸುಧೀಂದ್ರ ಜೀ ಕನ್ನಡದ ಸೈ ಡ್ಯಾನ್ಸ್ ಶೋ ಸೇರಿದಂತೆ ವಿವಿಧ ರಿಯಾಲಿಟಿ ಶೋಗಳಲ್ಲಿ ಭಾಗಿಯಾಗಿದ್ದರು. ಅಲ್ಲದೇ ಡಾಬಸ್ ಪೇಟೆಯಲ್ಲಿ ಡ್ಯಾನ್ಸ್ ಕ್ಲಾಸ್ ನಡೆಸಿ ನೂರಾರು ಯುವಕ, ಯುವತಿಯರಿಗೆ ಮಕ್ಕಳಿಗೆ ಟ್ರೈನಿಂಗ್ ನೀಡುತ್ತಿದ್ದರು.

### ವಿದ್ಯುತ್ ಸ್ಪರ್ಶ: ರೈತ ಸಾವು

**ಮಂಡ್ಯ:** ಜಿಲ್ಲೆಯ ಸಗ್ಯ ಗ್ರಾಮದಲ್ಲಿ ತೆಂಗಿನ ಗರಿಗಳನ್ನು ತೆರವುಗೊಳಿಸುವಾಗ ವಿದ್ಯುತ್ ಸ್ಪರ್ಶಿಸಿ ರೈತ ಸಾವಿಗೀಡಾಗಿರುವ ಘಟನೆ ಸಂಭವಿಸಿದೆ ಎಂದು ಪೊಲೀಸರು ಮಂಗಳವಾರ ತಿಳಿಸಿದ್ದಾರೆ.

ಮಂಡ್ಯ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಅವರ ಪ್ರಕಾರ, ರೈತ ರಮೇಶ್ (38) ಎಂಬುವವರು ತಮ್ಮ ಹೊಲದಲ್ಲಿ ತೆಂಗಿನ ಗರಿಗಳನ್ನು ತೆರವುಗೊಳಿಸುತ್ತಿದ್ದಾಗ ಆಕಸ್ಮಿಕವಾಗಿ 11 ಕೆವಿ ವಿದ್ಯುತ್ ತಂತಿಗಳಿಗೆ ತಗುಲಿವೆ. ಇದರಿಂದ ರಮೇಶ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

# ಕೌಶಲ್ಯ ವಿವಿ ಸ್ಥಾಪನೆಗೆ ಚಿಂತನೆ: ಸಿಎಂ

**ಬೆಂಗಳೂರು:** ನೂತನ ಕೌಶಲ್ಯ ವಿಶ್ವವಿದ್ಯಾಲಯವನ್ನು ಸಂಡೂರಿನಲ್ಲಿ ಸ್ಥಾಪಿಸ ಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಬೆಂಗಳೂರು ಕೌಶಲ್ಯ ಶೃಂಗಸಭೆ ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ಇಂದು ಒಂದು ವಿಶಿಷ್ಟ ಜನಸಂಖ್ಯೆಯ ಹೊರಳು ಹಾದಿಯಲ್ಲಿದೆ.ನಮ್ಮ ಜನಸಂಖ್ಯೆಯ ಶೇ. 60 ಕ್ಕಿಂತ ಹೆಚ್ಚು ಜನರು 35 ವಯೋಮಾನದೊಳಗಿದ್ದಾರೆ. ಮುಂದಿನ ದಶಕದಲ್ಲಿ ಸುಮಾರು 1.2 ಕೋಟಿ ಯುವಕರು ಕಾರ್ಯಪಡೆಯನ್ನು ಪ್ರವೇಶಿಸುತ್ತಾರೆ. ಈ ಯುವಪೀಳಿಗೆಯನ್ನು ಸರಿಯಾದ ಕೌಶಲ್ಯ, ಮನಸ್ಥಿತಿ ಮತ್ತು ಆತ್ಮವಿಶ್ವಾಸದಿಂದ ಸಜ್ಜುಗೊಳಿಸಿದರೆ ಇದು ಅಸಾಧಾರಣ ಅವಕಾಶ. ಉದ್ಯಾನ ನಗರಿ ಎನ್ನುವ ಹೆಗ್ಗಳಿಕೆಯಿಂದ ಸ್ಟಾರ್ಟಪ್ ರಾಜಧಾನಿಯಾಗಿ ರೂಪಾಂತರಗೊಂಡಿರುವ ಬೆಂಗಳೂರು ನಗರ ಈಗ ಭಾರತದ ಕೌಶಲ್ಯ ರಾಜಧಾನಿಯಾಗಿರುವುದು ಹೆಮ್ಮೆಯ ವಿಷಯ ಎಂದರು.

ಕಳೆದ ವರ್ಷದ ಆಯವ್ಯಯದಲ್ಲಿ ಘೋಷಿಸಲಾಗಿದ್ದ ಕರ್ನಾಟಕಕೌಶಲ್ಯಾಭಿವೃದ್ಧಿನೀತಿ2025–32ನ್ನುಇಂದು ಬೆಂಗಳೂರು ಸ್ಕಿಲ್ ಸಮಿಟ್ 2025 ಕಾರ್ಯಕ್ರಮದ ಮೂಲಕ ಕಾರ್ಯರೂಪಕ್ಕೆ ತರಲಾಗುತ್ತಿದೆ. ಈ 7 ವರ್ಷದ ಕಾರ್ಯತಂತ್ರದ ನೀಲನಕ್ಷೆಗೆ 4,432 ಕೋಟಿ ರೂ. ಅನುದಾನದ ಬೆಂಬಲ ನೀಡಲಾಗಿದ್ದು, ಕರ್ನಾಟಕವನ್ನು ಕೌಶಲ್ಯಭರಿತ ಹಾಗೂ ಭವಿಷ್ಯದ ಸವಾಲುಗಳಿಗೆ ಸನ್ನದ್ಧರಾಗಿಸುವುದು ಹಾಗೂ ಕಾರ್ಮಿಕ ಶಕ್ತಿಯ ಜಾಗತಿಕ ಕೇಂದ್ರವನ್ನಾಗಿ ರೂಪಿಸುವುದು ನಮ್ಮ ಉದ್ದೇಶ.2032ಕ್ಕೆಸುಮಾರು30ಲಕ್ಷಯುವಕರಿಗೆಕೌಶಲ್ಯ ತರಬೇತಿ, ಐಟಿಐ ಗಳಲ್ಲಿ ಮಹಿಳೆಯರ ಪ್ರವೇಶವನ್ನು ಶೇ. 33 ಕ್ಕೆ ಹೆಚ್ಚಳ ಹಾಗೂ ಐಎಂಸಿಕೆ ಮೂಲಕ ಜಾಗತಿಕ ಉದ್ಯೋಗಾವಕಾಶಗಳ ವೃದ್ಧಿಯನ್ನು ಸಾಧಿಸುವ ಗುರಿಯನ್ನು ಹೊಂದಿರುವುದಾಗಿ ತಿಳಿಸಿದರು.




ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೌಶಲ್ಯ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಜಾಗತಿಕ ಮಟ್ಟಕ್ಕೆ ಕಾರ್ಮಿಕ ಶಕ್ತಿಯನ್ನು ಸಿದ್ಧಪಡಿಸಲು ಕರ್ನಾಟಕ ಸ್ಕಿಲ್ ಒಲಂಪಿಕ್ಸ್ ಎಂಬ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ಕೌಶಲ್ಯ ಸ್ಪರ್ಧೆಯಲ್ಲಿ 48 ಪದಕಗಳನ್ನು ಪಡೆದು ಭಾರತದಲ್ಲಿ ಕರ್ನಾಟಕ ಎರಡನೇ ಸ್ಥಾನವನ್ನು ಪಡೆದಿದೆ ಹಾಗೂ 4 ಅಂತರಾಷ್ಟ್ರೀಯ ಪದಕಗಳನ್ನು ತನ್ನದಾಗಿಸಿಕೊಂಡಿದೆ. ಐಟಿಐಗಳು ಹಾಗೂ ಜಿಟಿಟಿಸಿಗಳ ಮೂಲಕ ಸುಮಾರು 33,212 ಯುವಕರಿಗೆ ತರಬೇತಿಯನ್ನು ನೀಡಲಾಗಿದ್ದು,. ಶಾಲಾ ಮಕ್ಕಳಿಗೆ 'ನನ್ನ ವೃತ್ತಿ , ನನ್ನ ಆಯ್ಕೆ' ಕಾರ್ಯಕ್ರಮದಡಿ, 35000 ಮಕ್ಕಳಿಗೆ ತರಬೇತಿ ನೀಡಲಾಗಿದೆ. ಈ ವರ್ಷ,ಯೋಜನೆಯನ್ನು 500 ಶಾಲೆಗಳಿಗೆ ವಿಸ್ತರಿಸಿ 2.3 ಲಕ್ಷ ವಿದ್ಯಾರ್ಥಿಗಳಿಗೆ ತರಬೇತಿ ನೀಡುವ ಗುರಿಯಿದೆ ಎಂದರು.

ಬೆಂಗಳೂರು ಕೌಶಲ್ಯ ಶೃಂಗಸಭೆ ಕರ್ನಾಟಕದ ಕೌಶಲ್ಯ ಪಯಣದಲ್ಲಿ ಒಂದು ಮೈಲಿಗಲ್ಲು. ಕರ್ನಾಟಕವನ್ನು ವಿಶ್ವದಲ್ಲೇ ಕೌಶಲ್ಯಗಳಿಗೆ ಹೆಸರಾದ ರಾಜ್ಯವನ್ನಾಗಿಸುವುದು ನಮ್ಮ ಗುರಿ.

5ನೇ ಪುಟಕ್ಕೆ

### ಕಾಂಗ್ರೆಸ್‌ನಿಂದ ಜೆಡಿಎಸ್ ಕಚೇರಿ ತೆರವು

**ಕನಕಪುರ:** ನಗರದ ಚನ್ನಬಸಪ್ಪ ವೃತ್ತ ಸಮೀಪ ವಿವಾದಕ್ಕೀಡಾಗಿದ್ದ ಜೆ.ಡಿ.ಎಸ್ ಪಕ್ಷದ ಕಚೇರಿಯನ್ನು ನ್ಯಾಯಾಲಯದ ಆದೇಶದ ಮೇರೆಗೆ ಕಾಂಗ್ರೆಸ್ ಪಕ್ಷದಿಂದ ತೆರವುಗೊಳಿಸಲಾಯಿತು.



ಕನಕಪುರದ ಅಂಚೆ ಕಚೇರಿ ಬಳಿ ವಿವಾದಕ್ಕೀಡಾಗಿದ್ದ ಜಾಗವನ್ನು ಕಾಂಗ್ರೆಸ್ ಪಕ್ಷದಿಂದ ಅಲ್ಲಿದ್ದ ಕಟ್ಟಡ ತೆರವುಗೊಳಿಸಿರುವುದು.

ಮಂಗಳವಾರ ಸಂಜೆ ಜೆ.ಸಿ.ಬಿ ಯಂತ್ರಗಳಿಂದ ಕಟ್ಟಡವನ್ನು ತೆರವುಗೊಳಿಸಿ ಕಾಂಗ್ರೆಸ್ ಪಕ್ಷದ ಕಟ್ಟಡ ನಿರ್ಮಾಣದ ಶಂಕುಸ್ಥಾಪನೆಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಕಾಂಗ್ರೆಸ್ ಪಕ್ಷದ ಮುಖಂಡರು ಪತ್ರಿಕೆಗೆ ತಿಳಿಸಿದರು.

**ವಿವಾದ:** ಕಳೆದ 30 ವರ್ಷಗಳ ಹಿಂದೆ ಈ ಸ್ಥಳವು ಸಂಸ್ಥಾ ಕಾಂಗ್ರೆಸ್ ಹೆಸರಿನಲ್ಲಿತ್ತು, ಆ ನಂತರದ ದಿನಗಳಲ್ಲಿ ಜನತಾ ಪರಿವಾರದ ವತಿಯಿಂದ ಕಟ್ಟಡ ಕಟ್ಟಿಕೊಳ್ಳಲಾಗಿತ್ತು. ಕಳೆದ 15 ವರ್ಷಗಳ ಹಿಂದೆ ಕಾಂಗ್ರೆಸ್ ಮತ್ತು ಜೆ.ಡಿ.ಎಸ್ ಪಕ್ಷಗಳ ನಡುವೆ ವಾದ ವಿವಾದ ನಡೆದು ಕಟ್ಟಡವನ್ನು ಧ್ವಂಸಗೊಳಿಸಿ ಅಂದು ಜೆ.ಡಿ.ಎಸ್ ಅಧ್ಯಕ್ಷರಾಗಿದ್ದ ಸಿದ್ದಮರಿಗೌಡ ಕನಕಪುರ ಜೆ.ಎಂ.ಎಫ್.ಸಿ ನ್ಯಾಯಾಲಯದ ಮೊರೆ ಹೋಗಿದ್ದರು. ಜೆ.ಡಿ.ಎಸ್ ಪರ ಗೋಪಾಲ್‌ಗೌಡ ಹಾಗೂ ಕಾಂಗ್ರೆಸ್ ಪರ ಕಾಮೇಶ್ ನ್ಯಾಯಾಲಯದಲ್ಲಿ ವಾದ ಮಂಡಿಸಿದ್ದರು. 6 ತಿಂಗಳ ಹಿಂದೆ ನ್ಯಾಯಾಲಯವು ಜೆ.ಡಿ.ಎಸ್ ಅರ್ಜಿಯನ್ನು ವಜಾಗೊಳಿಸಿ ಸಂಸ್ಥಾ ಕಾಂಗ್ರೆಸ್ ಪಕ್ಷದ ಸ್ವತ್ತು ಎಂದು ತೀರ್ಪು ನೀಡಿತ್ತು. ಮಂಗಳವಾರ ಸಂಜೆ ಕಾಂಗ್ರೆಸ್ ಪಕ್ಷದ ವತಿಯಿಂದ ಜಾಗದಲ್ಲಿದ್ದ ಕಾಂಪೌಂಡ್ ಹಾಗೂ ಕಟ್ಟಡವನ್ನು ತೆರವುಗೊಳಿಸಿ ಪಕ್ಷದ ನೂತನ ಕಟ್ಟಡ ಶಂಕುಸ್ಥಾಪನೆಗೆ ಸ್ವಚ್ಛಗೊಳಿಸಿದರು.

# ಅರಸು ಪ್ರತಿಮೆ ಅವಲಕ್ಷಣ...!

**ಮೈಸೂರು:** ಕರ್ನಾಟಕ ಕಂಡ ಮುಂದಾಳು, ಬಡವರು, ಹಿಂದುಳಿದವರು, ದುರ್ಬಲ ವರ್ಗದವರ ಪಾಲಿಗೆ ಹೊಸ ಬೆಳಕು ನೀಡಿದ ಮಾಜಿ ಮುಖ್ಯಮಂತ್ರಿ ದಿ. ಡಿ. ದೇವರಾಜ ಅರಸು ಅವರ ಹೆಸರು ಇಂದಿಗೂ ಜನ ಮಾನಸದಲ್ಲಿ ಹಸಿರಾಗಿದೆ. ಇಂತಹ ಮಹಾನ್ ನಾಯಕನನ್ನು ಸ್ಮರಿಸುವ ಉದ್ದೇಶದಿಂದ ಮೈಸೂರು ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಅನಾವರಣಗೊಂಡಿರುವ ಅರಸರ ಪ್ರತಿಮೆ ಮಾತ್ರ ಅವರನ್ನು ಹೋಲುತ್ತಿಲ್ಲ. ಅಷ್ಟರ ಮಟ್ಟಿಗೆ ಅರಸರ ಪ್ರತಿಮೆಯನ್ನು ಅವಲಕ್ಷಣವಾಗಿ ರೂಪಿಸಿ ಅನಾವರಣಗೊಳಿಸಲಾಗಿದೆ.

ಕಳೆದ ಸೋಮವಾರವಷ್ಟೇ ನಗರದ ನೂತನ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಸಿಎಂ ಸಿದ್ದರಾಮಯ್ಯ ಅವರಿಂದ ಡಿ.ದೇವರಾಜ ಅರಸ್ ಅವರ ಪ್ರತಿಮೆ ಅನಾವರಣಗೊಂಡಿತ್ತು. ಇದಕ್ಕೂ ಕೆಲ ದಿನಗಳ ಹಿಂದೆ ಅರಸರ ಪ್ರತಿಮೆ ಅನಾವರಣ ವಿಳಂಬವಾಗುತ್ತಿದೆ ಎಂದು ಆರೋಪಿಸಿ ಬಿಜೆಪಿ ನಾಯಕರು ಪ್ರತಿಭಟನೆಯನ್ನೂ ನಡೆಸಿದ್ದರು.



ಈ ಹಿನ್ನಲ್ಲೆಯಲ್ಲಿ ಜಿಲ್ಲಾಡಳಿತ ತರಾತುರಿಯಲ್ಲಿ ಪ್ರತಿಮೆ ಅನಾವರಣಕ್ಕೆ ಮುಂದಾಯಿತು.

ಆದರೆ ಅನಾವರಣವಾದ ಪ್ರತಿಮೆಯನ್ನು ಕಂಡು ಮೆಚ್ಚುಗೆ ವ್ಯಕ್ತಪಡಿಸುವ ಬದಲು ಇದು ನಿಜವಾಗಿಯೂ ದೇವರಾಜ ಅರಸು ಅವರ ಪ್ರತಿಮೆಯಾ? ಎನ್ನುವ ಪ್ರಶ್ನೆ ಎಲ್ಲರಿಗೂ ಎದುರಾಯಿತು. ಏಕೆಂದರೆ ಪ್ರತಿಮೆ ಯಾವ ದಿಕ್ಕಿನಿಂದಲೂ ಅರಸರಿಗೆ ಹೋಲಿಕೆ ಆಗುತ್ತಿಲ್ಲ. ಅವರ ವ್ಯಕ್ತಿತ್ವ, ಗಾಂಭೀರ್ಯಕ್ಕೆ ಅದು ತಕ್ಕುದಾದುದಲ್ಲ. ಅರಸರ ಮುಖ ಹೋಲುತ್ತಿಲ್ಲ, ಎಡಗೈ ಉದ್ದ, ಬಲಗೈ ತುಂಡು, ದೇಹದ ಆಕಾರವೂ ವಿಕಾರವಾಗಿ ರಚಿಸಲಾಗಿದೆ. ಇದನ್ನು ರೂಪಿಸಿದ ಶಿಲ್ಪಿ ಯಾರು ? ಇದನ್ನು ನಿರ್ಮಾಣ ಮಾಡಿದ ಶಿಲ್ಪಿ ಕೈಗೆ ಬಂಗಾರದ ಕಡ್ಗ ತೊಡಿಸಬೇಕೆಂದು ವ್ಯಂಗ್ಯವಾಡುತ್ತಿದ್ದಾರೆ. ಎಂದು ನೋಡಿದವರು ಪ್ರಶ್ನಿಸುತ್ತಿದ್ದಾರೆ. ಕನಿಷ್ಠ ಸಂಬಂಧಪಟ್ಟ ಅಧಿಕಾರಿಗಳಾದರೂ ಮುತುವರ್ಜಿ ವಹಿಸಬೇಕಿತ್ತು ಎಂಬ ಮಾತು ಕೇಳಿಬಂದಿದೆ.

ಸ್ವತಃ ಪ್ರತಿಮೆ ಉದ್ಘಾಟನೆ ಮಾಡಿದ ಸಿಎಂ ಸಿದ್ದರಾಮಯ್ಯ ಅವರೇ ಪ್ರತಿಮೆ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದರು. ಅರಸು ಅವರಿಗೂ ಈ ಪ್ರತಿಮೆಗೂ ಹೋಲಿಕೆಯೇ ಇಲ್ಲ ಎಂದು ಸಮಾರಂಭದಲ್ಲಿಯೇ ಹೇಳಿದ್ದರು. ಅರಸು ಅವರ ಮಗಳು ಭಾರತಿ ಅರಸು ಅವರೂ ಕೂಡ ಪ್ರತಿಮೆ ಮೂಡಿ ಬಂದಿರುವ ರೀತಿಯ ಬಗ್ಗೆ ಅಸಮಾಧಾನ ಹೊರಹಾಕಿದ್ದಾರೆ. ಇನ್ನು ಅರಸು ಸಮುದಾಯದ ನಾಯಕರು, ದೇವರಾಜ ಅರಸು ಅವರ ಅಭಿಮಾನಿಗಳು ಕೂಡಲೇ ಮೂರ್ತಿ ಬದಲಾಯಿಸಿ, ಸುಂದರ ಕೆತ್ತನೆಯ ಮೂರ್ತಿಯನ್ನು ಪ್ರತಿಷ್ಠಾಪಿಸಬೇಕು ಎಂದು ಆಗ್ರಹಿಸಿದ್ದಾರೆ. ಒಟ್ಟಾರೆ 1 ಕೋಟಿ 15 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣವಾಗಿರುವ ಪ್ರತಿಮೆಯಲ್ಲಿ ಲೋಪಗಳೇ ಮುನ್ನೆಲೆ ಕಾಯ್ದುಕೊಂಡಿವೆ. ಈ ಮಹಾ ಲೋಪಕ್ಕೆ ಕಾರಣ ಯಾರು ? ಸಾರ್ವಜನಿಕರ ತೆರಿಗೆ ಹಣವನ್ನು ಹೀಗೆಲ್ಲ ವ್ಯಯವಾದರೆ ಜನಕಲ್ಯಾಣ ಹೇಗೆ ಸಾಧ್ಯವಾಗಲಿದೆ ಎಂದು ಸಾರ್ವಜನಿಕರು ಪ್ರಶ್ನಿಸುವಂತಾಗಿದೆ.

ಇನ್ನಾದರೂ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಿ ದೇವರಾಜ ಅರಸು ಅವರ ಪ್ರತಿಮೆಯನ್ನುಸರಿಪಡಿಸಲುಮುಂದಾಗಬೇಕಿದೆ.

ಇದರಲ್ಲಿ ಅಧಿಕಾರಿಗಳ ನಿರ್ಲಕ್ಷ್ಯ ಎದ್ದು ಕಾಣುತ್ತಿದೆ. ಪ್ರತಿಮೆಯನ್ನು ಬದಲಿಸಿ ಸುಂದರವಾದ ಪ್ರತಿಮೆ ನಿರ್ಮಿಸಿ ಪ್ರತಿಷ್ಠಾಪನೆ ಮಾಡಬೇಕು. ಈ ಬಗ್ಗೆ ಸಿಎಂ, ಡಿಸಿಎಂ, ಉಸ್ತುವಾರಿ ಸಚಿವರಿಗೆ ಮನವಿ ಮಾಡುತ್ತೇವೆ. ಸಿಎಂ ಕೂಡ ಅರಸು ಅವರಿಗೂ ಪ್ರತಿಮೆಗೂ ಹೋಲಿಕೆ ಇಲ್ಲ ಎಂದಿದ್ದಾರೆ. ನಮ್ಮ ಮನವಿಗೆ ಸ್ಪಂದಿಸದೇ ಇದ್ದರೆ ಹೋರಾಟ ರೂಪಿಸುತ್ತೇವೆ.

**–ದಿನೇಶ್ ಅರಸು, ಅಧ್ಯಕ್ಷರು, ಕರ್ನಾಟಕ ಅರಸು ಮತ್ತು ರಾಜು ಕ್ಷತ್ರಿಯ ಪ್ರತಿಷ್ಠಾನ**

ಅರಸು ಅವರ ಮಗಳಾದ ಭಾರತಿ ಅರಸು ಅವರು ಮಗಳು ಪ್ರತಿಮೆ ಬಗ್ಗೆ ಬೇಸರ ವ್ಯಕ್ತಪಡಿಸಿದ್ದಾರೆ. ಪ್ರತಿಮೆ ನಿರ್ಮಾಣ, ಪ್ರತಿಷ್ಠಾಪನೆ ವಿಚಾರದಲ್ಲಿ ಜಿಲ್ಲಾಡಳಿತ ನಮ್ಮ ಸಮುದಾಯದ ಯಾರನ್ನೂ ವಿಶ್ವಾಸಕ್ಕೆ ತೆಗೆದುಕೊಂಡಿಲ್ಲ. ತರಾತುರಿಯಲ್ಲಿ ಪ್ರತಿಮೆ ನಿರ್ಮಾಣ ಮಾಡಿದ್ದಾರೆ.

**–ಕೆಂಪರಾಜೇ ಅರಸು, ಕರ್ನಾಟಕ ಅರಸು ಮತ್ತು ರಾಜು ಕ್ಷತ್ರಿಯ ಪ್ರತಿಷ್ಠಾನದ ಜಿಲ್ಲಾಧ್ಯಕ್ಷರು**

## ಸಂಕ್ಷಿಪ್ತ ಸುದ್ದಿ

### 3 ದಿನಗಳ ಅಧ್ಯಯನ ಪ್ರವಾಸ ಕಾರ್ಯಕ್ರಮ

ಮೈಸೂರು: ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳಿಂದಆಯ್ದಪರಿಶಿಷ್ಟಪಂಗಡಸಮುದಾಯದ ಪ್ರತಿನಿಧಿಗಳು ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ತಂಡವು ಕೇರಳ ರಾಜ್ಯದ ಬುಡಕಟ್ಟು ಆಶ್ರಮ ಶಾಲೆಗಳ ಶೈಕ್ಷಣಿಕ ವ್ಯವಸ್ಥೆ ಮತ್ತು ಪರಿಶಿಷ್ಟ ಪಂಗಡದವರ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸಲಾಗುತ್ತಿರುವ ಉತ್ತಮ ಕಾರ್ಯಕ್ರಮಗಳ ಅಧ್ಯಯನಕ್ಕಾಗಿ ನವೆಂಬರ್ 05 ರಿಂದ 07 ರ ವರೆಗೆ 03 ದಿನಗಳ ಅಧ್ಯಯನ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಅಧ್ಯಯನ ಪ್ರವಾಸ ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರಿಸುವ ಮೂಲಕ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ನಿರ್ದೇಶಕರಾದ ಯೋಗೇಶ ಟಿ. ಅವರು ನವೆಂಬರ್ 05 ರಂದು ಬೆಳಗ್ಗೆ 08 ಗಂಟೆಗೆ ಚಾಲನೆ ನೀಡಲಿದ್ದಾರೆ ಎಂದು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಂಗನವಾಡಿಗೆ ಆಯ್ಕೆ: ಆಕ್ಷೇಪಣೆಗಳ ಆಹ್ವಾನ

ಮೈಸೂರು: ಬಿಳಿಗೆರೆ ಯೋಜನಾ ವ್ಯಾಪ್ತಿಯಡಿ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ 01 ಕಾರ್ಯಕರ್ತೆ ಹಾಗೂ 01 ಸಹಾಯಕಿಯರ ಹುದ್ದೆಗಳಿಗೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಹೊರಡಿಸಲಾಗಿದೆ.

ಈ ತಾತ್ಕಾಲಿಕ ಆಯ್ಕೆ ಪಟ್ಟಿಯ ಬಗ್ಗೆ ಆಕ್ಷೇಪಣೆಗಳಿದ್ದಲ್ಲಿ ಅಭ್ಯರ್ಥಿಗಳು ಖುದ್ದಾಗಿ ಅಥವಾ ಲಿಖಿತವಾಗಿ ಅಗತ್ಯ ಸಮರ್ಥನಿಯ ದಾಖಲೆಗಳೊಂದಿಗೆ ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾ ಕಚೇರಿಯ ಕೆಲಸದ ವೇಳೆಯಲ್ಲಿ ನವೆಂಬರ್ 10 ಸಂಜೆ 5.30 ರೊಳಗಾಗಿ ಸಲ್ಲಿಸಬಹುದಾಗಿದ್ದು, ನಂತರ ಸ್ವೀಕೃತವಾಗುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ ಎಂದು ಬಿಳಿಗೆರೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಿಳಿಕೆರೆ ಭಾಗದಲ್ಲಿಂದು ವಿದ್ಯುತ್ ವ್ಯತಯ

ಹುಣಸೂರು: ತಾಲೂಕಿನ ಬಿಳಿಕೆರೆ 66/11 ವಿದ್ಯುತ್ ಉಪ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವುದರಿಂದ ನ.5ರ ಬುಧವಾರಬೆಳಗ್ಗೆ 10ರಿಂದ ಸಂಜೆ6ರವರೆಗೆ ಮುನುಗನಹಳ್ಳಿ,ಬಿಳಿಕೆರೆ,ಹಳೇಬೀಡು,ಗಾಗೇನಹಳ್ಳಿ, ಬೋಳನಹಳ್ಳಿ, ಚಲ್ಲಹಳ್ಳಿ, ರಾಮನಹಳ್ಳಿ, ತೆಂಕನಕೊಪ್ಪಲು ಸೇರಿದಂತೆ ಸುತ್ತಮುತ್ತಲ ಗ್ರಾಮಗಳಲ್ಲಿ ವಿದ್ಯುತ್ ವ್ಯತಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಎಇಇ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

### ಹುಣಸೂರಲ್ಲಿಂದು ಕೆಡಿಪಿ ಸಭೆ

ಹುಣಸೂರು: ತಾಲೂಕು ಮಟ್ಟದ ಕೆಡಿಪಿ ಸಭೆಯು ಶಾಸಕ ಜಿ.ಡಿ.ಹರೀಶ್‌ಗೌಡರ ಅಧ್ಯಕ್ಷತೆಯಲ್ಲಿ ನ.5ರ ಬುಧವಾರ ಬೆಳಗ್ಗೆ 10.30ಕ್ಕೆ ನಗರಸಭೆ ಸಭಾಂಗಣದಲ್ಲಿ ನಡೆಯಲಿದೆ. ಸಭೆಯಲ್ಲಿ ಜಿಲ್ಲಾಧಿಕಾರಿ, ಜಿ.ಪಂ.ಸಿಇಒ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾವಹಿಸುವರೆಂದು ತಾಲೂಕುಪಂಚಾಯಿತಿಕಾರ್ಯನಿರ್ವಹಣಾಧಿಕಾರಿ ಹೊಂಗಯ್ಯ ತಿಳಿಸಿದ್ದಾರೆ.

### ಇಂದು ಚುಂಚಾದ್ರಿ ಕ್ರೀಡೋತ್ಸವ

ಹುಣಸೂರು: ಚೂರು ಸುದ್ದಿ ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ವತಿಯಿಂದ ಹುಣಸೂರು ಬಿಜಿಎಸ್ ವಿದ್ಯಾ ಸಂಸ್ಥೆ ಆವರಣದಲ್ಲಿ 2025-26ನೇ ಸಾಲಿನ ಜಿಲ್ಲಾ ಮಟ್ಟದ 28ನೇ ಚುಂಚಾದ್ರಿ ಕ್ರೀಡೋತ್ಸವವನ್ನು ನ.5ರ ಬುಧವಾರ ಬೆಳಗ್ಗೆ 9ಕ್ಕೆ ಆಯೋಜಿಸಲಾಗಿದ್ದು, ಶಾಲಾ ಆವರಣದಲ್ಲಿ ನಡೆಯುವ ಕ್ರೀಡಾಕೂಟವು ಸೋಮೇಶ್ವನಾಥಸ್ವಾಮಿಜಿಯವರ ನೇತೃತ್ವದಲ್ಲಿ ನಡೆಯಲಿದ್ದು, ಶಾಸಕ ಜಿ.ಡಿ. ಹರೀಶ್‌ಗೌಡ ಕ್ರೀಡಾಕೂಟ ಉದ್ಘಾಟಿಸಲಿದ್ದಾರೆಂದು ಪ್ರಾಚಾರ್ಯರಾದ ಕುಮುದ ತಿಳಿಸಿದ್ದಾರೆ.

# ಸರ್ಕಾರಿ ಶಾಲೆ, ಕಚೇರಿಗಳೇ ಇವನ ಟಾರ್ಗೆಟ್..!

## ಪಿರಿಯಾಪಟ್ಟಣ ಪೊಲೀಸರಿಂದ ಕಾರ್ಯಾಚರಣೆ; ಶೋಯಬ್ ಬಂಧನ

ಪಿರಿಯಾಪಟ್ಟಣ: ಪಿರಿಯಾಪಟ್ಟಣ ಸೇರಿದಂತೆ ಜಿಲ್ಲೆಯ ವಿವಿಧಡೆ ಸರ್ಕಾರಿ ಶಾಲೆಗಳಲ್ಲಿ ಕಂಪ್ಯೂಟರ್ ಮತ್ತು ಪ್ರಿಂಟರ್ ಗಳನ್ನು ಕಳವು ಮಾಡುತ್ತಿದ್ದ ಆರೋಪಿಯನ್ನು ಪಿರಿಯಾಪಟ್ಟಣ ಪೊಲೀಸರು ಬಂಧಿಸಿದ್ದಾರೆ.

ಕೊಡಗು ಜಿಲ್ಲೆ ವಿರಾಜಪೇಟೆಯ ನಿವಾಸಿ ಮಹಮ್ಮದ್ ಶೋಯಬ್ ಬಂಧಿತ ಆರೋಪಿ. ಅ. 23 ರಂದು ಪಿರಿಯಾಪಟ್ಟಣ ತಾಲೂಕಿನ ಪಂಚವಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ರಾತ್ರಿ ವೇಳೆ ಅಪರಿಚಿತರು ಶಾಲೆಯ ಕೊಠಡಿಗೆ ಹಾಕಿದ್ದ ಬೀಗವನ್ನು ಮುರಿದು ಕೊಠಡಿಯಲ್ಲಿದ್ದ ಕಂಪ್ಯೂಟರ್ ಮತ್ತು ಪ್ರಿಂಟರ್‌ಗಳನ್ನು ಕಳವು ಮಾಡಲಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ಶಾಲೆಯ ಮುಖ್ಯ ಶಿಕ್ಷಕ ಕೆ.ಎಸ್. ದೇವರಾಜ್ ಪಿರಿಯಾಪಟ್ಟಣದ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು.

ದೂರು ದಾಖಲಿಸಿಕೊಂಡ ಪಿರಿಯಾಪಟ್ಟಣ ಪೊಲೀಸರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ ಮತ್ತು ಡಿವೈಎಸ್ಪಿ ಗೋಪಾಲಕೃಷ್ಣ ರವರ ಮಾರ್ಗದರ್ಶನದಲ್ಲಿ ವಿಶೇಷ ತನಿಖಾ ತಂಡ ರಚಿಸಲಾಗಿತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸೂಕ್ತ ಮಾಹಿತಿ ಸಂಗ್ರಹಿಸಿದ ಪೊಲೀಸರು ಶಂಕಿತ ಆರೋಪಿ ಮಹಮ್ಮದ್ ಶೋಯಬ್ ನನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದಾಗ ತಾಲೂಕಿನ ಪಂಚವಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲೆ, ಪಟ್ಟಣದ ಸರ್ಕಾರಿ ಬಾಲಕಿಯರ ಪ್ರೌಢಶಾಲೆ, ರಾವಂದೂರಿನ ಕರ್ನಾಟಕ ಪಬ್ಲಿಕ್ ಸ್ಕೂಲ್, ಹುಣಸೂರಿನ ಬಿಇಒ ಕಚೇರಿ, ಹುಣಸೂರು ತಾಲೂಕಿನ ಕಟ್ಟೆ ಮಳವಾಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಇಲವಾಲದ ಸರ್ಕಾರಿ ಪದವಿ ಪೂರ್ವ




ಸರ್ಕಾರಿ ಶಾಲೆಗಳಲ್ಲಿ ಕಂಪ್ಯೂಟರ್ ಮತ್ತು ಪ್ರಿಂಟರ್ ಗಳನ್ನು ಕಳವು ಮಾಡುತ್ತಿದ್ದ ಆರೋಪಿಯನ್ನು ಬಂಧಿಸಿದ ಪಿರಿಯಾಪಟ್ಟಣ ಪೊಲೀಸರು ಆರೋಪಿಯಿಂದ ಕಳವು ವಸ್ತುಗಳನ್ನು ವಶಪಡಿಸಿಕೊಂಡಿರುವುದು.

ಕಾಲೇಜು ಮತ್ತು ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆಯ ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿಯಲ್ಲಿ ನಡೆದಿದ್ದ ಕಳವು ಪ್ರಕರಣ ಸೇರಿದಂತೆ ಒಟ್ಟು ಎಂಟು ಪ್ರಕರಣಗಳನ್ನು ಭೇದಿಸಿ ಬಂಧಿತ ಆರೋಪಿಯಿಂದ ಅಂದಾಜು 5.10 ಲಕ್ಷ ರೂ. ಮೌಲ್ಯದ 9 ಕಂಪ್ಯೂಟರ್ ಗಳು, 4 ಪ್ರಿಂಟರ್ ಗಳು, 3 ಮಾನಿಟರ್ ಗಳು, 1 ಟಿವಿ, 2 ಯುಪಿಎಸ್, 4 ಸಿಪಿಯು, ಕೀಬೋರ್ಡ್ ಗಳು ಮತ್ತು 1 ಬಯೋಮೆಟ್ರಿಕ್ ಉಪಕರಣಗಳನ್ನು ವಶಪಡಿಸಿಕೊಂಡಿದ್ದಾರೆ. ಬಂಧಿತ ಆರೋಪಿಯನ್ನು ನ್ಯಾಯಾಂಗಬಂಧನಕ್ಕೆನೀಡಿದ್ದು,ಕಾರ್ಯಚರಣೆಯಲ್ಲಿ ಪಿರಿಯಾಪಟ್ಟಣ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಗೋವಿಂದರಾಜು, ಪಿಎಸ್ ಐ ಬಿ.ಎಚ್.ಜಗದೀಶ್, ಪೊಲೀಸ್ ಅಪರಾಧ ಸಿಬ್ಬಂದಿಗಳಾದ ಕೆ.ಎಸ್. ಲಿಂಗರಾಜಪ್ಪ, ಮಧುಕುಮಾರ್, ಬಸವರಾಜು, ಈರಣ್ಣ, ಎನ್.ಸಿ.ಸಂಜಯ್, ಅನಿಲ್, ದರ್ಶನ್ ಭಾಗವಹಿಸಿದ್ದರು.



ಶಿಂಡೇನಹಳ್ಳಿ ಹಾಲು ಉತ್ಪಾದಕರ ಸಂಘದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳು ವಿಜಯ ಸಾಧಿಸಿದ್ದಾರೆ. ಮಾದೇವ ಅವರು ಅಧ್ಯಕ್ಷರಾಗಿ, ಉಮಾ ಅವರು ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಬಸವೇಗೌಡ, ಕರೀಗೌಡ, ಮಾಲೇಗೌಡ, ಈರಣ್ಣ, ಬೀರೇಗೌಡ, ಬನ್ನಮ್ಮ, ಪುಟ್ಟಮ್ಮ, ಗುರುವಮ್ಮ ಅವರು ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ. ನೂತನ ಆಡಳಿತ ಮಂಡಳಿ ಸದಸ್ಯರನ್ನು ಜೆಡಿಎಸ್ ಮುಖಂಡರಾದ ಯತೀಶ್ ಕುಮಾರ್ ನೇತೃತ್ವದಲ್ಲಿ ಅಭಿನಂದಿಸಲಾಯಿತು.

# ಬಾಡಿಗೆ ಮನೆ ಕೇಳುವ ನೆಪದಲ್ಲಿ ದರೋಡೆ; ಮಹಿಳೆ ಗಂಭೀರ

ನಂಜನಗೂಡು: ಮನೆ ಬಾಡಿಗೆಗೆ ಕೇಳುವ ನೆಪದಲ್ಲಿ ಒಂಟಿ ಮಹಿಳೆ ಇದ್ದ ಮನೆಗೆ ನುಗ್ಗಿದ ದುಷ್ಕರ್ಮಿಗಳು ಮಹಿಳೆ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ ಚಿನ್ನಾಭರಣ ಕಳವು ಮಾಡಿದ್ದಾರೆ.

ಪಟ್ಟಣದ ಕನ್ನಿಕಾ ಪರಮೇಶ್ವರಿ ಲೇಔಟ್ ಸಾಯಿ ಬಾಬಾ ಮಂದಿರದ ಮುಂಭಾಗದ ಮನೆಯೊಂದರಲ್ಲಿ ಈ ಘಟನೆ ನಡೆದಿದೆ. ದಾಕ್ಷಾಯಿಣಿ (65) ಗಂಭೀರವಾಗಿ ಗಾಯಗೊಂಡಿದ್ದಾರೆ.



ದಾಕ್ಷಾಯಿಣಿ ಅವರ ಪುತ್ರ ದೇವನೂರು ಗಿರೀಶ್ ಶ್ರೀಗುರು ಮಲ್ಲೇಶ್ವರ ಪ್ರೌಢಶಾಲೆಯಲ್ಲಿ ಶಿಕ್ಷಕರಾಗಿದ್ದು, ಕೆಲಸಕ್ಕೆ ಹೋಗಿದ್ದರು. ಮನೆಯಲ್ಲಿ ಒಂಟಿಯಾಗಿದ್ದ ದಾಕ್ಷಾಯಿಣಿ ಅವರನ್ನು ಆರೋಪಿಗಳು ಮನೆ ಬಾಡಿಗೆ ಪಡೆಯುವ ನೆಪದಲ್ಲಿ ಮಾತನಾಡಿಸಿದ್ದಾರೆ. ಈ ವೇಳೆ ಮಗ ಗಿರೀಶ್ ಬಂದು ಮಾತನಾಡುತ್ತಾರೆ ಎಂದು ದಾಕ್ಷಾಯಿಣಿ ಅವರು ಹೇಳಿದ್ದಾರೆ. ಆದರೆ ದುಷ್ಕರ್ಮಿಗಳು ಈಗ ಮನೆ ನೋಡಿ ಹೋಗುತ್ತೇವೆ. ಸಂಜೆ ಬಂದು ನಿಮ್ಮ ಮಗನ ಜೊತೆಗೆ ಮಾತನಾಡುತ್ತೇವೆ ಎಂದಿದ್ದಾರೆ. ಇದರಿಂದ ದಾಕ್ಷಾಯಿಣಿ ಅವರು ಒಳಗೆ ಕರೆದು ಮನೆ ತೋರಿಸುವಾಗಿ ಈ ಘಟನೆ ನಡೆದಿದೆ. ಏಕಾಏಕಿ ಕಬ್ಬಿಣದ ರಾಡ್‌ನಿಂದಹಲ್ಲೆನಡೆಸಿದದುಷ್ಕರ್ಮಿಗಳುಕುತ್ತಿಗೆಯಲ್ಲಿದ್ದ80ಗ್ರಾಂಚಿನ್ನದ ಸರವನ್ನು ಕಿತ್ತುಕೊಂಡು ಪರಾರಿಯಾಗಿದ್ದಾರೆ. ಮಹಿಳೆ ಗಂಭೀರವಾಗಿ ಗಾಯಗೊಂಡಿದ್ದಾರೆ. ಮನೆ ನೋಡಲು ಹೋದ ಅಪರಿಚಿತರು ಹೊರಗೆ ಬಂದು ತುಂಬಾ ಹೊತ್ತಾದರೂ ದಾಕ್ಷಾಯಿಣಿ ಅವರು ಹೊರಗೆ ಬಾರದೆ ಇರುವುದನ್ನು ಗಮನಿಸಿದ ಅಕ್ಕಪಕ್ಕದ ಮನೆಯವರು ಒಳಗೆ ಹೋಗಿ ನೋಡಿದಾಗ ಅರೆಪ್ರಜ್ಞಾ ಸ್ಥಿತಿಯಲ್ಲಿ ಬಿದ್ದಿದ್ದರು. ಗಾಯಾಳುವನ್ನು ಮೈಸೂರಿನ ಖಾಸಗಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲು ಮಾಡಲಾಗಿದೆ. ಸ್ಥಳಕ್ಕೆ ಬಂದಡಿವೈಎಸ್‌ಪಿರಘುನೇತೃತ್ವದಪೊಲೀಸರತಂಡಮಧ್ಯರಾತ್ರಿವರೆಗೂ ಪರಿಶೀಲನೆ ನಡೆಸಿ, ಮಾಹಿತಿಗಳನ್ನ ಕಲೆ ಹಾಕಿದ್ದಾರೆ. ಬೆರಳಚ್ಚು ತಜ್ಞರು ಹಾಗೂ ಶ್ವಾನ ದಳ ಕೂಡ ಆಗಮಿಸಿ, ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ನಂಜನಗೂಡು ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಾಣೆಯಾದ ವ್ಯಕ್ತಿ ಪತ್ತೆಗೆ ಮನವಿ

ಮೈಸೂರು: ಸುಮಾರು 31 ವರ್ಷದ ಎದ್ದುಲ ಸುಗ್ರೀವ ಎಂಬುವವರು ಕಾಣೆಯಾಗಿದ್ದು, ವಿ.ವಿ ಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



**ಚಹರೆ:** ಎದ್ದುಲ ಸುಗ್ರೀವ, ಸುಮಾರು 31 ವರ್ಷ ವಯಸ್ಸಾಗಿದ್ದು, 5.5 ಅಡಿ ಎತ್ತರ, ಸಾದಾರಣ ಮೈ ಕಟ್ಟು, ಎಣ್ಣೆಗೆಂಪು ಮೈ ಬಣ್ಣ, ಕೋಲು ಮುಖ, ಕಪ್ಪು ಕೂದಲು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ಬಿಳಿ ಬಣ್ಣದ ಶರ್ಟ್, ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ. ಕಾಣೆಯಾದ ವ್ಯಕ್ತಿಯ ಬಗ್ಗೆ ಮಾಹಿತಿ ಕಂಡುಬಂದಲ್ಲಿ ವಿ.ವಿ ಪುರಂ ಪೊಲೀಸ್ ಠಾಣೆಯ ದೂ.ಸಂ: 0821-2418314, ಪೊಲೀಸ್ ನಿರೀಕ್ಷಕರ ದೂ.ಸಂ:9480802238 ನ್ನು ಸಂಪರ್ಕಿಸಬಹುದಾಗಿದೆ ಎಂದು ವಿ.ವಿ ಪುರಂ ಪೊಲೀಸ್ ಠಾಣೆಯ ಠಾಣಾಧಿಕಾರಿಗಳು ತಿಳಿಸಿದ್ದಾರೆ.

## ನಿರುದ್ಯೋಗಿಗಳು ಯುವನಿಧಿ ಯೋಜನೆ ಸದುಪಯೋಗ ಪಡೆದುಕೊಳ್ಳಿ




ಮೈಸೂರು: ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಲ್ಲಿ ಒಂದಾದ ಯುವ ನಿಧಿ ಕಾರ್ಯಕ್ರಮವು ನಿರುದ್ಯೋಗಿಗಳ ಆಶಾಕಿರಣವಾಗಿದ್ದು, ಈ ಯೋಜನೆಯಲ್ಲಿ ನೋಂದಾಯಿಸಿಕೊಂಡು ಹಣ ಪಡೆಯುತ್ತಿರುವ ಪದವಿಧರರು ಹಾಗೂ ಡಿಪ್ಲೋಮದಾರರ ನಿರುದ್ಯೋಗ ಅಭ್ಯರ್ಥಿಗಳು ಯುವ ನಿಧಿ ಕಾರ್ಯಕ್ರಮದ ಅಡಿಯಲ್ಲಿ ಪದವಿಧರರಿಗೆ ಮಾಸಿಕ 3,000 (ಮೂರು ಸಾವಿರ ರೂಪಾಯಿಗಳು ಮಾತ್ರ) ಹಾಗೂ ಡಿಪ್ಲೋಮದಾರರುಗಳಿಗೆ ಮಾಸಿಕ 1,500 (ಒಂದು ಸಾವಿರದಐದು ನೂರು ರೂಪಾಯಿಗಳು)ಗಳನ್ನು ಸರ್ಕಾರದ ವತಿಯಿಂದ ನಿಡುತ್ತಲಿದ್ದು, ಇದರ ಸದುಪಯೋಗವನ್ನು ಜಿಲ್ಲೆಯ ಸಮಸ್ತ ನಿರುದ್ಯೋಗ ಅಭ್ಯರ್ಥಿಗಳು ಪಡೆಯಬೇಕಾಗಿ ಕೋರಲಾಗಿದೆ.

ಈಗಾಗಲೇ ಅರ್ಜಿ ಸಲ್ಲಿಸಿ ಯುವನಿಧಿ ಯೋಜನೆಯ ಹಣ ಪಡೆಯುತ್ತಿರುವ ಫಲಾನಿಭವಿಗಳು ಸ್ವಯಂ ಘೋಷಣೆಯನ್ನು ಪ್ರತಿ ತ್ರೈಮಾಸಿಕ ಬದಲಾಗಿ ಮಾಸಿಕವಾಗಿ ನವೆಂಬರ್ ತಿಂಗಳಿಂದ ಪ್ರತಿ ತಿಂಗಳಿನ 1 ರಿಂದ 25 ರೊಳಗೆ ಸ್ವಯಂ ಘೋಷಣೆಯನ್ನು ಸೇವಾ ಸಿಂಧು ಜಾಲತಾಣ https://sevasindhuservice.karnataka.gov.in ಮೂಲಕ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ ಎಂದು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಡಿ.ಎಂ ರಾಣಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಗಲಿದೆ ಗ್ರಾ.ಪಂ. ಸದಸ್ಯ ಎಂ.ಎಸ್.ಚಂದ್ರಶೇಖರ್‌ರಿಗೆ ನಮನ

ಹುಣಸೂರು: ಇತ್ತೀಚೆಗೆ ಅಪಘಾತದಲ್ಲಿ ಸಾವನ್ನಪ್ಪಿದ ತಾಲೂಕಿನ ಮೂಕನಹಳ್ಳಿ ಗ್ರಾ.ಪಂ. ಸದಸ್ಯ ಎಂ.ಎಸ್.ಚಂದ್ರಶೇಖರ್‌ರಿಗೆ ತಾಲೂಕು ಗ್ರಾಮ ಪಂಚಾಯಿತಿ ಸದಸ್ಯರ ಒಕ್ಕೂಟದ ವತಿಯಿಂದ ಶ್ರದ್ದಾಂಜಲಿ ಸಲ್ಲಿಸಿಸಲಾಯಿತು.

ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಗಣ್ಯರು ಎಂ.ಎಸ್. ಚಂದ್ರಶೇಖರ್‌ರವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಈ ವೇಳೆ ತಾ.ಪಂ.ಇಒ ಹೊಂಗಯ್ಯ ಮಾತನಾಡಿ, ಚಂದ್ರಶೇಖರ್ ಗ್ರಾ.ಪಂ.ಅಧ್ಯಕ್ಷ-ಉಪಾಧ್ಯಕ್ಷರಾಗಿದ್ದವರು, ಪ್ರಸ್ತುತ ಸದಸ್ಯರಾಗಿ ಉತ್ತಮ ಕೆಲಸ ಮಾಡುತ್ತಿದ್ದರು. ಅವರಿಲ್ಲದಿದ್ದರೂ ಅವರ ಕೆಲಸದ ಮೂಲಕ ಎಲ್ಲರ ಮನಗಳಲ್ಲೂ ಇದ್ದಾರೆ ಎಂದರು.

ರೈತ ಸಂಘದ ಜಿಲ್ಲಾಧ್ಯಕ್ಷ ಹೊಸೂರು ಕುಮಾರ್ ಮಾತನಾಡಿ, ಎಲ್ಲರೊಂದಿಗೆ ಪ್ರೀತಿ ವಿಶ್ವಾಸದಿಂದಿದ್ದ ಚಂದ್ರಶೇಖರ್ ತಂದೆ ಮಾಜಿ ಪ್ರಧಾನ ಶೆಟ್ಟಿ ಗೌಡರಂತೆ ಉತ್ತಮ ಹೆಸರು ಗಳಿಸಿದ್ದರು. ಭವಿಷ್ಯದ ರಾಜಕಾರಣಿಯಾಗಿದ್ದರು ಎಂದರು.

ನಗರ ಕಾಂಗ್ರೆಸ್ ಅಧ್ಯಕ್ಷ ರವಿಪ್ರಸನ್ನ ಮಾತನಾಡಿ, ಚಂದ್ರಶೇಖರ್ ನಮ್ಮೂರಿನ ಪ್ರಗತಿಗೆ ಶ್ರಮಿಸಿದವರು, ಪಕ್ಷಾತೀತವಾಗಿದ್ದವರು. ಎಲ್ಲರೊಡನೆ ಆತ್ಮೀಯವಾಗಿ ಬೆರೆಯುತ್ತಿದ್ದ ಸ್ನೇಹಜೀವಿ ಎಂದು ಬಣ್ಣಿಸಿದರು.



ಹುಣಸೂರು ತಾಲೂಕು ಮೂಕನಹಳ್ಳಿ ಗ್ರಾ.ಪಂ.ಸದಸ್ಯ ಚಂದ್ರಶೇಖರ್ ಸಾವಿನ ಹಿನ್ನೆಲೆಯಲ್ಲಿ ಶ್ರದ್ದಾಂಜಲಿ ಸಲ್ಲಿಸಿದ ಗಣ್ಯರು.

ಜಿಲ್ಲಾ ಗ್ರಾಮ ಪಂಚಾಯಿತಿ ಸದಸ್ಯರ ಒಕ್ಕೂಟದ ಅಧ್ಯಕ್ಷ ನಾಗರಾಜ್ ಒಕ್ಕೂಟವು ನೊಂದ ಕುಟುಂಬಕ್ಕೆ ಆಸರೆಯಾಗಿ ನಿಲ್ಲಲಿದ್ದೇವೆ ಎಂದರು.

ಒಕ್ಕೂಟದ ತಾಲೂಕು ಅಧ್ಯಕ್ಷ ರಮೇಶ್, ಡೇರಿ ಅಧ್ಯಕ್ಷ ಎಂ.ಕೆ.ವಾಸೇಗೌಡ, ರೈತ ಸಂಘದ ಪ್ರಧಾನ ಕಾರ್ಯದರ್ಶಿ ರಾಮೇಗೌಡ, ಧನಂಜಯ, ಸಂಪನ್ಮೂಲ ವ್ಯಕ್ತಿ ಹುಣಸೂರು ರಾಜ, ಗ್ರಾ.ಪಂ.ಸದಸ್ಯರಾದ ರಾಮೇಗೌಡ, ಪ್ರೇಮಾ ಗುರುರಾಜ್, ಸ್ವಾಮಿ ಬೋವಿ, ನೀಲಮ್ಮ ಶಿವಣ್ಣ, ಸುಶ್ಮಿತಾ, ಕಿರಿಜಾಜಿ ಮಹದೇವ್, ಮುಖಂಡರಾದ ಯ.ದೊಡ್ಡತಮ್ಮೇಗೌಡ, ವೀರಭದ್ರೇಗೌಡ, ಕಿರಿಜಾಜಿ ಗಜೇಂದ್ರ, ಕಣಗಾಲು ಮಲ್ಲೇಶ್, ದಿ.ಚಂದ್ರಶೇಖರ್ ಸಹೋದರ ನಟರಾಜ್, ಪುತ್ರ ಇಮೇಶ್, ಪಿಡಿಒಗಳಾದ ಶ್ರೀಶೈಲ, ಮಹದೇವಸ್ವಾಮಿ ಸೇರಿದಂತೆ ಅನೇಕರು ಪುಷ್ಪನಮನ ಸಲ್ಲಿಸಿದರು.

## 30 ತಿಂಗಳಿನಿಂದ ಸಂಬಳವಿಲ್ಲ..!



ಹುಣಸೂರು ತಾಲೂಕು ಕೊತ್ತೆಗಾಲ ಗ್ರಾ.ಪಂ.ನ ಪೌರಕಾರ್ಮಿಕ ಹರೀಶ್‌ರೊಂದಿಗೆ ಕೊಳಗಟ್ಟ ಕೃಷ್ಣರವರು ತಾ.ಪಂ.ಇಒ ಹೊಂಗಯ್ಯರಿಗೆ ಮನವಿ ಸಲ್ಲಿಸಿದರು.

ಹುಣಸೂರು: ತಾಲೂಕಿನ ಕೊತ್ತೇಗಾಲ ಗ್ರಾಮ ಪಂಚಾಯಿತಿಯ ಪೌರಕಾರ್ಮಿಕ ಹರೀಶ್ ಎಂಬಾತನಿಗೆ ಕಳೆದ 30ತಿಂಗಳಿನಿಂದ ಸಂಬಳ ನೀಡಿಲ್ಲವೆಂದು ಆರೋಪಿಸಿ ಡಿ.ಜಿ.ಸಾಗರ್ ಬಣದ ದಸಂಸ ಜಿಲ್ಲಾ ಸಂಚಾಲಕ ಕೊಳಗಟ್ಟ ಕೃಷ್ಣ ತಾ.ಪಂ.ಇಒ ಹೊಂಗಯ್ಯರಿಗೆ ಮನವಿ ಸಲ್ಲಿಸಿದ್ದಾರೆ.

ಕೊತ್ತೆಗಾಲ ಗ್ರಾ.ಪಂ.ನಲ್ಲಿ ಐದು ವರ್ಷಗಳಿಂದ ಕೆಲಸ ಮಾಡುತ್ತಿದ್ದ ಪೌರಕಾರ್ಮಿಕ ಹರೀಶ್‌ಗೆ ಕಳೆದ 30ತಿಂಗಳಿನಿಂದ ಸಂಬಳವಿಲ್ಲದೆ ಕೆಲಸ ಮಾಡುತ್ತಿದ್ದು, ಹಲವಾರು ಬಾರಿ ಪಿಡಿಓರಿಗೆ ಮನವಿ ಮಾಡಿದರೂ ಗ್ರಾ.ಪಂ.ಆಡಳಿತ ಮಂಡಳಿ, ಪಿಡಿಓ ಮಂಜುನಾಥ್ ಈ ಬಗ್ಗೆ ನಿರ್ಲಕ್ಷ ತೋರಿದ್ದಾರೆ.

ಸಂಬಳವಿಲ್ಲದೆ ಅವರ ಕುಟುಂಬ ಸಂಕಷ್ಟದಲ್ಲಿದೆ. ತಕ್ಷಣವೇ ಸಂಬಳ ಬಿಡುಗಡೆಗೊಳಿಸಬೇಕು. ಅನ್ಯಾಯ ಮಾಡಿರುವವರ ವಿರುದ್ದ ಎಸ್‌ಸಿ-ಎಸ್.ಟಿ.ಕಾಯ್ದೆಯಡಿ ಪ್ರಕರಣ ದಾಖಲಿಸಬೇಕು. ಇಲ್ಲವೇ ಜಿ.ಪಂ.ಸಿಇಒ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದೆಂದು ಎಚ್ಚರಿಸಿದರು.

# ಸೇವ್ ಕಬಿನಿ ತಂಡದಿಂದ ಅಕ್ರಮ ರೆಸಾರ್ಟ್ ಪಟ್ಟಿ ಬಿಡುಗಡೆ

## ಪತ್ರಿಕಾಗೋಷ್ಠಿ ನಡೆಸಿ ಗಂಭೀರ ಆರೋಪ ಮಾಡಿದ ಹೊನ್ನೂರು ಪ್ರಕಾಶ್, ವಕೀಲ ರವಿಕುಮಾರ್

ಮೈಸೂರು: ಒಂದು ಕಡೆ ಎಚ್.ಡಿ.ಕೋಟೆ ಭಾಗದಲ್ಲಿ ಸಾಲು ಸಾಲು ಮಾನವ-ಪ್ರಾಣಿ ಸಂಘರ್ಷ ಆಗುತ್ತಿದೆ. ಇದರಿಂದ ರೈತರಲ್ಲಿ ಕ್ಷಡಂಚಿನ ಭಾಗದ ಜನರಲ್ಲಿ ಆತಂಕ ಮೂಡಿದ್ದರೆ, ತಕ್ಷಣ ಸೂಕ್ತ ಕ್ರಮ ಕೈಗೊಳ್ಳಿ ಎನ್ನುವ ಒತ್ತಯವೂ ಕೇಳಿ ಬರುತ್ತಿದೆ. ಮತ್ತೊಂದು ಕಡೆ ಅಕ್ರಮ ರೆಸಾರ್ಟ್‌ಗಳ ಸಂಖ್ಯೆ ಹೆಚ್ಚುತ್ತಿರುವ್ಯದರಿಂದಲೇ ಈ ರೀತಿ ಆಗುತ್ತಿದೆ ಎನ್ನುವ ಆರೋಪಗಳೂ ಕೇಳಿ ಬರುತ್ತಿವೆ.

ಈ ಸಂಬಂಧ ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ರೈತ ಮುಖಂಡ ಹೊನ್ನೂರು ಪ್ರಕಾಶ್ ಮತ್ತು ವಕೀಲ ರವಿಕುಮಾರ್ ಅವರು ಅಕ್ರಮ ರೆಸಾರ್ಟ್‌ಗಳ ಪಟ್ಟಿ ಬಿಡುಗಡೆ ಮಾಡಿದ್ದು, ಇವುಗಳನ್ನು ಮುಚ್ಚುವಂತೆ ಅರಣ್ಯ ಇಲಾಖೆಗೆ ಒತ್ತಾಯಿಸಿದ್ದಾರೆ.

ಕಬಿನಿ ಹಿನ್ನೀರಿನಲ್ಲಿ ರೆಸಾರ್ಟ್ ಮಾಡಿರೋದೆ ಅಕ್ರಮ. ಅದರಲ್ಲೂ ಕೂಡ ಯಾವುದೇ ಲೈಸೆನ್ಸ್ ಇಲ್ಲದೆ ಅನುಮತಿ ಪಡೆಯದೇ ರೆಸಾರ್ಟ್ ಮಾಡಿದ್ದಾರೆ. ಯಾವ ಇಲಾಖೆಗಳಿಂದಲೂ ಕೂಡ ಅನುಮತಿ ಪಡೆದಿಲ್ಲ. ಅನಧಿಕೃತ ರೆಸಾರ್ಟ್ ಗಳಿಗೆ ಅಕ್ರಮವಾಗಿ ಅನುಮತಿ ಕೊಟ್ಟಿರುವ ಅಧಿಕಾರಿಗಳ ವಿರುದ್ಧ ಕ್ರಮ ಆಗಬೇಕು ಎಂದು ರೈತ ಮುಖಂಡ ಹೊನ್ನೂರು ಪ್ರಕಾಶ್ ಒತ್ತಾಯಿಸಿದ್ದಾರೆ.

ವಕೀಲ ರವಿಕುಮಾರ್ ಮಾತನಾಡಿ, ಕಬಿನಿ, ನಾಗರಹೊಳೆ ಎರಡು ಕೂಡ ನ್ಯಾಷನಲ್ ಪಾರ್ಕ್‌ಗಳು. ಪ್ರಕೃತಿ ಶ್ರೀಮಂತವಾಗಿರುವ ಅಭಯಾರಣ್ಯದಲ್ಲಿ ಅಕ್ರಮವಾಗಿ ರೆಸಾರ್ಟ್ ಗಳು ತಲೆ ಎತ್ತಿವೆ. 28 ಅಕ್ರಮ



ರೈತ ಮುಖಂಡ ಹೊನ್ನೂರು ಪ್ರಕಾಶ್, ವಕೀಲ ರವಿಕುಮಾರ್ ಮತ್ತು ಇತರರು ಸುದ್ದಿಗೋಷ್ಠಿ ನಡೆಸಿ ಅಕ್ರಮ ರೆಸಾರ್ಟ್‌ಗಳ ಪಟ್ಟಿ ಬಿಡುಗಡೆ ಮಾಡಿದರು.

ರೆಸಾರ್ಟ್ ಹಾಗೂ ಕಟ್ಟಡಗಳ ಪಟ್ಟಿ ದಾಖಲೆ ಸಮೇತ ಕೊಡುತ್ತಿದ್ದೇನೆ. ಇವೆಲ್ಲವೂ ಕೂಡ ಹೈ ಫ್ಲಡ್ ಲೈನ್, ಇಕೋ ಸೆನ್ಸಿಟಿವ್ ಜೋನ್, ಇಂತಹ ಜಾಗದಲ್ಲಿ ರೆಸಾರ್ಟ್ ಮಾಡಿದ್ದಾರೆ. ಸಿಎಂ ಸಿದ್ದರಾಮಯ್ಯ ತನಿಖೆ ಮಾಡಿಸುತ್ತೇವೆ ಎಂದಿದ್ದಾರೆ. ಈಶ್ವರ್ ಖಂಡ್ರೆ, ಅನಿಲ್ ಚಿಕ್ಕಮಾದು ಸಹ ಅಕ್ರಮ ರೆಸಾರ್ಟ್ ಡೆಮಾಲಿಶ್ ಮಾಡಿಸುತ್ತೇವೆ ಎಂದಿದ್ದಾರೆ. ಇದೆಲ್ಲವೂ ಕೂಡ ರಾಜ್ಯದ ಪ್ರಭಾವಿ ಸಚಿವರು ಅಧಿಕಾರಿಗಳ ಹೆಸರಿನಲ್ಲಿ ಇರುವ ರೆಸಾರ್ಟ್ ಗಳು. ಕಾಡು ನಾಶ ಆಗ್ತಿದೆ, ಇದರಿಂದ ಕಾಡು ಪ್ರಾಣಿಗಳು ನಾಡಿಗೆ ಬರ್ತಿವೆ ಮಾನವನ ಮೇಲೆ ದಾಳಿ ಮಾಡ್ತೀವೆ. ಎಲ್ಲದರ ಮೇಲೆ ಶೀಘ್ರ ಕ್ರಮ ಆಗ್ಬೇಕು ಕಬಿನಿ ಕಾಡು ಉಳಿಬೇಕು ಎಂದು ಆಗ್ರಹಿಸಿದರು.

## ಸಂಕ್ಷಿಪ್ತ ಸುದ್ದಿ

### ಬಹುರೂಪಿ ನಾಟಕೋತ್ಸವ: ನಾಟಕಗಳ ಆಹ್ವಾನ

**ಮೈಸೂರು:** ರಂಗಾಯಣದ ನಾಟಕೋತ್ಸವವನ್ನು 2026ರಜನವರಿ12ರಿಂದ13ರವರೆಗೆರಂಗಾಯಣದ ಆವರಣದಲ್ಲಿ 'ಬಹುರೂಪಿ ಬಾಬಾ ಸಾಹೇಬ್' ಎಂಬ ಶೀರ್ಷಿಕೆಯಡಿ ನಡೆಸಲು ಯೋಜಿಸಲಾಗಿದೆ. ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಬದುಕು ಬರಹ ಹೋರಾಟಗಳನ್ನು ನೆನಪಿಸುವ ದಮನಿತ/ಶೋಷಿತ ಸಮುದಾಯ ಕಥನಗಳ ನಾಟಕಗಳೂ ಸೇರಿದಂತೆ ಹಲವು ವೈವಿಧ್ಯಮಯ ನಾಟಕಗಳನ್ನು ಬಹುರೂಪಿಯಲ್ಲಿ ಆಯೋಜಿಸಲು ಕನ್ನಡ, ಇಂಗ್ಲೀಷ್ ಸೇರಿದಂತೆ ಭಾರತೀಯ ಇತರ ಭಾಷೆಗಳ ನಾಟಕಗಳನ್ನು ಆಹ್ವಾನಿಸಲಾಗಿದೆ ಮತ್ತು 'ಮಕ್ಕಳ ಬಹುರೂಪಿ'ಗಾಗಿ ಮುಖ್ಯ ನಾಟಕಗಳೊಂದಿಗೆ ಮಕ್ಕಳಿಗಾಗಿ ಪ್ರದರ್ಶಿಸುವ ನಾಟಕಗಳನ್ನು ಆಹ್ವಾನಿಸಲಾಗಿದೆ.

ಭಾಗವಹಿಸಲು ಇಚ್ಛೆಯುಳ್ಳ ರಂಗ ತಂಡಗಳು ರಂಗಾಯಣದ ವೆಬ್‌ಸೈಟ್: rangayanamysore.karnataka.gov.in ನಲ್ಲಿ ಅರ್ಜಿಯನ್ನು ಡೌನ್ಲೋಡ್ ಮಾಡಿಕೊಂಡು ತಮ್ಮ ತಂಡ ಹಾಗೂ ನಾಟಕದ ವಿವರಗಳನ್ನು ಭರ್ತಿ ಮಾಡಿ, ನಾಟಕದ ಪೆನ್‌ಡ್ರೈವ್‌ನ್ನು ಲಗತ್ತಿಸಿ ನವೆಂಬರ್ 25 ರೊಳಗಾಗಿ ರಂಗಾಯಣಕ್ಕೆ ತಲುಪುವಂತೆ ಕಳುಹಿಸಿಕೊಡಬೇಕಾಗಿದೆ ಹಾಗೂ Email: bahuroopifestival@gmail.com ಗೆ ನಾಟಕದ ಯೂಟ್ಯೂಬ್ ಲಿಂಕ್‌ನ್ನೂ ಕಳುಹಿಸಬಹುದಾಗಿದೆ.

ಈ ನಾಟಕೋತ್ಸವಕ್ಕೆ ಆಯ್ಕೆಯಾಗುವ ನಾಟಕ ತಂಡಗಳಿಗೆರಂಗಾಯಣದನಿಯಮಾನುಸಾರಗೌರವ ಸಂಭಾವನೆ, ಪ್ರಯಾಣ ವೆಚ್ಚ ಪಾವತಿಸಲಾಗುವುದು. ಸ್ಥಳೀಯ ಆತಿಥ್ಯ ವ್ಯವಸ್ಥೆಯನ್ನು ಮಾಡಲಾಗುವುದು. ಆಯ್ಕೆಯಾಗುವ ತಂಡಗಳಿಗೆ ಉಳಿದ ವಿವರಗಳನ್ನು ಪತ್ರದ ಮೂಲಕ ತಿಳಿಸಲಾಗುವುದು ಎಂದು ರಂಗಾಯಣದ ನಿರ್ದೇಶಕರಾದ ಸತೀಶ್ ತಿಪಟೂರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭತ್ತ ಖರೀದಿಗೆ ಆಗ್ರಹಿಸಿ ಅನ್ನದಾತರ ಪ್ರತಿಭಟನೆ

## ಜಿಲ್ಲಾಧಿಕಾರಿ ಕಚೇರಿ ಬಳಿ ರಾಜ್ಯ ಕಬ್ಬು ಬೆಳೆಗಾರರ ಸಂಘದಿಂದ ಸರ್ಕಾರಕ್ಕೆ ಮನವಿ



ಭತ್ತ ಖರೀದಿ ಕೇಂದ್ರ ಆರಂಭಿಸಲು ಒತ್ತಾಯಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ವತಿಯಿಂದ ಮೈಸೂರು ಜಿಲ್ಲಾಧಿಕಾರಿ ಕಚೇರಿ ಬಳಿ ರೈತರು ಪ್ರತಿಭಟನೆ ನಡೆಸಿದರು.



ಭತ್ತ ಖರೀದಿ ಕೇಂದ್ರ ಆರಂಭಿಸಲು ಒತ್ತಾಯಿಸಿ ರಾಜ್ಯ ಕಬ್ಬು ಬೆಳೆಗಾರ ಸಂಘದ ವತಿಯಿಂದ ಮೈಸೂರು ಎಡಿಸಿ ಡಾ. ಶಿವರಾಜು ಅವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

**ಮೈಸೂರು:** ಭತ್ತ ಖರೀದಿ ಕೇಂದ್ರ ಆರಂಭಿಸಲು ಒತ್ತಾಯಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಕೇಂದ್ರ ಸರ್ಕಾರ ನಿಗದಿ ಮಾಡಿರುವ ಎಫ್‌ಆರ್‌ಪಿ 2,369 ರೂ ಜತೆಗೆ ರಾಜ್ಯ ಸರ್ಕಾರ ಪ್ರತಿ ಕ್ವಿಂಟಾಲ್ ಭತ್ತಕ್ಕೆ 500 ರೂ. ಹೆಚ್ಚುವರಿ ದರ ನಿಗದಿ ಮಾಡಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ನೋಂದಣಿ ಪ್ರಕ್ರಿಯೆ ಆರಂಭಿಸಬೇಕು. ಪಡಿತರ ವಿತರಣೆಗೆ ಬೇರೆ ರಾಜ್ಯದ ಅಕ್ಕಿ ಬಳಸುತ್ತಿದ್ದು, ಅದನ್ನು ನಿಲ್ಲಿಸಿ ರೈತರು ಬೆಳೆದ ಎಲ್ಲಾ ಭತ್ತವನ್ನೂ ಖರೀದಿ ಕೇಂದ್ರದ ಮೂಲಕ ಖರೀದಿಸಲು ಕೃಷಿ ಮತ್ತು ಕಂದಾಯ ಇಲಾಖೆಯ ಜಂಟಿ ಸಮಿತಿ ರಚಿಸಬೇಕು. ರೈತರ ಭತ್ತ ಖರೀದಿ ಮಾಡಲು ಬೇಡಿಕೆ ಇರಬಾರದು. ಕಟಾವು ಪ್ರಾರಂಭವಾದ ತಕ್ಷಣ ಭತ್ತ ಖರೀದಿಗೆ ಕ್ರಮ ಕೈಗೊಳ್ಳಬೇಕು. ಅಧಿಕ ಷರತ್ತುಗಳನ್ನು ವಿಧಿಸಿ ರೈತರು ಖರೀದಿ ಕೇಂದ್ರದಲ್ಲಿ ಭತ್ತ ಮಾರಾಟ ಮಾಡದ ರೀತಿ ನಿಯಮ ಸೃಷ್ಟಿಸಬಾರದು ಎಂದು ಆಗ್ರಹಿಸಿದರು.

ದಲ್ಲಾಳಿಗಳು, ಬಂಡವಾಳಶಾಹಿಗಳು ರೈತರ ಹೆಸರಿನಲ್ಲಿ ಭತ್ತ ಮಾರಾಟ ಮಾಡುವುದರಿಂದ ಬಂಡವಾಳಶಾಹಿಗಳಿಗೆ ಲಾಭವಾಗುತ್ತದೆ. ಸಾಲ ಮಾಡಿ ಭತ್ತ ಬೆಳೆದು ಕಡಿಮೆ ಬೆಲೆಗೆ ಮಾರಾಟ ಮಾಡಿ ನಷ್ಟ ಅನುಭವಿಸುವ ಪರಿಸ್ಥಿತಿ ನಿರ್ಮಾಣವಾಗುತ್ತದೆ. ರೈತರು ಬೆಳೆದ ಭತ್ತ ಸಂಗ್ರಹ ಮಾಡಲು ಸಂಗ್ರಹ ಕೇಂದ್ರ ಇಲ್ಲ. ಸಾಲ ತೀರಿಸಲು ತಕ್ಷಣ ಹಣದ ಅವಶ್ಯಕತೆ ಇರುವುದರಿಂದ ದಳ್ಳಾಳಿಗಳಿಗೆ ಮಾರಾಟ ಮಾಡಿ ನಷ್ಟ ಅನುಭವಿಸುತ್ತಾರೆ. ಹೀಗಾಗಿ ತಕ್ಷಣ ನೋಂದಣಿ ಪ್ರಕ್ರಿಯೆ ಆರಂಭಿಸಿ ಭತ್ತ ಖರೀದಿಗೆ ಸಿದ್ಧತೆ ಆರಂಭಿಸುವಂತೆ ಒತ್ತಾಯಿಸಿದರು.

ಭತ್ತ ಖರೀದಿ ಮಾಡಿದ ಮೂರು ದಿನದ ಒಳಗಾಗಿ ರೈತರ ಖಾತೆಗೆ ನೇರವಾಗಿ ಹಣ ಜಮಾ ಆಗಬೇಕು. ಎಪಿಎಂಸಿಗಳ ಮುಖಾಂತರ ಭತ್ತವನ್ನು ಅಡಮಾನ ಮಾಡುವ ರೈತರಿಗೆ ಮಾರುಕಟ್ಟೆ ಬೆಲೆಯ ಶೇ.80ರಷ್ಟು ಸಾಲವನ್ನು ಬ್ಯಾಂಕುಗಳು ನೀಡುವ ರೀತಿ ಕ್ರಮ ವಹಿಸಬೇಕು. ಭತ್ತ ಖರೀದಿ ದಲ್ಲಾಳಿಗಳು ಹಾಗೂ ಏಜನ್ಸಿಗಳು ಎಫ್‌ಆರ್‌ಪಿ ದರಕ್ಕಿಂತ ಕಡಿಮೆ ಬೆಲೆಗೆ ಖರೀದಿ ಮಾಡಿದರೆ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ರಾಜ್ಯಾದ್ಯಂತ ಭತ್ತ ಖರೀದಿಗಾಗಿ ರಾಜ್ಯ ಸರ್ಕಾರ ವಿಶೇಷ ಆವರ್ತ ನಿಧಿ ಘೋಷಣೆ ಮಾಡಬೇಕು. ಈ ಮೂಲಕ ಭತ್ತ ಖರೀದಿದಾರರನ್ನು ರಕ್ಷಣೆ ಮಾಡಲು ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.

ಕಾಡುಪ್ರಾಣಿ ಮತ್ತು ಹುಲಿ ದಾಳಿಗೆ ಬಲಿಯಾದ ರೈತ ಕುಟುಂಬಕ್ಕೆ ಒಂದು ಕೋಟಿ ರೂ. ಪರಿಹಾರವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರ ಘೋಷಿಸಲು ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆರಾಜ್ಯಾದ್ಯಂತಅಹೋರಾತ್ರಿಧರಣಿನಡೆಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

### ಮಹಾರಾಷ್ಟ್ರ ರೀತಿ ಕ್ರಮ ಕೈಗೊಳ್ಳಿ: ರೈತರ ಒತ್ತಾಯ

ಮಹಾರಾಷ್ಟ್ರ ಮಾದರಿಯಲ್ಲಿ ರಾಜ್ಯದಲ್ಲೂ ಕಬ್ಬು ಬೆಳೆಗಾರರಿಗೆ ಎಸ್ ಎ ಟಿ ಗಿಂತ ಹೆಚ್ಚುವರಿ ಹಣ ನೀಡಬೇಕು. ಮಹಾರಾಷ್ಟ್ರದಲ್ಲಿ ಕಬ್ಬು ಕಟಾವು, ಸಾಗಾಣಿಕೆ ಬಿಟ್ಟು ರೈತರಿಗೆ ಪ್ರತಿ ಟನ್ ಗೆ 3,500 ರೂ. ಪಾವತಿಸಲಾಗುತ್ತಿದೆ. ಗುಜರಾತಿನ ಗಾನ ದೇವಿ ಸಕ್ಕರೆ ಕಾರ್ಖಾನೆಯು ಪ್ರತಿ ಟನ್ ಕಬ್ಬಿಗೆ ಕಟಾವು ಸಾಗಾಣಿಕೆ ವೆಚ್ಚವನ್ನು ಬಿಟ್ಟು 3,850 ರೂಪಾಯಿಗಳನ್ನು ರೈತರಿಗೆ ಪಾವತಿ ಮಾಡಲಾಗುತ್ತಿದೆ. ಗುಜರಾತ್ ಮತ್ತು ಮಹಾರಾಷ್ಟ್ರ ಮಾದರಿಯಲ್ಲಿ ರಾಜ್ಯದಲ್ಲೂ ಕಬ್ಬು ದರ ನಿಗದಿ ಮಾಡಲು ಸರ್ಕಾರ ಮುಂದಾಗಬೇಕು. ಈಗ ಇರುವ ಬೆಲೆ ಸಲಹಾ ಸಮಿತಿಯನ್ನು ತಕ್ಷಣ ಪುನರ್ ರಚಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

ಪ್ರತಿಭಟನೆಯಲ್ಲಿರಾಜ್ಯಾಧ್ಯಕ್ಷಹಳ್ಳಿಕೆರೆಹುಂಡಿಭಾಗ್ಯರಾಜ್, ಎಚ್.ಎಸ್.ರಾಜು, ಕೆರೆಹುಂಡಿ ರಾಜಣ್ಣ, ಒಳಗೆರೆ ಗಣೇಶ್, ಮಲಿಯೂರು ಮಹೇಂದ್ರ, ಹೊನ್ನಗೌಡನಹಳ್ಳಿ ಮಹೇಶ್, ದೇವನೂರು ನಾಗೇಂದ್ರ, ದೇವಿಮ್ಮನಹಳ್ಳಿ ಪ್ರಭು, ಚಿಕ್ಕಬಸಪ್ಪ, ಶ್ರೀಕಂಠ ಸ್ವಾಮಿ, ಅಂಡುವಿನಹಳ್ಳಿ ಜಗದೀಶ್, ಒಳಗೆರೆ ಮಹದೇವಪ್ಪ, ಮದನ್, ಚಿದಂಬರ, ಜಗದೀಶ್, ನಾಗರಾಜಪ್ಪ ಸೇರಿದಂತೆ ಹಲವರು ರೈತ ಮುಖಂಡರು ಈ ವೇಳೆ ಭಾಗಿಯಾಗಿದ್ದರು.

# ಬಸವಣ್ಣನವರ ಚಿಂತನೆಗಳು ಆತ್ಮವಿಕಾಸದ ಮಾರ್ಗ

## ಬಸವ ಚಿಂತನೆ ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರಾದ ಡಾ. ಬಿ. ವಿ. ವಸಂತ ಕುಮಾರ್



ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಕನ್ನಡ ವಿಭಾಗದ ವತಿಯಿಂದ ನಡೆದ ಶ್ರೀ ಶಿವ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಪ್ರಾಧ್ಯಾಪಕರಾದ ಡಾ. ಬಿ. ವಿ. ವಸಂತ ಕುಮಾರ್ ಉದ್ಘಾಟಿಸಿದರು.

**ಮೈಸೂರು:** ಬಸವಣ್ಣನವರ ಚಿಂತನೆಗಳು ಸಮಷ್ಟಿ ಸ್ವರೂಪ ಹೊಂದಿದ್ದು, ಆತ್ಮವಿಕಾಸ ಮಾರ್ಗವಾಗಿದೆ ಎಂದು ಹುಣಸೂರಿನ ಶ್ರೀ ಡಿ. ದೇವರಾಜ ಅರಸು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕರಾದ ಡಾ. ಬಿ. ವಿ. ವಸಂತ ಕುಮಾರ್ ತಿಳಿಸಿದರು.

ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಕನ್ನಡ ವಿಭಾಗದ ವತಿಯಿಂದ ಮಂಗಳವಾರ ಶ್ರೀ ಶಿವ ಸ್ಮರಣಾರ್ಥ ದತ್ತಿ ಉಪನ್ಯಾಸ: ಬಸವ ಚಿಂತನೆ ಕಾರ್ಯಕ್ರಮದಲ್ಲಿ ಬಸವಣ್ಣನವರ ದೈವಪರ ಚಿಂತನೆ ವಿಷಯ ಕುರಿತಂತೆ ಮಾತನಾಡಿ, ದೇವರು ಆಚರಣೆಯಲ್ಲಿ ಆವಿಷ್ಕಾರವಾಗುತ್ತಾನೆ. ಜೀವ ಮತ್ತು ದೈವ ಒಂದು ನಾಣ್ಯದ ಎರಡು ಮುಖಗಳಿದ್ದಂತೆ. ಮನಸ್ಸು ಸ್ವಸ್ಥವಾಗಿಡಲು ಶರಣರ ಚಿಂತನೆಗಳು ಅವಶ್ಯಕವಾಗಿದೆ. ದೇಹ, ಜೀವ, ಆತ್ಮ ಪರಮಾತ್ಮಗಳ ಸಮಾಗಮವನ್ನು ಬಸವಣ್ಣನವರು ತಮ್ಮ ವಚನಗಳಲ್ಲಿ ತಿಳಿಸಿದ್ದಾರೆ ಎಂದರು. ನಿವೃತ್ತ ಪ್ರಾಧ್ಯಾಪಕಿ ಡಾ.ಎಚ್.ಎಂ. ಕಲಾಶ್ರೀ ಮಾತನಾಡಿ, 12ನೇ ಶತಮಾನದ ಶರಣ ಸಾಹಿತ್ಯ ಕ್ರಾಂತಿಯಾಗಿರದೆ ಅದು ತಾಯ್ತನದ ಜೀವಪರವಾದ ಚಳವಳಿಯಾಗಿದೆ. ಶರಣರು ದುಡಿಮೆಯಲ್ಲಿ ದೇವರಿದ್ದಾನೆ ಎಂಬುದನ್ನು ಬಲವಾಗಿ ನಂಬುವುದರ ಜೊತೆಗೆ ಆಚರಣೆಯಲ್ಲೂ ತಂದರು. ಬಸವಣ್ಣನವರು ಮಾತೃ ಹೃದಯವನ್ನು ಹೊಂದಿದ್ದರು. ಮಾನವೀಯ ಮೌಲ್ಯಗಳ ಮೂರ್ತಿಯಾಗಿದ್ದರು ಎಂದು ಅಭಿಪ್ರಾಯಪಟ್ಟರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ ಅಧ್ಯಕ್ಷತೆ ವಹಿಸಿ ಮಾತನಾಡಿ, ಪ್ರಸ್ತುತ ವರ್ತಮಾನಕ್ಕೆ ಬಸವಣ್ಣನವರು ವಿವೇಕದ ಪ್ರತಿನಿಧಿಯಾಗಿದ್ದಾರೆ. ದೇವಾಲಯದ ಸ್ವರೂಪ ಕುರಿತು ಬಸವಣ್ಣನವರ ಚಿಂತನೆ ಶ್ರೇಷ್ಠ ಮಟ್ಟದ್ದಾಗಿದೆ. ನಿರಾಕಾರ ಸ್ವರೂಪಿಯನ್ನು ಆಕಾರ ಮೂರ್ತಿಯನ್ನಾಗಿ ಪರಿಭಾವಿಸಿಕೊಳ್ಳಬೇಕು ಎಂದರು. ಪ್ರಾಚಾರ್ಯರಾದ ಡಾ.ರೇಚಣ್ಣ, ದತ್ತಿ ದಾನಿಗಳಾದ ಡಾ.ಕೆ.ಎಸ್. ರಾಜಶೇಖರ, ಕನ್ನಡ ವಿಭಾಗದ ಮುಖ್ಯಸ್ಥ ಆರ್.ಎಸ್. ಕುಮಾರ್ ಉಪಸ್ಥಿತರಿದ್ದರು. ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು. ನಿಖಿತಾ ಮತ್ತು ವೃಂದದವರು ಪ್ರಾರ್ಥಿಸಿದರು. ಸಹಾಯಕ ಪ್ರಾಧ್ಯಾಪಕರಾದ ಹೊನ್ನಶೆಟ್ಟಿ ಸ್ವಾಗತಿಸಿದರು. ಡಾ. ಸಿ.ಮಹೇಂದ್ರ ವಂದಿಸಿದರು. ಎಚ್.ಎಸ್. ಸಿದ್ದಮಲ್ಲಿಕಾರ್ಜುನ ಸ್ವಾಮಿ ನಿರೂಪಿಸಿದರು.

# ಹೋಬಳಿ ಮಟ್ಟದ ಅಥ್ಲೆಟಿಕ್ಸ್; ಕೂರ್ಗಳ್ಳಿ ಶಾಲೆ ಮಕ್ಕಳ ಸಾಧನೆ

**ಮೈಸೂರು:** ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ನಡೆದ ಹೋಬಳಿ ಮಟ್ಟದ ಅಥ್ಲೆಟಿಕ್ಸ್ ನಲ್ಲಿ ಕೂರ್ಗಳ್ಳಿ ಸರಕಾರಿ ಶಾಲೆಯ ಮಕ್ಕಳು ಅನುಪಮ ಸಾಧನೆ ಮಾಡಿದ್ದಾರೆ.

14ರ ವಯೋಮಿತಿ ಬಾಲಕಿಯರ ವಿಭಾಗದ 600 ಮೀಟರ್ ಓಟದ ಸ್ಪರ್ಧೆಯಲ್ಲಿ ಕಾವ್ಯ ಆರ್. ಮೊದಲನೇ ಸ್ಥಾನ, 400 ಮೀಟರ್ ಓಟದ ಸ್ಪರ್ಧೆಯಲ್ಲಿ ರಕ್ಷಿತಾ ಮೊದಲನೇ ಸ್ಥಾನ, 14ರ ವಯೋಮಿತಿಯ ಬಾಲಕರ ವಿಭಾಗದ 400 ಮೀಟರ್ ಓಟದ ಸ್ಪರ್ಧೆಯಲ್ಲಿ ಚಂದ್ರಶೇಖರ್ ದ್ವಿತೀಯಸ್ಥಾನ,100ಮೀಟರ್‌ಓಟದಸ್ಪರ್ಧೆಯಲ್ಲಿ ರಂಜಿತ್ ದ್ವಿತೀಯ ಸ್ಥಾನ ಪಡೆದುಕೊಂಡಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ರಾಜ್ಯ ಎಸ್‌ಡಿಎಂಸಿ ಪದಾಧಿಕಾರಿ ರೇವಣ್ಣ, ಟೀಮ್ ಮ್ಯಾನೇಜರ್ ಇಂದಿರಾ, ಭಾಸ್ಕರ್, ದೈಹಿಕ ಶಿಕ್ಷಣ ಶಿಕ್ಷಕರಾದ ಚೂಡಾಮಣಿ, ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು, ಶಿಕ್ಷಕರು ಅಭಿನಂದನೆ ತಿಳಿಸಿದ್ದಾರೆ.



ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ನಡೆದ ಹೋಬಳಿ ಮಟ್ಟದ ಅಥ್ಲೆಟಿಕ್ಸ್ ನಲ್ಲಿ ಕೂರ್ಗಳ್ಳಿ ಸರಕಾರಿ ಶಾಲೆಯ ಮಕ್ಕಳನ್ನು ಶಿಕ್ಷಕರು ಅಭಿನಂದಿಸಿದರು.



ಬೋವಿ ನಿಗಮದ ಅಧ್ಯಕ್ಷರಾದ ರಾಮಪ್ಪ ಅವರನ್ನು ವಿಜಯಶ್ರೀಪುರ ಕ್ಷೇಮಾಭಿವೃದ್ಧಿ ಒಕ್ಕೂಟದ ವತಿಯಿಂದ ಅಭಿನಂದಿಸಲಾಯಿತು. ಈ ವೇಳೆ ಶಾಸಕರಾದ ಕೆ. ಹರೀಶ್ ಗೌಡ, ವಿಧಾನ ಪರಿಷತ್ ಸದಸ್ಯರಾದ ಡಾ.ಡಿ.ತಿಮ್ಮಯ್ಯ, ಸಂಘದ ಪದಾಧಿಕಾರಿಗಳು, ವಿಜಯಶ್ರೀಪುರದ ನಿವಾಸಿಗಳು ಉಪಸ್ಥಿತರಿದ್ದರು.

# ಕಾರಾಗೃಹದ ಸಿಬ್ಬಂದಿ ಅಪರಾಧಿಗಳ ಸುಧಾರಣೆಗೆ ಶ್ರಮಿಸಬೇಕು: ಉಷಾರಾಣಿ




ಪ್ರಿನ್ಸಿಪಲ್ಸ್ ಆಫ್ ಪ್ರಿಸೆನ್ಸ್ ಅಡ್ಮಿನಿಸ್ಟ್ರೇಷನ್ ಕಾರ್ಯಗಾರವನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಉಷಾರಾಣಿ ಉದ್ಘಾಟಿಸಿದರು.

**ಮೈಸೂರು:** ಕಾರಾಗೃಹದ ಸಿಬ್ಬಂದಿ ಆರೋಪಿಗಳು, ಅಪರಾಧಿಗಳ ಸುಧಾರಣೆಗೆ ಸದಾ ಶ್ರಮಿಸಬೇಕು. ತಮ್ಮ ಕರ್ತವ್ಯದಲ್ಲಿ ಸೂಕ್ಷ್ಮತೆ ಇಟ್ಟುಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಉಷಾರಾಣಿ ತಿಳಿಸಿದರು.

ಕೇಂದ್ರ ಕಾರಾಗೃಹದ ಕಾರಾಗೃಹ ಸಿಬ್ಬಂದಿ ತರಬೇತಿ ಸಂಸ್ಥೆಯಲ್ಲಿ, ಕಾರಾಗೃಹ ಮತ್ತು ಸುಧಾರಣಾ ಸೇವಾ ಇಲಾಖೆಯ ಸಿಬ್ಬಂದಿಗಳಿಗೆ ದೆಹಲಿಯ ಬಿ.ಪಿ.ಆರ್.ಡಿ ಪ್ರಾಯೋಜಿಕತ್ವದಲ್ಲಿ ಐದು ದಿನಗಳ ಕಾಲ ನಡೆಯುವ "PRINCIPLES OF PRISON ADMINISTRATION" ಕಾರ್ಯಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅಮರನಾಥ ಕೆ.ಕೆ.ಮಾತನಾಡಿ, ಅಪರಾಧವನ್ನು ದ್ವೇಷಿಸಬೇಕೇ ಹೊರತು ಅಪರಾಧಿಯನ್ನಲ್ಲ ಎಂದು ತಿಳಿಸಿದರು. ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕರಾದ ಶೇಷಮೂರ್ತಿ ವಿ. ಮಾತನಾಡಿ, ಕರ್ತವ್ಯ ನಿರ್ವಹಣೆಗೆ ಪೂರಕವಾಗಬಲ್ಲ, ಲೋಪಗಳನ್ನು ಕಡಿಮೆ ಮಾಡಬಲ್ಲ ಸಲಹೆಗಳನ್ನು ನೀಡಿದರು. ಸಂಸ್ಥೆಯ ಪ್ರಾಚಾರ್ಯರಾದ ಬಿ.ಟಿ. ಓಬಳೇಶಪ್ಪ ಮಾತನಾಡಿ, ಕಾರ್ಯಗಾರದಲ್ಲಿ ಹಾಜರಾದ ಸಿಬ್ಬಂದಿಗಳಿಗೆ, ಕಾರ್ಯಗಾರದ ಯಶಸ್ವಿಗೆ ಶ್ರಮಿಸುತ್ತಿರುವ ಸಂಸ್ಥೆಯ ಎಲ್ಲಾ ಸಿಬ್ಬಂದಿಗಳಿಗೆ ಧನ್ಯವಾದಗಳನ್ನು ತಿಳಿಸಿದರು.

# ಆಯುರ್ವೇದ ಜೀವನ ವಿಧಾನವಾಗಲಿ

## ಆಹಾರ, ವೇದ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಡಾ.ವಿ. ಪ್ರಕಾಶ್ ಅಭಿಪ್ರಾಯ

**ಮೈಸೂರು:** ಆಯುರ್ವೇದ ಆಹಾರ ಪದ್ಧತಿ ಜೀವನ ವಿಧಾನವಾಗಿದೆ ಎಂದು ಸಿಎಫ್‌ಟಿಆರ್‌ಐ ನಿವೃತ್ತ ನಿರ್ದೇಶಕ ಡಾ.ವಿ. ಪ್ರಕಾಶ್ ಅಭಿಪ್ರಾಯಪಟ್ಟರು.

ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರವು ಯುವರಾಜ ಕಾಲೇಜಿನ ಆಹಾರ ವಿಜ್ಞಾನ ಮತ್ತು ಪೌಷ್ಟಿಕತೆ ವಿಭಾಗದ ಸಹಯೋಗದಲ್ಲಿ ಇಲ್ಲಿನ ಅಮೃತ ಮಹೋತ್ಸವ ಸಭಾಂಗಣದಲ್ಲಿ ಏರ್ಪಡಿಸಿದ್ದ ಆಹಾರ, ವೇದ– ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ದಿಕ್ಸೂಚಿ ಭಾಷಣ ಮಾಡಿದ ಅವರು, ಮನುಷ್ಯನಿಗೆ ಮೂಲಭೂತವಾಗಿ ಸೇವಿಸುವ ಆಹಾರ ಸರಿ ಇರಬೇಕು. ಸರಿಯಾದ ಸಮಯಕ್ಕೆ ಊಟ ಸೇವಿಸಿದಾಗ ಮಾತ್ರ ಮನುಷ್ಯ ಚಟುವಟಿಕೆಯಿಂದ ಇರಬಲ್ಲ ಎಂದರು.

ಆಯುರ್ವೇದ ವಿಜ್ಞಾನದ ಪ್ರಕಾರ, ಅಗತ್ಯವಿರುವಷ್ಟು ಮಾತ್ರ ತಿನ್ನಬೇಕು. ಯೋಗ, ವ್ಯಾಯಾಮ ಮಾಡಬೇಕು. ರೈತರು ಕಷ್ಟಪಟ್ಟು ಆಹಾರ ಧಾನ್ಯ ಬೆಳೆಯುತ್ತಾರೆ. ಹೀಗಾಗಿ ಯಾರೂ ಆಹಾರವನ್ನು ಪೋಲು ಮಾಡಬಾರದು. ದೇಶದಲ್ಲಿ 2 ಲಕ್ಷ ಕೋಟಿ ಮಂದಿ ಮಧ್ಯಾಹ್ನದ ಬಿಸಿಯೂಟ ಸೇವಿಸುತ್ತಿದ್ದಾರೆ. ಇದಕ್ಕೆ ಆಹಾರ ವಿಜ್ಞಾನಿಗಳು ಕೇಂದ್ರ ಸರ್ಕಾರಕ್ಕೆ ಮಾಡಿದ ಶಿಫಾರಸ್ಸುಗಳು ಕಾರಣ. ಅದರಂತೆ ಮಧ್ಯಾಹ್ನದ ಊಟ ಪೂರೈಸಲಾಗುತ್ತಿದೆ ಎಂದರು.

**ಭಾರತ ಮಧುಮೇಹಿಗಳ ರಾಜಧಾನಿ ಅಲ್ಲ:**

ಭಾರತ ಮಧುಮೇಹಿಗಳ ರಾಜಧಾನಿ ಎಂದು ಮಾಧ್ಯಮಗಳಲ್ಲಿ ಪ್ರಚಾರ ಮಾಡಲಾಗುತ್ತದೆ. ಇದು ಸುಳ್ಳು. ದೇಶದಲ್ಲಿ ಜನಸಂಖ್ಯೆ ಹೆಚ್ಚಿದೆ. ಹೀಗಾಗಿ 14 ಕೋಟಿ ಮಂದಿಯಲ್ಲಿ ಮಧುಮೇಹ ಇರಬಹುದು. ಆದರೆ ಈ ಪ್ರಮಾಣ ಅಚಿತರಾಷ್ಟ್ರೀಯ ಮಟ್ಟದಲ್ಲಿರುವ ಶೇ.11 ರಷ್ಟೇ ಇದೆ. ಆಹಾರ, ಶಿಕ್ಷಣ, ಮಾಹಿತಿ ಮತ್ತು ಜಾಗೃತಿಯ ಮೂಲಕ ಆಯುರ್ವೇದ ಪದ್ಧತಿಯ ಬಗ್ಗೆ ತಿಳಿಸಿಕೊಡಬೇಕು. ಸಾಂಪ್ರದಾಯಿಕ ಜ್ಞಾನ, ಆಧುನಿಕ ತಂತ್ರಜ್ಞಾನ, ಸ್ಪಷ್ಟ ದೂರದರ್ಶಿತ್ವದ ಮೂಲಕ ನವ ಭಾರತ ನಿರ್ಮಾಣ ಮಾಡಬೇಕು ಎಂದು ಅವರು ಕರೆ ನೀಡಿದರು.



ಯುವರಾಜ ಕಾಲೇಜಿನ ಅಮೃತ ಮಹೋತ್ಸವ ಸಭಾಂಗಣದಲ್ಲಿ ಏರ್ಪಡಿಸಿದ್ದ ಆಹಾರ, ವೇದ– ರಾಷ್ಟ್ರೀಯ ವಿಚಾರ ಸಂಕಿರಣವನ್ನು ಗಣ್ಯರು ಉದ್ಘಾಟನೆ ಮಾಡಿದರು.

ವಿಶೇಷ ಅತಿಥಿಯಾಗಿದ್ದ ಮೈವಿವಿ ಪರೀಕ್ಷಾಂಗ ಕುಲಸಚಿವ ಡಾ.ಎನ್.ನಾಗರಾಜ ಮಾತನಾಡಿ, ಉತ್ತಮ ಜೀವನವನ್ನು ರೂಪಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಪ್ರೊ. ಎಸ್. ಮಹದೇವಮೂರ್ತಿ ಮಾತನಾಡಿ, ಪ್ರತಿಯೊಬ್ಬರೂ ಸ್ಥಳೀಯ ಆಹಾರ ಪದ್ಧತಿಯನ್ನು ಅನುಸರಿಸಬೇಕು ಎಂದರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಪತ್ರಕರ್ತ, ಕಾಲೇಜಿನ ಹಿರಿಯ ವಿದ್ಯಾರ್ಥಿ ಅಂಶಿ ಪ್ರಸನ್ನಕುಮಾರ್ ಅವರನ್ನು ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರ ಹಾಗೂ ಯುವರಾಜ ಕಾಲೇಜಿನ ಕನ್ನಡ ವಿಭಾಗದ ವತಿಯಿಂದ ಸನ್ಮಾನಿಸಲಾಯಿತು. ಕಾಲೇಜಿನ ಆಹಾರ ವಿಜ್ಞಾನ ಮತ್ತು ಪೌಷ್ಟಿಕತೆ ವಿಭಾಗದ ನಿವೃತ್ತ ಪ್ರಾಧ್ಯಾಪಕಿ ಡಾ.ಜಮುನಾ ಪ್ರಕಾಶ್ ಅವರು ಉಪನ್ಯಾಸ ನೀಡಿದರು.

ಕಾಲೇಜಿನ ಪರೀಕ್ಷಾ ನಿಯಂತ್ರಣಾಧಿಕಾರಿ ಸಿ. ನಾಗೇಶ್ ಬಾಬು, ಆಡಳಿತಾಧಿಕಾರಿ ಪ್ರೊ. ಕೆ. ವಿಜಯಕುಮಾರ್ ಅತಿಥಿಗಳಾಗಿದ್ದರು. ಆಹಾರ ಮತ್ತು ಪೋಷಣ ವಿಭಾಗದ ಮುಖ್ಯಸ್ಥ ಪ್ರೊ. ಆರ್. ಶೇಖರ್ ನಾಯಕ್ ಇದ್ದರು. ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಡಾ.ಲಕ್ಷ್ಮೀನಾರಾಯಣ ಶೆಣೈ ಸ್ವಾಗತಿಸಿದರು.

> ಮಾನಸಿಕ ಮತ್ತು ದೈಹಿಕ ಸ್ವಾಸ್ಥ್ಯಕ್ಕೆ ಆಹಾರ ಶಿಸ್ತು ಮುಖ್ಯ. ಆಹಾರದ ಕ್ರಮ ಜೀವನದ ಮೌಲ್ಯವಾಗುತ್ತದೆ. ಆಹಾರದ ಹವ್ಯಾಸ ಸರಿಯಾಗಿದ್ದರೆ ನಮ್ಮ ಆರೋಗ್ಯ ನಮ್ಮ ಕೈಯಲ್ಲಿಯೇ ಇರುತ್ತದೆ. ಆದ್ದರಿಂದ ಉತ್ತಮ ಆರೋಗ್ಯ ಅಭ್ಯಾಸವನ್ನು ರೂಢಿಸಿಕೊಳ್ಳಬೇಕು. ಬೀದಿ ಬದಿ, ಹೋಟೆಲ್‌ಗಳಲ್ಲಿ ಆಹಾರ ಸೇವನೆಗಿಂತ ಮನೆಯಲ್ಲಿಯೇ ಸಿದ್ಧಪಡಿಸಿದ ಆಹಾರವನ್ನು ತಿನ್ನಬೇಕು.
>
> – ಎಂ.ಕೆ. ಸವಿತಾ, ಮೈಸೂರು ವಿವಿ ಕುಲಸಚಿವೆ

## ಸಂಕ್ಷಿಪ್ತ ಸುದ್ದಿ

### ನ.06 ರಂದು ದಿಶಾ ಸಮಿತಿ ಸಭೆ

**ಮಂಡ್ಯ:** ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯನ್ನು ಕೇಂದ್ರ ಸರ್ಕಾರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರು ಹಾಗೂ ಮಂಡ್ಯ ಲೋಕಸಭಾ ಕ್ಷೇತ್ರ ಸಂಸದರಾದ ಹೆಚ್.ಡಿ. ಕುಮಾರಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ನವೆಂಬರ್ 06 ರಂದು ಬೆಳಗ್ಗೆ 11.00 ಗಂಟೆಗೆ ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದು, ಸದರಿ ಸಭೆಗೆ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಇತರೆ ಸಿಬ್ಬಂದಿಗಳನ್ನು ನಿಯೋಜಿಸದೆ ತಪ್ಪದೇ ಹಾಜರಾಬೇಕೆಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಹಾಗೂ ಸದಸ್ಯ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 7 ರಿಂದ ಉದರ ದರ್ಶಕ ಸಂತಾನಹರಣ ಶಸ್ತ್ರ ಚಿಕಿತ್ಸೆ

**ಮಂಡ್ಯ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ನವೆಂಬರ್ ಮಾಹೆಯ ಉದರ ದರ್ಶಕ ಸಂತಾನಹರಣ ಶಸ್ತ್ರ ಚಿಕಿತ್ಸೆಯು ನವೆಂಬರ್ 7 ರಂದು ನಾಗಮಂಗಲ ಸಾರ್ವಜನಿಕ ಆಸ್ಪತ್ರೆ, ನವೆಂಬರ್ 11 ರಂದು ಶ್ರೀರಂಗಪಟ್ಟಣ ತಾಲೂಕು ಆಸ್ಪತೆ,□□ ನವೆಂಬರ್ 12 ರಂದು ಕೆ. ಆರ್. ಪೇಟೆ ತಾಲೂಕು ಆಸ್ಪತ್ರೆ, ನವೆಂಬರ್ 13 ರಂದು ಮದ್ದೂರು ತಾಲೂಕು ಆಸ್ಪತ್ರೆ, ನವಂಬರ್ 14 ರಂದು ನಾಗಮಂಗಲ ಸಾರ್ವಜನಿಕ ಆಸ್ಪತ್ರೆ, ನವೆಂಬರ್ 15 ರಂದು ಮಂಡ್ಯ ಮೀಮ್ಸ್ ಆಸ್ಪತ್ರೆ, ನವೆಂಬರ್ 18 ರಂದು ಪಾಂಡವಪುರ ಉಪ ವಿಭಾಗ ಆಸ್ಪತ್ರೆ, ನವೆಂಬರ್ 19 ರಂದು ನಾಗಮಂಗಲ ಸಾರ್ವಜನಿಕ ಆಸ್ಪತ್ರೆ, ನವೆಂಬರ್ 20 ರಂದು ಮದ್ದೂರು ತಾಲೂಕು ಆಸ್ಪತ್ರೆ, ನವೆಂಬರ್ 21 ಕೆ.ಆರ್ ಪೇಟೆ ತಾಲೂಕು ಆಸ್ಪತ್ರೆ, ನವೆಂಬರ್ 25 ರಂದು ಶ್ರೀರಂಗಪಟ್ಟಣ ತಾಲೂಕು ಆಸ್ಪತ್ರೆ ಮತ್ತು ನವೆಂಬರ್ 26 ರಂದು ಪಾಂಡವಪುರ ಉಪ ವಿಭಾಗ ಆಸ್ಪತ್ರೆಯಲ್ಲಿ ಬೆಳಿಗ್ಗೆ 10 ಗಂಟೆಗೆ ನಡೆಯಲಿದೆ ಎಂದು ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

### ಅವಧಿ ವಿಸ್ತರಣೆ

**ಮಂಡ್ಯ:** ಪಿ.ಯು.ಸಿ. ಹೊರತುಪಡಿಸಿ ಉಳಿದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ, ಅರೆಅಲೆಮಾರಿ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ", ಅಲೆಮಾರಿ, ಅರೆಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿವೇತನ, "ಶುಲ್ಕ ಮರುಪಾವತಿ", ಮತ್ತು "ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ", ಕಾರ್ಯಕ್ರಮಗಳ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ವಿಸ್ತರಿಸಲಾಗಿದೆ.

### ಪೌರಕಾರ್ಮಿಕರ ಹುದ್ದೆಗೆ ಅರ್ಜಿ ಆಹ್ವಾನ

**ಮಂಡ್ಯ:** ಮಂಡ್ಯ ನಗರಸಭೆಯಲ್ಲಿ 27, ಮದ್ದೂರು ನಗರಸಭೆಯಲ್ಲಿ 02 , ಮಳವಳ್ಳಿ ಪುರಸಭೆಯಲ್ಲಿ 03 ಪೌರಕಾರ್ಮಿಕರ ಹುದ್ದೆ ಖಾಲಿಯಿದ್ದು, ವಿಶೇಷ ನೇರ ನೇಮಕಾತಿ ಮೂಲಕ ಹುದ್ದೆ ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ನಮೂನೆ, ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲಾತಿಗಳು ಮತ್ತು ಸೂಚನೆಗಳ ವಿವರವನ್ನು ಮಂಡ್ಯ, ಮದ್ದೂರು ಮತ್ತು ಮಳವಳ್ಳಿ ನಗರಸಭೆ/ಪುರಸಭೆ ಕಛೇರಿಯಲ್ಲಿ ಪಡೆಯಬಹುದು. ಪಡೆದ ಅರ್ಜಿಯನ್ನು ಭರ್ತಿ ಮಾಡಿ ದಾಖಲಾತಿಗಳೊಂದಿಗೆ ನವೆಂಬರ್ 27 ರೊಳಗೆ ಪೌರಾಯುಕ್ತರು ಅಥವಾ ಮುಖ್ಯಾಧಿಕಾರಿಗಳಿಗೆ ಸಲ್ಲಿಸಬಹುದು.

# ಕಬ್ಬು ಬೆಳೆಗಾರರ ಬಾಕಿ ಹಣವನ್ನು ಶೀಘ್ರವಾಗಿ ಪಾವತಿಸಿ

## ರೈತರ ಸಮಸ್ಯೆಗಳನ್ನು ಆಯೋಜಿಸಿದ್ದ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ



**ಮಂಡ್ಯ:** ಜಿಲ್ಲೆಯ ಕಬ್ಬು ಬೆಳೆಗಾರರ ಬಾಕಿ ಹಣವನ್ನು ಸಕ್ಕರೆ ಕಾರ್ಖಾನೆಗಳು ಯಾವುದೇ ವಿಳಂಬ ಮಾಡದೆ ಶೀಘ್ರವಾಗಿ ಪಾವತಿ ಮಾಡಬೇಕು ಇಲ್ಲವಾದಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ಹೇಳಿದರು.

ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲೆಯ ರೈತರ ಸಮಸ್ಯೆಗಳನ್ನು ಚರ್ಚಿಸಲು ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಮೈಷುಗರ್ ಕಾರ್ಖಾನೆಯ ಬಾಯ್ಲರ್ ಹೌಸ್ ನಿರ್ಮಾಣದ ಕುರಿತು ಡಿ.ಪಿ.ಆರ್ ಕಳುಹಿಸಲಾಗಿದೆ. ಶೀಘ್ರವಾಗಿ ಮೈಷುಗರ್ ಕಾರ್ಖಾನೆಯಲ್ಲಿ ಬಾಯ್ಲರ್ ಸ್ಥಾಪನೆ ಮಾಡಲಾಗುವುದು ಎಂದರು.

ಸಿ.ಡಿ.ಎಸ್ ನಾಲೆ ಸುಮಾರು 400 ವರ್ಷಗಳ ಹಳೆಯ ನಾಲೆಯಾಗಿದೆ, ಪ್ರಸ್ತುತ ಸಿ.ಡಿ.ಎಸ್ ನಾಲೆಯ ಪ್ರಮುಖ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗುತ್ತಿದೆ ರೈತರು ಸಹಕರಿಸಬೇಕು, ಶ್ರೀರಂಗಪಟ್ಟಣದಲ್ಲಿ ಸಿ.ಡಿ.ಎಸ್ ನಾಲೆ ಒಡೆದು ರೈತರಿಗೆ ಉಂಟಾಗಿದ್ದ ಬೆಳೆ ಹಾನಿಯಾ ಕುರಿತಾಗಿ ಸಮೀಕ್ಷೆ ಮಾಡಲಾಗಿದ್ದು ಪರಿಹಾರದ ಪೋರ್ಟಲ್‌ನಲ್ಲಿ ಮಾಹಿತಿ ದಾಖಲಿಸಲಾಗಿದೆ. ಮುಂದಿನ ದಿನಗಳಲ್ಲಿ ಅರ್ಹ ಫಲಾನುಭವಿಗಳ ಖಾತೆಗೆ ಪರಿಹಾರದ ಹಣ ನೇರವಾಗಿ ಜಮೆಯಾಗುತ್ತದೆ ಎಂದು ಹೇಳಿದರು.

ಪರಿಹಾರದ ಹಣವನ್ನು ಸಾಲಕ್ಕೆ ಕಡಿತ ಮಾಡಿಕೊಳ್ಳುವಂತಿಲ್ಲ: ಬ್ಯಾಂಕ್ ಗಳು ರೈತರಿಗೆ ಸರ್ಕಾರ ನೀಡುವ ಪರಿಹಾರದ ಹಣ ಹಾಗೂ ಗೌರವಧನವನ್ನು ಬ್ಯಾಂಕುಗಳು ಸಾಲಕ್ಕೆ ಮನ್ನ ಮಾಡಿಕೊಳ್ಳುವಂತಿಲ್ಲ, ನಾವು ಆರ್‌ಬಿ ಐ ನಿಯಮಗಳನ್ನು ಉಲ್ಲಂಘಿಸಿ ಏನನ್ನು ಮಾಡುವಂತಿಲ್ಲ. ರೈತರು ಬ್ಯಾಂಕ್ ಗಳಲ್ಲಿ ತಮಗೆ ಉಂಟಾಗುತ್ತಿರುವ ಸಮಸ್ಯೆಗಳನ್ನು ಪಟ್ಟಿ ಮಾಡಿ ಕೊಡಿ ಆರ್ ಬಿ ಐ ನಿಯಮಗಳ ಸಡಿಲೀಕರಣಕ್ಕೆ ಶಿಫಾರಸ್ಸು ಮಾಡಿ ಮನವಿ ಸಲ್ಲಿಸುತ್ತೇವೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಈಗಾಗಲೇ ತಾತ್ಕಾಲಿಕ ಭತ್ತ ರಾಗಿ ನೋಂದಣಿ ಕೇಂದ್ರಗಳನ್ನು ತೆರೆಯಲಾಗಿದೆ, ಶಾಶ್ವತವಾಗಿ ನೋಂದಣಿ ಕೇಂದ್ರಗಳನ್ನು ತೆರೆಯಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ, ಪ್ರಸ್ತುತ ರಾಗಿಗೆ ಕೊಡಲು ರೈತರು ಮುಂದಾಗಿದ್ದಾರೆ ಭತ್ತಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ರೈತರು ನೊಂದಣಿ ಆಗಿಲ್ಲ, ನೊಂದಣಿಗೆ ಇನ್ನೂ ದಿನಗಳು ಬಾಕಿ ಇರುವುದರಿಂದ ರೈತರು ಭತ್ತಕ್ಕೆ ನೋಂದಣಿ ಮಾಡಿಕೊಳ್ಳುವ ನಿರೀಕ್ಷೆ ಇದೆ ಎಂದು ಹೇಳಿದರು.

> ರೈತರಿಗೆ ಬಾಧಿಸುತ್ತಿರುವ ಮೈಕ್ರೋ ಫೈನಾನ್ಸ್ ಗಳಿಗೆ ಈಗಾಗಲೇ ಎರಡು ಸಭೆ ನಡೆಸಿ ಸೂಚನೆ ನೀಡಲಾಗಿದೆ, ಮೈಕ್ರೋ ಫೈನಾನ್ಸ್ ಗಳು ಜಿಲ್ಲಾಡಳಿತದ ಸೂಚನೆಯಂತೆ ಕಾರ್ಯ ನಿರ್ವಹಿಸುತ್ತಿರುವ ಕುರಿತು ಪರೀಶೀಲನೆ ನಡೆಸಲಾಗುವುದು ಎಂದು ಹೇಳಿದರು. ಕೆ.ಆರ್ ಎಸ್ 20 ಕಿ.ಮೀ ವ್ಯಾಪ್ತಿಯಲ್ಲಿ ಬ್ಲಾಸ್ಟಿಂಗ್ ಮಾಡಲು ಅವಕಾಶ ಕೊಟ್ಟಿಲ್ಲ, ಸದರಿ ವ್ಯಾಪ್ತಿಯಲ್ಲಿ ಯಾರೆ ಬ್ಲಾಸ್ಟಿಂಗ್ ಮಾಡುತ್ತಿದ್ದರೆ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು, ಜಿಲ್ಲೆಯಲ್ಲಿ ಯಾರೆ ಅಕ್ರಮವಾಗಿ ಗಣಿಗಾರಿಕೆ ಮಾಡಿದರೆ ಮುಲಾಜಿಲ್ಲದೆ ಕಠಿಣ ಕಾನೂನು ಕ್ರಮ ಜಾರಿಗೊಳಿಸಲಾಗುವುದು.
>
> – ಡಾ.ಕುಮಾರ, ಜಿಲ್ಲಾಧಿಕಾರಿ

ಸಭೆಯಲ್ಲಿ ಮೈ ಶುಗರ್ ಅಧ್ಯಕ್ಷ ಸಿ.ಡಿ ಗಂಗಾಧರ್, ಕಾವೇರಿ ನೀರಾವರಿ ನಿಗಮದ ರಘುರಾಮ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಅಶೋಕ್, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಪುಷ್ಪ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಅರುಣ್ ಕುಮಾರ್, ರೈತ ಮುಖಂಡರುಗಳಾದ ಸುನಂದಾ ಜಯರಾಂ, ಇಂಡುವಾಳು ಚಂದ್ರಶೇಖರ್, ಮಂಜೇಶ್ ಗೌಡ, ಸಿ ಕುಮಾರಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಹೃದಯ ವೈಶಾಲ್ಯ ಯೋಜನೆ: ಇಸಿಜಿ ಯಂತ್ರಗಳ ವಿತರಣೆ



**ಮಂಡ್ಯ:** ಹೃದಯವು ಮಾನವನ ಜೀವನಾಡಿ, ಹೃದಯದ ಸ್ಪಂದನೆಯೇ ಮನುಷ್ಯನ ಜೀವನ. ಅಂತಹ ಹೃದಯದ ಆರೋಗ್ಯದ ಬಗ್ಗೆ ಪ್ರತಿಯೊಬ್ಬರೂ ಆದ್ಯ ಗಮನ ನೀಡುವುದು ಅನಿವಾರ್ಯ.

ಆದರೆ ಗ್ರಾಮೀಣ ಭಾಗದ ಜನರು ಆರೋಗ್ಯದ ಬಗ್ಗೆ ಅತೀ ಕಾಳಜಿಯಿಂದ ಗಮನವಹಿಸುವುದಿಲ್ಲ. ಆರೋಗ್ಯವು ತೀರಾ ಹದಗೆಟ್ಟಾಗ ಮಾತ್ರ ವೈದ್ಯರನ್ನು ಭೇಟಿ ಮಾಡುತ್ತಾರೆ. ಅಲ್ಲದೇ ಹೃದಯ ಸಂಬಂಧಿ ಸಮಸ್ಯೆಗಳಿಗೆ ಯಾವುದೇ ವೈದ್ಯಕೀಯ ತಪಾಸಣೆ ಮಾಡಿಸಿಕೊಳ್ಳಬೇಕಾದರೆ ಖುದ್ದು ನಗರಕ್ಕೆ ಬರಬೇಕಾದ ಅನಿವಾರ್ಯತೆ ಇತ್ತು.

ಗ್ರಾಮೀಣ ಜನತೆಯ ಬದುಕಿನ ರೀತಿಯನ್ನು ಅರಿತಿದ್ದ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಮೊದಲ ಬಾರಿಗೆ ಗ್ರಾಮೀಣ ಭಾಗದ ಜನರಿಗೆ ಅನುಕೂಲ ಮಾಡುವ ಉದ್ದೇಶದಿಂದ ಮಂಡ್ಯ ಜಿಲ್ಲೆಯಲ್ಲಿ 2023 ರಲ್ಲಿ ಮಹತ್ವಾಕಾಂಕ್ಷೆಯ 'ಹೃದಯ ವೈಶಾಲ್ಯ ಯೋಜನೆ' ಎಂಬ ಮಹತ್ವದ ಯೋಜನೆ ರೂಪಿಸಿದರು.

ಹೃದಯಕ್ಕೆ ಸಂಬಂಧಿಸಿದ ಸಮಸ್ಯೆಗೆ ಸೂಕ್ತ ಸಮಯದಲ್ಲಿ ತಪಾಸಣೆ ಮಾಡಿಸಿಕೊಳ್ಳದಿದ್ದರೆ ಜೀವಕ್ಕೆ ಅಪಾಯವಾಗುವ ಸಾಧ್ಯತೆ ಇರುವುದರಿಂದ ನುರಿತ ತಜ್ಞರೊಂದಿಗೆ ಈ ಬಗ್ಗೆ ಕೂಲಂಕಷವಾಗಿ ಚರ್ಚಿಸಿ, ಅಂತಿಮವಾಗಿ ರೂಪುರೇಷೆಗಳನ್ನು ರೂಪಿಸಿ, ಪ್ರಾಥಮಿಕ ತಪಾಸಣೆಗೆ ಅನುಕೂಲವಾಗುವಂತೆ ಗ್ರಾಮೀಣ ಭಾಗದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕ್ಯಾಡ್ ಸಂಸ್ಥೆಯ ಸಹಭಾಗಿತ್ವ ಪಡೆದುಕೊಂಡು ಇಸಿಜಿ ಯಂತ್ರವನ್ನು ನೀಡಲು ನಿರ್ಧರಿಸಿದರು. ಹೆಸರಿಗೆ ತಕ್ಕಂತೆ ಮೊದಲ ಹಂತದಲ್ಲಿ ಮಂಡ್ಯ ಜಿಲ್ಲಾದ್ಯಂತ ಎಲ್ಲಾ ತಾಲ್ಲೂಕುಗಳ ಆಯ್ದ 35 ಪ್ರಾಥಮಿಕ ಕೇಂದ್ರಗಳಿಗೆ ಇಸಿಜಿ ಯಂತ್ರವನ್ನು ಜಿಲ್ಲಾ ಮಟ್ಟದ ಕಾರ್ಯಕ್ರಮದ ಮೂಲಕ ವಿತರಣೆ ಮಾಡಿದರು.

ಮಂಡ್ಯ ಜಿಲ್ಲೆಯ ಯಾವುದೇ ನಾಗರೀಕನು ಸಹ ಹೃದಯ ಆರೋಗ್ಯಕ್ಕೆ ಸಂಬಂಧಿಸಿದಂತೆ ತುರ್ತು ಸ್ಪಂದನೆಯನ್ನು ಪಡೆದು, ಮೂಲಭೂತ ಸೌಕರ್ಯಗಳಲ್ಲೊಂದಾದ ಆರೋಗ್ಯ ಸೇವೆಯಿಂದ ವಂಚಿತರಾಗದಂತೆ ಶ್ರಮಿಸುವುದು ಯೋಜನೆಯ ಮಹತ್ ಉದ್ದೇಶವಾಗಿದ್ದು, ಈ ಯೋಜನೆಯಿಂದ ಗ್ರಾಮೀಣ ಭಾಗದ ಎಲ್ಲಾ ಜನರಿಗೆ ಅರೋಗ್ಯ ಸೇವೆ ದೊರಕುವಂತಾಗಲಿ ಎಂಬುವುದೇ ಕಾರ್ಯಕ್ರಮದ ಧ್ಯೇಯವಾಗಿರುತ್ತದೆ ಎಂದು ಕಾರ್ಯಕ್ರಮವನ್ನು ಮುಕ್ತಾಯಗೊಳಿಸಲಾಯಿತು.

# ಮನೆ ಮನೆಗೆ ನಮ್ಮ ಕ್ಲಿನಿಕ್



**ಚಾಮರಾಜನಗರ:** ನಗರದ ಭಗೀರಥ ನಗರದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಪಿಎಂ-ಎಬಿಐಎಂ ಹಣಕಾಸು ಯೋಜನೆ ಅಡಿಯಲ್ಲಿ ' ನಮ್ಮ ಕ್ಲಿನಿಕ್ ' ಸ್ಥಾಪಿಸಲಾಗಿದೆ. ರಾಜ್ಯ ಸರ್ಕಾರ ತಂದಿರುವ ನಮ್ಮ ಕ್ಲಿನಿಕ್ ಒಳ್ಳೆಯ ಕಾರ್ಯಕ್ರಮವಾಗಿದ್ದು, ಮನೆ ಮನೆಗೆ ಆರೋಗ್ಯ ತಲುಪಿಸುವ ಕೆಲಸವಾಗಿದೆ. ಅಲ್ಲದೇ ಇದು ಮಹಿಳೆಯರಿಗೆ ಹೆಚ್ಚಿನ ಅನುಕೂಲ ಕಲ್ಪಿಸಿಕೊಡಲಿದ್ದು ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ಸಹಕಾರಿಯಾಗಿದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಚಿದಂಬರ ಮಾತನಾಡಿ, ನಮ್ಮ ಕ್ಲಿನಿಕ್‌ನಲ್ಲಿ ಸಣ್ಣಪುಟ್ಟ ರೋಗಗಳಿಗೆ ಚಿಕಿತ್ಸೆ ದೊರೆಯುತ್ತದೆ. ಇದರ ಸದುಪಯೋಗವನ್ನು ಜನತೆ ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ನಗರಸಭಾ ಅಧ್ಯಕ್ಷ ಸುರೇಶ್, ಪೌರಾಯುಕ್ತ ಪ್ರಕಾಶ್, ಆರ್‌ಸಿಎಚ್ ಡಾ.ರಾಜೇಶ್, ಟಿಎಚ್‌ಒ ಡಾ.ಶ್ರೀನಿವಾಸ ಸೇರಿದಂತೆ ಇತರರಿದ್ದರು.

# ಬಿರ್ಸಾ ಮುಂಡಾ ಜಯಂತಿ ಆಚರಣೆ: ಕಾರ್ಯಕ್ರಮಗಳ ಆಯೋಜನೆ

ಚಾಮರಾಜನಗರ: ನವದೆಹಲಿಯ ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ ಭಗವಾನ್ ಶ್ರೀ ಬಿರ್ಸಾ ಮುಂಡಾ ಜಯಂತಿಯ ಅಂಗವಾಗಿ ಜನಜಾತೀಯ ಗೌರವ್ ದಿವಸ್ ಆಚರಣೆ ಸಂಬಂಧ ನವೆಂಬರ್ 1 ರಿಂದ 14 ರವರೆಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಏಕಲವ್ಯ ಮಾದರಿ ವಸತಿ ಶಾಲೆ ಮತ್ತು ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ಆಶ್ರಮ ಶಾಲೆಗಳಲ್ಲಿ ಕಾರ್ಯಕ್ರಮ ನಡೆಸಲಾಗುತ್ತಿದೆ.

ನವೆಂಬರ್ 5ರಂದು ಏಕಲವ್ಯ ಮಾದರಿ ವಸತಿ ಶಾಲೆಯಲ್ಲಿ ಲೈಂಗಿಕ ದೌರ್ಜನ್ಯ ಮತ್ತು ಮಾದಕದ್ರವ್ಯ ವ್ಯಸನದ ಬಗ್ಗೆ ಅರಿವು ಮೂಡಿಸುವರು. 6ರಂದು ಪಿಎಂ ಜನ್ ಮನ್/ಧರ್ತಿ ಅಬಾ ಗ್ರಾಮ ಉತ್ಕರ್ಷ್ ಅಭಿಯಾನ ಕಾರ್ಯಕ್ರಮದಡಿ ಆಯ್ಕೆಯಾಗಿರುವ 11 ಗ್ರಾಮಗಳಲ್ಲಿ ಬುಡಕಟ್ಟು ಸವಲತ್ತು ಅಭಿಯಾನ ಕೈಗೊಳ್ಳಲಾಗುವುದು. ನವೆಂಬರ್ 7ರಂದು ಏಕಲವ್ಯ ಮಾದರಿ ವಸತಿ ಶಾಲೆಯಲ್ಲಿ ಬುಡಕಟ್ಟು ಸಂಸ್ಕೃತಿಗೆ ಸಂಬಂಧಿಸಿದಂತೆ ಶಾಲಾ ಮಟ್ಟದಲ್ಲಿ ನಾಟಕ ಸ್ಪರ್ಧೆ ನಡೆಯಲಿದೆ.

ನವೆಂಬರ್ 8 ಮತ್ತು 9ರಂದು ಬುಡಕಟ್ಟು ಹಾಡಿಗಳು ಹಾಗೂ ಆಶ್ರಮ ಶಾಲೆ ಮತ್ತು ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿ ಬುಡಕಟ್ಟು ಸಂಸ್ಕೃತಿಗೆ ಸಂಬಂಧಿಸಿದಂತೆ ಆಟಗಳು, ಕ್ರೀಡಾ ಉತ್ಸವಗಳು ನಡೆಯಲಿವೆ. 1 ರಿಂದ 4ನೇ ತರಗತಿ ಮಕ್ಕಳಿಗೆ ಕಪ್ಪೆ ಓಟ, ಮ್ಯೂಜಿಕಲ್ ಚೇರ್, ಲೆಮನ್ ಮತ್ತು ಸ್ಪೂನ್ ಹಾಗೂ 5 ರಿಂದ 7ನೇ ತರಗತಿ ಮಕ್ಕಳಿಗೆ ಮ್ಯೂಜಿಕಲ್ ಚೇರ್, ಲೆಮನ್ ಮತ್ತು ಸ್ಪೂನ್, ಕಪ್ ಜೋಡಿಸುವ ಸ್ಪರ್ಧೆ, ಗೋಣಿಚೀಲ ಓಟದ ಸ್ಪರ್ಧೆ ಮತ್ತು ಗುಂಪು ಸ್ಪರ್ಧೆಯಾಗಿ ಖೋ-ಖೋ, ವಾಲಿಬಾಲ್, ಕಬ್ಬಡಿ ಕ್ರೀಡೆಗಳು ನಡೆಯಲಿವೆ. ನವೆಂಬರ್ 10ರಂದು ಬುಡಕಟ್ಟು ಸಂಸ್ಕೃತಿಗೆ ಸಂಬಂಧಿಸಿದಂತೆ ಶಾಲಾ ಮಟ್ಟದಲ್ಲಿ ರಸಪ್ರಶ್ನೆ ಸ್ಪರ್ಧೆ ನಡೆಯಲಿದೆ.

ನವೆಂಬರ್ 11ರಂದು ವಿಶೇಷ ದುರ್ಬಲ ಬುಡಕಟ್ಟು ಸಮುದಾಯವಿರುವ 13 ಹಾಡಿಗಳಲ್ಲಿ ಎಲ್ಲಾ ಬುಡಕಟ್ಟು ಮತ್ತು ವಿಶೇಷ ದುರ್ಬಲ ಬುಡಕಟ್ಟು ಸಮುದಾಯಕ್ಕೆ ಸಂಬಂಧಿಸಿದಂತೆ ಆರೋಗ್ಯ ಸಮೀಕ್ಷೆ, ಐ.ಇ.ಸಿ ಅಭಿಯಾನ, ಕಾರ್ಯಗಾರಗಳು ಹಾಗೂ ಸಿಕಲ್ ಸೆಲ್ ಅನಿಮಿಯಾ ಬಗ್ಗೆ ಆರೋಗ್ಯ ತಪಾಸಣೆ ನಡೆಸಲಾಗುವುದು. 12ರಂದು ಚಾಮರಾಜನಗರ ತಾಲೂಕಿನ ರಂಗಸಂದ್ರ ಆಶ್ರಮ ಶಾಲೆಯಲ್ಲಿ ತಾಲ್ಲೂಕು ಮಟ್ಟದ ಕ್ರೀಡಾ ಸ್ಪರ್ಧೆಗಳು ನಡೆಯಲಿವೆ. 13ರಂದು ಮಲ್ಲಯ್ಯನಪುರದ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಬುಡಕಟ್ಟು ಸಂಸ್ಕೃತಿಗೆ ಸಂಬಂಧಿಸಿದಂತೆ ತಾಲ್ಲೂಕು ಮಟ್ಟದಲ್ಲಿ ಸಾಂಸ್ಕೃತಿಕ ವೇಷ-ಭೂಷಣ ಮತ್ತು ಸಂಗೀತ ಸ್ಪರ್ಧೆಗಳು ನಡೆಯಲಿವೆ.

ನವೆಂಬರ್ 15 ರಂದು ಬುಡಕಟ್ಟು ನಾಯಕ "ಭಗವಾನ್ ಬಿರ್ಸಾ ಮುಂಡಾ ರವರ ಜನ್ಮದಿನದ ಅಂಗವಾಗಿ "ಜನಜಾತೀಯ ಗೌರವ್ ದಿವಸ್" ವೇದಿಕೆ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# 2027ರ ಜನಗಣತಿಗೆ ಪೂರ್ವ ಪರೀಕ್ಷೆ

ಗುಂಡ್ಲುಪೇಟೆ : ಎರಡು ಹಂತದಲ್ಲಿ ಜನಗಣತಿ 2027 ಪೂರ್ವ ಪರೀಕ್ಷಾ ಅಭ್ಯಾಸ ಸಮೀಕ್ಷಾ ಕಾರ್ಯ ನಡೆಯಲಿದೆ ಎಂದು ತಹಸೀಲ್ದಾರ್ ಎಂ. ಎಸ್.ತನ್ಮಯ್ ತಿಳಿಸಿದರು.

ಪಟ್ಟಣದ ತಾಲೂಕು ಕಚೇರಿಯ ಸಭಾಂಗಣದಲ್ಲಿ ನಡೆದ ಜನಗಣತಿ 2027 ಪೂರ್ವ ಪರೀಕ್ಷಾ ಅಭ್ಯಾಸ ಗಣತಿದಾ ರರು ಹಾಗೂ ಮೇಲ್ವಿಚಾರಕರಿಗೆ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ದೇಶದ ಮೊದಲ ಸಂಪೂರ್ಣ ಡಿಜಿಟಲ್ ಮತ್ತು ಜಾತಿ ಅಂತರ್ಗತ ಗಣತಿಯಲ್ಲಿ ಗುಂಡ್ಲುಪೇಟೆ ತಾಲೂಕಿನಲ್ಲಿ 27 ಹಳ್ಳಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ಹೇಳಿದರು.

ಮೊದಲ ಡಿಜಿಟಲ್ ಜನಗಣ ತಿಯಲ್ಲಿ ಸಾರ್ವಜನಿಕರು ನವೆಂಬರ್ 1ರಿಂದ 7 ರವರೆಗೆ ತಮ್ಮ ವಿವರಗಳನ್ನು www.test.censuss.gov.in <http://www.test.censuss.gov.in/> /se ವೆಬ್ ಸೈಟ್ ಗೆ ಭೇಟಿ ನೀಡಿ ಅಥವಾ ಕ್ಯೂರ್ ಸ್ಕ್ಯಾನ್ ಮಾಡುವ ಮೂಲಕ ಡಿಜಿಟಲ್ ರೂಪದಲ್ಲಿ ಭರ್ತಿ ಮಾಡಲು ಅವಕಾಶ ಕಲ್ಪಿಸಿದೆ. ಇದರಿಂದ ಗಣತಿದಾರರ ಮೇಲಿನ ಹೊರೆ ಕಡಿಮೆಯಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಜನಗಣತಿ ನಿರ್ದೇಶನಾಲಯದ ಜಂಟಿ ನಿರ್ದೇಶಕ ಶಕ್ತಿ ಕುಮಾರ್, ಕೆ.ಜ್ಞಾನ ಪ್ರಕಾಶ್, ಉಪ ನಿರ್ದೇಶಕ ಮ್ಯಾಥ್ಯೂಸ್, ಸಹಾಯಕ ನಿರ್ದೇಶಕ ಜಯೇಶ್, ಇಒ ಷಣ್ಮುಗಂ, ಕ್ಷೇತ್ರ ಶಿಕ್ಷಣಾಧಿಕಾರಿ ಟಿ.ಆರ್.ಸ್ವಾಮಿ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಪವನ್ ಕುಮಾರ್, ಅಕ್ಷರ ದಾಸೋಹ ನಿರ್ದೇಶಕ ಸತೀಶ್ ಸೇರಿದಂತೆ ಇತರರಿದ್ದರು.

# ಅಮಚವಾಡಿ: ವಾಲ್ಮೀಕಿ ಜಯಂತಿ ಆಚರಣೆ



**ಚಾಮರಾಜನಗರ:** ತಾಲ್ಲೂಕಿನ ಅಮಚವಾಡಿ ಗ್ರಾಮದಲ್ಲಿ ನಾಯಕ ಸಮುದಾಯದ ವತಿಯಿಂದ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಮಾಡಲಾಯಿತು.

ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಅವರು ಮಹರ್ಷಿ ವಾಲ್ಮೀಕಿ ಭಾವಚಿತ್ರ ಮೆರವಣಿಗೆಗೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣದ ಅಂಶಗಳು ಇಂದಿಗೂ ಪ್ರಸ್ತುತವಾಗಿವೆ. ರಾಮಾಯಣದ ಮೌಲ್ಯಗಳು ಭವಿಷ್ಯಕ್ಕೆ ದಾರಿದೀಪ. ವಾಲ್ಮೀಕಿ ಅವರ ಆದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ನಾಯಕ ಸಮುದಾಯದವರು ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ ವಿದ್ಯಾವಂತರನ್ನಾಗಿ ಮಾಡಬೇಕು. ಎಲ್ಲರೂ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕವಾಗಿ ಅಭಿವೃದ್ಧಿ ಹೊಂದಬೇಕು ಎಂದರು.ಸಮುದಾಯದ ಜನರಲ್ಲಿ ಒಗ್ಗಟ್ಟು ಮೂಡಬೇಕು. ಆಗ ಮಾತ್ರ ಸಮಾಜ ಬಲಿಷ್ಠವಾಗಿ ರಚನೆಯಾಗಲು ಸಾಧ್ಯ. ಮಹರ್ಷಿ ವಾಲ್ಮೀಕಿ ಅವರ ತತ್ವ, ಆದರ್ಶಗಳನ್ನು ಪ್ರತಿಯೊಬ್ಬರೂ ಪಾಲಿಸಬೇಕು ಎಂದರು.

ಅದ್ದೂರಿ ಮೆರವಣಿಗೆ: ಅಮಚವಾಡಿ ಗ್ರಾಮದ ಮುಖಂಡರು ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ನಂತರ ಆರಂಭಗೊಂಡ ವಾಲ್ಮೀಕಿ ಭಾವಚಿತ್ರ ಮೆರವಣಿಗೆ ಗ್ರಾಮದ ಪ್ರಮುಖ ರಸ್ತೆಗಳ ಮುಖಾಂತರ ಅದ್ದೂರಿಯಾಗಿ ಜರುಗಿತು.

ಮೆರವಣಿಗೆಯಲ್ಲಿ ಗ್ರಾಪಂ ಅಧ್ಯಕ್ಷೆ ತೇಜಸ್ವಿನಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ವಿ.ಚಂದ್ರು, ತಾಲೂಕು ನಾಯಕ ವಿದ್ಯಾಭಿವೃದ್ಧಿ ಸಂಘದ ಉಪಾಧ್ಯಕ್ಷ ಪು.ಶ್ರೀನಿವಾಸನಾಯಕ, ಜಿಪಂ ಮಾಜಿ ಸದಸ್ಯ ಎಸ್.ಸೋಮನಾಯಕ, ನಗರಸಭಾ ಮಾಜಿ ಅಧ್ಯಕ್ಷ ಸುರೇಶ್‌ನಾಯಕ, ಬಿಜೆಪಿ ಮಾಜಿ ಅಧ್ಯಕ್ಷ ಆರ್.ಸುಂದರ್, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಶಿವು ವಿರಾಟ್, ಮುಖಂಡರಾದ ಚಂದ್ರಶೇಖರ್, ಅಮಚವಾಡಿ ನಾಯಕ ಸಮುದಾಯದ ಯಜಮಾನರು, ಕುಲಸ್ಥರು, ಎಲ್ಲಾ ಕೋಮಿನ ಯಜಮಾನರು, ಗ್ರಾಮಸ್ಥರು ಹಾಜರಿದ್ದರು.

# ಪಾಠದ ಜತೆ ಆಟೋಟವೂ ಇರಬೇಕು

## ವಿದ್ಯಾರ್ಥಿಗಳಿಗೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಕರೆ



**ಚಾಮರಾಜನಗರ:** ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಭಾಗವಹಿಸಬೇಕು ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ಸಲಹೆ ನೀಡಿದರು.

ನಗರದ ಡಾ.ಬಿ.ಆರ್.ಅಂ ಬೇಡ್ಕರ್ ಭವನದಲ್ಲಿ ಸರಕಾರಿ ಪ್ರಥಮ ದರ್ಜೆ ಕಾಲೇಜು ವತಿಯಿಂದ ಮಂಗಳವಾರ ಆಯೋಜಿಸಿದ್ದ ಸಾಂಸ್ಕೃತಿಕ, ಕ್ರೀಡೆ, ರಾಷ್ಟ್ರೀಯ ಸೇವಾ ಯೋ ಜನೆ, ರೆಡ್‌ಕ್ರಾಸ್, ರೋವರ್ಸ್, ರೇಂಜರ್ಸ್, ಅಭಿವ್ಯಕ್ತಿ ಹಾಗೂ ನಾನಾ ಸಮಿತಿಗಳ ಉದ್ಘಾಟನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಸರಕಾರಿ ಶಾಲಾ ಕಾಲೇ ಜುಗಳಲ್ಲಿ ದೊರೆಯುವಂತಹ ಎಲ್ಲಾ ಸೌಲಭ್ಯಗಳನ್ನು ಸದುಪಯೋಗ ಪಡೆದುಕೊಳ್ಳುವ ಮೂಲಕ ಗುಣಮಟ್ಟದ ಶಿಕ್ಷಣ ವನ್ನು ಪಡೆದು ವಿದ್ಯಾರ್ಥಿಗಳು ಉನ್ನತ ಮಟ್ಟಕ್ಕೆ ಬೆಳೆಯಬೇಕು. ಅಲ್ಲದೇ ಶಿಕ್ಷಣ ಜತೆಗೆ ಕಲೆ, ಕ್ರೀಡೆ, ಸೇವೆ ಸೇರಿದಂತೆ ಇನ್ನಿತರ ಚಟುವಟಿಕೆಗಳಲ್ಲಿ ತೊಡಗಿಸಿ ಕೊಳ್ಳುವ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಈ ಹಿಂದೆ ಎಂಎಲ್‌ಎ, ಸಚಿವ, ಎಂಪಿ, ಮುಖ್ಯಮಂತ್ರಿಯಿಂದ ಹೇಳಿದರೆ ಕೆಲಸ ಸಿಗುತ್ತಿತ್ತು. ಆದರೆ, ಈಗ ಸ್ಪರ್ಧಾತ್ಮಕ ಯುಗವಾಗಿದ್ದು, ತಮ್ಮಲ್ಲಿ ಪ್ರತಿಭೆಯಿದ್ದರೆ ಮಾತ್ರ ಉದ್ಯೋಗ ಲಭಿಸುತ್ತದೆ ಎಂದರು.

ಚಾ.ನಗರ ವಿಶ್ವ ವಿದ್ಯಾನಿಲಯ ಕುಲಪತಿ ಪ್ರೊ.ಎಂ.ಆರ್.ಗಂಗಾಧರ್ ಮಾತನಾಡಿ, ಸಮಾಜದಲ್ಲಿ ಬದಲಾವಣೆಯಾಗಬೇಕಾದರೆ ಅದು ಶಿಕ್ಷಣದಿಂದ ಮಾತ್ರ. ಆದ್ದರಿಂದ ಪ್ರತಿಯೊಬ್ಬರೂ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಮಹತ್ವ ನೀಡಬೇಕು.ಪಾಠ ಪ್ರವಚನಗಳ ಜತೆ ನಾನಾ ಚಟುವಟಿಕೆಗಳಲ್ಲಿ ಭಾಗಿಯಾಗಬೇಕು. ಈ ನಿಟ್ಟಿನಲ್ಲಿ ಕಾಲೇಜುಗಳು ಮಕ್ಕಳಲ್ಲಿನ ಪ್ರತಿಭೆಯನ್ನು ಹೊರತರಬೇಕು ಎಂದು ಹೇಳಿದರು.

ಇದೇ ವೇಳೆ ನಾನಾ ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಿ ಹಲವು ಬಹುಮಾನಗಳನ್ನು ಗಳಿಸಿದ್ದ ಕಾಲೇಜಿನ ವಿದ್ಯಾರ್ಥಿ ನವೀನ್‌ಕುಮಾರ್ ಅವರನ್ನು ಸನ್ಮಾನಿಸಲಾಯಿತು. ಹಾಸನಾಂಬೆ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿದ್ದ ಸ್ಕೌಟ್ಸ್ ಅಂಡ್ ಗೈಡ್ಸ್ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರವನ್ನು ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಡ್ರಾಮಾ ಜೂನಿಯರ್ ಕಲಾವಿದ ಗೌತಮ್‌ರಾಜ್, ಕಾಲೇಜಿನ ಪ್ರಾಂಶುಪಾಲೆ ಡಾ.ಆರ್.ಎಸ್.ಅಶ್ವಿನಿ, ಎನ್‌ಎಸ್‌ಎಸ್ ಸಂಚಾ ಲಕ ಡಾ.ಮಲ್ಲೇಶ್, ಸಾಂಸ್ಕೃತಿಕ ಸಮಿತಿ ಸಂಚಾಲಕಿ ಡಾ.ಶಾಲಿನಿ, ಐಕ್ಯೂಎಸಿ ಸಂಚಾಲಕ ನಾರಾಯಣ, ಕೀಡಾ ಮತ್ತು ರೇಂಜರ್ಸ್ ಸಂಚಾಲಕಿ ದೀಪಿತಾ, ರೋವರ್ಸ್ ಸಂಚಾಲಕ ಡಾ. ನಾಗೇಂದ್ರಕುಮಾರ್, ಯುವ ರೆಡ್‌ಕ್ರಾಸ್ ಸಂಚಾಲಕ ಚಂದ್ರಶೇಖರ್, ಅಭಿವ್ಯಕ್ತಿ ಸಂಚಾಲಕಿ ಚಂದ್ರಕಲಾ ಸೇರಿದಂತೆ ಇತರರಿದ್ದರು.

> ಖಾಸಗಿ ಕಾಲೇಜಿಗಿಂತಲೂ ಸರಕಾರಿ ಕಾಲೇಜಿನಲ್ಲಿ ಇರುವಂತಹ ನುರಿತ ಉಪನ್ಯಾಸಕರು ಗುಣಾತ್ಮಕವಾದ ಶಿಕ್ಷಣವನ್ನು ಕೊಡುತ್ತಿದ್ದು, ಜಿಲ್ಲೆಯಲ್ಲಿ ಎಲ್ಲಾ ಶಿಕ್ಷಣ ಸಂಸ್ಥೆಗಳನ್ನು ತೆರೆಯುವ ಮೂಲಕ ಹೊರಜಿಲ್ಲೆಗೆ ನಮ್ಮ ಮಕ್ಕಳು ಅಲೆದಾಡುವುದನ್ನು ತಪ್ಪಿಸಲಾಗಿದೆ.
>
> – ಸಿ.ಪುಟ್ಟರಂಗಶೆಟ್ಟಿ, ಶಾಸಕ

## ಸಂಕ್ಷಿಪ್ತ ಸುದ್ದಿ

### ನ.9 ರಂದು: ಬೆಟ್ಟದ ಪದನಾಮ ಕಾರ್ಯಕ್ರಮ

**ಶ್ರವಣಬೆಳಗೊಳ:** ಚಾರಿತ್ರ ಚಕ್ರವರ್ತಿ ಆಚಾರ್ಯ ಶ್ರೀ 108ನೇ ಶಾಂತಿಸಾಗರ ಮಹಾರಾಜರ ಪ್ರತಿಮೆ ಪ್ರತಿಷ್ಠಾಪನಾ ಮಹೋತ್ಸವ ಮತ್ತು ಶ್ರೀ ಕ್ಷೇತ್ರದಲ್ಲಿ ನಾಲ್ಕನೇ ಬೆಟ್ಟದ ಪದನಾಮ ಅನಾವರಣ ಕಾರ್ಯಕ್ರಮ ಇದೇ ತಿಂಗಳ 9ರಂದು ಜರುಗಲಿದೆ ಎಂದು ಶ್ರೀ ಕ್ಷೇತ್ರದ ಪರಮಪೂಜ್ಯ ಜಗದ್ಗುರು ಸ್ವಸ್ತಿಶ್ರೀ ಚಾರುಕೀರ್ತಿ ಪಂಡಿತಾ ಚಾರ್ಯವರ್ಯ ಭಟ್ಟಾರಕ ಪಟ್ಟಾಚಾರ್ಯವರ್ಯ ಮಹಾಸ್ವಾಮೀಜಿ ತಿಳಿಸಿದರು.

ಇಂದು ಶ್ರೀಮಠದಲ್ಲಿ ಸುದ್ದಿಯಲ್ಲಿ ಮಾಹಿತಿ ನೀಡಿದ ಪೂಜ್ಯರು, ಉತ್ತರ ಕರ್ನಾಟಕದ ಭೋಜ ಗ್ರಾಮದಲ್ಲಿ ಸಾತನೌಡರಾಗಿ 1872 ರಲ್ಲಿ ಜನಿಸಿ, ಧರ್ಮ ಚಿಂತನೆ, ರತ್ನತ್ರಯ, ಧರ್ಮ ಪಾಲನೆ, ನಿರತಿಚಾರ ಪೂರ್ವಕವಾಗಿ ಪಾಲಿಸುತ್ತಾ ದೇವಶಾಸ್ತ್ರ ಗುರುಗಳಲ್ಲಿ ಅನುರಕ್ತಿ, ಪ್ರಾಣಿ-ಪಕ್ಷಿಗಳ ಮೇಲಿನ ದಯೆ, ಕಿರಿಯರ ಮೇಲೆ ವಾತ್ಸಲ್ಯ, ಗುರುಗಳಲ್ಲಿ ಅಪಾರ ಭಕ್ತಿ ಹೊಂದಿದ್ದರು. 1912 ರಲ್ಲಿ ಶ್ರವಣಬೆಳಗೊಳಕ್ಕೆ ಆಗಮಿಸಿ ಬಾಹುಬಲಿ ದರ್ಶನ ಪಡೆದು

ನಿಸ್ಪೃಹ ವ್ಯಕ್ತಿತ್ವ, ಮೃದುತ್ವ, ಸರಳತೆ, ಗಂಭೀರ ಸ್ವರೂಪದ ಆಚಾರ್ಯ ಶ್ರೀಗಳವರು, ವೈರಾಗ್ಯದಿಂದ ದೇವೇಂದ್ರ ಕೀರ್ತಿ ಸ್ವಾಮಿಗಳಾದವರಿಂದ ಕ್ಷುಲ್ಲಕ ದೀಕ್ಷೆ ಪಡೆದು ನಂತರ ಫಾಲ್ಗುಣ ಶುಕ್ಲ ಚತುದರ್ಶಿ 1920 ರಲ್ಲಿ ಸ್ವಯಂ ಮುನಿದೀಕ್ಷೆ ಪಡೆದರು.

ದೇಶ ವಿಹಾರ ಮಾಡಿ ದೆಹಲಿಯಲ್ಲಿ ನಿರಂತರ ಪ್ರತಿಭಟನೆ ನಡೆಸಿ ದಿಗಂಬರ ಮುನಿಗಳು ಎಲ್ಲೆಡೆ ವಿಹಾರ ಮಾಡಲು ಅಂದಿನ ಬ್ರಿಟೀಷ್ ಸರ್ಕಾರದ ಅನುಮತಿ ಕೊಡಿಸುವಲ್ಲಿ ಶ್ರೀಗಳ ಪಾತ್ರ ದೊಡ್ಡದು ಎಂದರು. ಈ ಮೂಲಕ ದೇಶದಲ್ಲಿ ಶ್ರಮಣ ಮುನಿ ಪರಂಪರೆ ನಶಿಸುತ್ತಾ ಬರುವಾಗ ಚಾರಿತ್ರ ಸೂರ್ಯನ ಉದಯವಾದಂತೆ ಬಂದ ಮಹಾರಾಜರು, 9338ಕ್ಕೂ ಅಧಿಕ ಉಪವಾಸ ಆಚರಿಸಿ ಮಹಾತಪಸ್ವಿಗಳಾಗಿದ್ದಾರೆ. ಜೈನ ಧರ್ಮಕ್ಕೆ, ಶ್ರೀಕ್ಷೇತ್ರಕ್ಕೆ ಸಾಕಷ್ಟು ಇವರ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿದರು.

# ಹೆಣ್ಣು ಮಕ್ಕಳು ಜಾಗೃತಿ, ಅರಿವು ಹೊಂದಬೇಕು

## ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಯ ತರಬೇತಿ ಕಾರ್ಯಕ್ರಮದಲ್ಲಿ ಡಾ.ನಾಗಲಕ್ಷ್ಮಿ ಚೌದರಿ

ಹಾಸನ: ಅರಿವು ಜ್ಞಾನದ ಸಂಕೇತವಾಗಿದೆ. ಪ್ರತಿಯೊಂದು ಹೆಣ್ಣು ಮಕ್ಕಳು ಜಾಗೃತಿ, ಅರಿವು ಹೊಂದಬೇಕು ಎಂದರಲ್ಲದೆ, ಎಲ್ಲರಿಗೂಅರಿವು, ಜಾಗೃತಿಯನ್ನು ಮೂಡಿಸಬೇಕು. ಆಗ ಶೇ.70 ರಷ್ಟು ಕ್ರೈಂಗಳು ಕಡಿಮೆಯಾಗುತ್ತವೆ ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌದರಿ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಂಯುಕ್ತಾಶ್ರಯದಲ್ಲಿಂದುಹಾಸನಾಂಬ ಕಲಾಕ್ಷೇತ್ರದಲ್ಲಿ ಏರ್ಪಡಿಸಿದ್ದ ಸ್ಥಳೀಯ ಮತ್ತು ಆತಂರಿಕಾ ದೂರು ನಿವಾರಣಾ ಸಮಿತಿ ಸದಸ್ಯರಿಗೆ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಯ ಕುರಿತ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಯ ಎಂದರೆ ಹೆಣ್ಣು ಮಕ್ಕಳು ಕೆಲಸ ಮಾಡುವ ಸ್ಥಳಗಳಲ್ಲಿ ಲೈಂಗಿಕ ದೌರ್ಜನ್ಯ ತಡೆಗಟ್ಟುವುದಾಗಿದೆ ಹೆಣ್ಣು ಮಕ್ಕಳು ತಮಗೆ ಇರುವಂತಹ ಹಕ್ಕುಗಳ ಬಗೆಗೆ ತಿಳಿದುಕೊಳ್ಳುವುದಕ್ಕಾಗಿಯೇ ಈ ಕಾರ್ಯಗಾರವನ್ನು ಆಯೋಜಿಸಲಾಗಿದೆ. ಎಲ್ಲರೂ ಇದರ ಸದುಪಯೋಗ ಪಡೆದುಕೊಳ್ಳಿ ಎಂದು ತಿಳಿಸಿದರು.

ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಯ ಕುರಿತು2013ರಲ್ಲಿಯೇ ಸುಪ್ರೀಂ ಕೋರ್ಟ್ ಗೆಜೆಟೆಡ್ ನೋಟಿಫಿಕೇಶನ್ ಮಾಡಿದೆ. ಹೆಣ್ಣು ಮಕ್ಕಳ ಸುರಕ್ಷತೆಯ ದೃಷ್ಠಿಯಿಂದಲೇ ಬಹಳಷ್ಟು ಕಾನೂನುಗಳು ಇವೆ ಅವುಗಳ ಕುರಿತು ತಿಳಿದುಕೊಂಡ ಹೆಣ್ಣು ಹೆಚ್ಚು ಶಕ್ತಿಯುತವಾಗಿ ಸಮಾಜದಲ್ಲಿ ಹೋರಾಟ ಮಾಡುತ್ತಾಳೆ ಆದ್ದರಿಂದ ಪ್ರತಿಯೊಂದು ಹೆಣ್ಣು ಮಕ್ಕಳು ಕಾನೂನಿನ ಕುರಿತು ತಿಳಿದುಕೊಳ್ಳಬೇಕು ಎಂದರು.

ಸರ್ಕಾರ ಪ್ರತಿ ಇಲಾಖೆಗಳಿಗೆ ಜಾಗೃತಿಯನ್ನು ಮೂಡಿಸುವುದಕ್ಕಾಗಿಯೇಕೋಟ್ಯಾಂತರ ರೂಪಾಯಿಗಳನ್ನು ಕೊಡುತ್ತದೆ. ಇವುಗಳ ಬಗೆಗೆ ಪ್ರತಿಯೊಂದು ಜಿಲ್ಲೆಯಲ್ಲೂ ಪ್ರತಿಯೊಂದು ತಾಲೂಕಿನಲ್ಲೂ ಹಳ್ಳಿಯಲ್ಲೂ



ಪ್ರತಿಯೊಬ್ಬರು ತಿಳಿದುಕೊಂಡರೆಪ್ರತಿಯೊಬ್ಬರು ಜಾಗೃತರಾಗುತ್ತಾರೆ ಪ್ರಶ್ನಿಸುವುದನ್ನುಕಲಿತುಕೊಳ್ಳಬೇಕು ಎಂದರು.

ಕೆಲಸದ ಸ್ಥಳದಲ್ಲಿಅಧಿಕಾರಿಗಳು ನಿಮ್ಮನ್ನು ನೋಡುವಂತಹ ದೃಷ್ಟಿ ವಿಚಾರಧಾರೆಗಳು ಸರಿ ಇಲ್ಲದೆ ಇದ್ದರೂ ಸಹ ನೀವುಗಳು ದೂರನ್ನು ಸಲ್ಲಿಸಬಹುದು. ಹತ್ತು ಅಥವಾ ಹತ್ತಕ್ಕಿಂತ ಹೆಚ್ಚು ಮಹಿಳೆಯರು ಸರ್ಕಾರಿ ಅಥವಾ ಖಾಸಗಿ ಯಾವುದೇ ಸ್ಥಳದಲ್ಲಿಯಾಗಲಿ ಕೆಲಸ ನಿರ್ವಹಿಸುತ್ತಿದ್ದರೆ ಅಲ್ಲಿ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಯ ಸಮಿತಿ ಇರಬೇಕು ಎಂದು ತಿಳಿಸಿದರು.

ತಾಯಿ ತನ್ನ ಮನೆಯನ್ನು ನಿಭಾಯಿಸಿಕೆಲಸಕ್ಕೆ ಬರುತ್ತಾಳೆ. ಆಗ ಅವಳು ಮಾನಸಿಕವಾಗಿ ಆರೋಗ್ಯವಾಗಿದ್ದಾಗ ಮಾತ್ರ ಕೆಲಸವನ್ನು ಮಾಡಲು ಸಾಧ್ಯ. ಅವಳ ಒಂದು ಮಾನಸಿಕ ಮತ್ತು ದೈಹಿಕವಾಗಿ ಪ್ರತಿಯೊಂದು ಹೆಣ್ಣು ಮಕ್ಕಳು ಕೆಲಸದ ಸ್ಥಳಗಳಲ್ಲಿ ಸುರಕ್ಷಿತವಾಗಿರಬೇಕು ಲೈಂಗಿಕವಾಗಿ ಯಾವುದೇ ರೀತಿ ದೌರ್ಜನ್ಯ ಆಗಬಾರದು ಎನ್ನುವ ಉದ್ದೇಶದಿಂದ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಯನ್ನು ಸ್ಥಾಪಿಸಲಾಗಿದೆ ಎಂದರು.

ಹಾಸನ ಜಿಲ್ಲೆ ಕರ್ನಾಟದಲ್ಲಿ ಪ್ರಸಿದ್ಧವಾದ ಜಿಲ್ಲೆ, ದೇಶಕ್ಕೆ ಪ್ರದಾನ ಮಂತ್ರಿಯವರನ್ನು ಕೊಟ್ಟ ಜಿಲ್ಲೆಯದಾಗಿದೆ. ಇಲ್ಲಿಯಹೆಣ್ಣು ಮಕ್ಕಳು ಸುರಕ್ಷಿತವಾಗಿರಬೇಕು. ಕೆಲಸ ಮಾಡುವ ಸ್ಥಳದಲ್ಲಿ ಯಾವುದೇ ರೀತಿಯ ಮಾನಸಿಕ ಒತ್ತಡದಿಂದ ನರಳಬಾರದುಎಂಬುದೇ ನನ್ನ ಆಶಯಎಂದರು.

ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಕಾರ್ಯದರ್ಶಿಗಳಾದ ರೂಪ ಆರ್ ಅವರು ಮಾತನಾಡಿ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆಯ ಸಮಿತಿಯಲ್ಲಿರುವಂತಹ ಸದಸ್ಯರುಗಳು ಬಹಳ ಸಮಸ್ಯೆಗಳನ್ನ ಎದುರಿಸಿ ಬಂದವರಾಗಿದ್ದೀರಿ. ನಿಮ್ಮ ರೀತಿಯಾಗಿ ಅನೇಕಮಹಿಳೆಯರು ಸಮಸ್ಯೆಗಳಿಂದ, ತೊಂದರೆಗಳನ್ನು ಅನುಭವಿಸುತ್ತಿರುವವರಿದ್ದಾರೆ

ಇವರಿಗೆ ನೀವು ಸಹಾಯಕರಾಗಿ ಇರಬೇಕು ಅದಕ್ಕಾಗಿ ಮೊದಲು ನೀವು ಮಾಹಿತಿಗಳನ್ನು ತಿಳಿದುಕೊಂಡಿರಬೇಕು ಹಾಗಾಗಿಈ ಕಾರ್ಯಗಾರದಲ್ಲಿ ತಿಳಿಸುವಂತಹ ಮಾಹಿತಿಗಳು ನಿಮಗೆ ಉಪಯೋಗಕರವಾಗಲಿವೆ ಎಲ್ಲರೂ ಕಾರ್ಯಕ್ರಮದ ಸದಪಯೋಗ ಪಡೆದುಕೊಳ್ಳಿ ಎಂದರು.

ಹಿರಿಯ ಸಾಹಿತಿಗಳಾದ ರೂಪ ಹಾಸನ್ ಅವರು ಮಾತನಾಡಿ ನಮ್ಮ ಜಿಲ್ಲೆಯ ಜಿಲ್ಲಾಧಿಕಾರಿ ಕಚೇರಿಯಲ್ಲಿ ಈ ಹಿಂದೆ ಇದ್ದ ಜಿಲ್ಲಾಧಿಕಾರಿ ಸತ್ಯಭಾಮ ಅವರ ಅಧ್ಯಕ್ಷತೆಯಲ್ಲಿ ಕಾರ್ಯಗಾರವನ್ನು ಮಾಡಲಾಗಿತ್ತು. ಸರ್ಕಾರಿ ಅಧಿಕಾರಿಗಳಿಗೆ ಸರ್ಕಾರಿ ನೌಕರರಿಗೆ ಈ ಕಾಯ್ದೆಯ ಕುರಿತಾಗಿ ಮಾಹಿತಿ ಗೊತ್ತಿಲ್ಲದೆ ಇರುವ ಸ್ಥಿತಿ ನಿರ್ಮಾಣವಾಗಿದೆ. ಖಾಸಗಿ ಸಂಸ್ಥೆಗಳಲ್ಲಿ ಇಂದಿಗೂ ಕೂಡ ಆ ಕಾರ್ಯಗಾರಗಳನ್ನು ಮಾಡುತ್ತಿದ್ದಾರೆ.ಎಲ್ಲರೂ ಈ ಕಾಯ್ದೆಯ ಕುರಿತು ತಿಳಿದುಕೊಳ್ಳುವುದರ ಮೂಲಕ ದಿಟ್ಟತನದಿಂದ ದೌರ್ಜನಗಳನ್ನು ಎದುರಿಸುವಂತಹ ಸಾಧ್ಯತೆಗಳಾಗಲಿ ಎಂದು ತಿಳಿಸಿದರು.

ದೌರ್ಜನ್ಯವಾದಾಗ ಅವರ ಬೆಂಬಲವಾಗಿ ನಿಲ್ಲುವಂತಹದು ಒಂದು ಭಾಗವಾದರೆ ದೌರ್ಜನ್ಯ ಆಗದಂತೆ ತಡೆಗಟ್ಟುವುದು ಹೇಗೆ ಎಂಬುದರ ಕುರಿತಾಗಿ ಈ ಕಾರ್ಯಗಾರಗಳು ಹೆಣ್ಣು ಮಕ್ಕಳನ್ನು ಸಶಕ್ತರನ್ನಾಗಿ ಮಾಡುತ್ತಿವೆ ಎಂದರು.

ಈ ವೇಳೆಯಲ್ಲಿ ಅಪರ ಜಿಲ್ಲಾಧಿಕಾರಿ ಮಂಜುನಾಥ ಉಪಸ್ಥಿತರಿದ್ದರು.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಧರಣಿ ಕುಮಾರ್ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

> ಕೇವಲ ಪುಸ್ತಕಕ್ಕೆ ಮಾತ್ರ ಸೀಮಿತವಾಗದೆ ವಾಸ್ತವವನ್ನು ತಿಳಿದುಕೊಳ್ಳುವಂತಹ ಜ್ಞಾನವಂತರಾಗಬೇಕು. ಪೋಲಿಸ್ ಇಲಾಖೆಯಲ್ಲಿ ನಿಮಗೆ ಸರಿಯಾಗಿ ಸ್ಪಂದಿಸದೆ ಇದ್ದಾಗ ಅಲ್ಲಿ ಒಂದು ಕ್ಯೂಆರ್ ಕೋಡ್ ಅನ್ನು ಇಟ್ಟಿರುತ್ತಾರೆ ಅದನ್ನು ಸ್ಕ್ಯಾನ್ ಮಾಡಿದಾಗ ನಿಮಗೆ ಕೆಲವೊಂದು ಪ್ರಶ್ನೆಗಳನ್ನು ಕೇಳಲಾಗುತ್ತದೆ. ನೀವು ನಿಮ್ಮ ಸಮಸ್ಯೆಗಳನ್ನ ವಿವರಿಸಬಹುದು ಇದರ ಕುರಿತು ಅರಿವಿದ್ದಾಗ ಮಾತ್ರ ಈ ರೀತಿಯಾಗಿ ಸಮಸ್ಯೆಗಳನ್ನ ಬಗೆಹರಿಸಿಕೊಳ್ಳಬಹುದು ಎಂಬುದು ತಿಳಿಯುತ್ತದೆ ಹಾಗಾಗಿ ಎಲ್ಲರೂ ಅರಿವು ಮತ್ತು ಜಾಗೃತಿಯನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.
>
> – **ಡಾ.ನಾಗಲಕ್ಷ್ಮಿ**, ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ

## ಡಾ.ನಾಗಲಕ್ಷ್ಮಿ ಚೌದರಿ ವಸತಿ ನಿಲಯಕ್ಕೆ ಭೇಟಿ ನೀಡಿ ಪರೀಶಿಲನೆ

**ಹಾಸನ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಡಿ ದೇವರಾಜ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಕ್ಕೆಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌದರಿ ಅವರುಭೇಟಿ ಮಾಡಿ ವಿದ್ಯಾರ್ಥಿಗಳು ತಮ್ಮ ಸಮಸ್ಯೆಗಳನ್ನು ಆಲಿಸಿದ್ದಾರೆ.

ಈ ವಿದ್ಯಾರ್ಥಿ ನಿಲಯದಲ್ಲಿ 140 ರಿಂದ 200 ಜನ ವಿದ್ಯಾರ್ಥಿನಿಯರು ಇದ್ದು, ವಿದ್ಯಾರ್ಥಿ ನಿಲಯದ ಕಟ್ಟಡ ಶೀತಗೊಂಡಿರುತ್ತದೆ. ಆಹಾರ ಸರಿ ಇರುವುದಿಲ್ಲ, ಶೌಚಾಲಯದ ವ್ಯವಸ್ಥೆ, ಸ್ವಚ್ಛತೆ ಇರುವುದಿಲ್ಲ.4-5 ತಿಂಗಳಿನಿಂದಕಿಟ್‌ಗಳನ್ನು ನೀಡಿರುವುದಿಲ್ಲ, ಸಿಸಿಟಿವಿ ಕ್ಯಾಮರಾಗಳ ಕೊರತೆ ಇದೆ ಹಾಗೂ ಹೆಚ್ಚು ವಿದ್ಯಾರ್ಥಿಗಳು ಒಂದೇ ರೂಂನಲ್ಲಿ ಇರುವುದರಿಂದ ತೊಂದರೆಯಾಗುತ್ತಿದೆಎಂಬ ಅಹವಾಲುಗಳನ್ನು ಸ್ವೀಕರಿಸಿ ಕೂಡಲೇ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

## ಮೊದಲ ಪುಟದಿಂದ

### ಕೌಶಲ್ಯ ವಿವಿ ಸ್ಥಾಪನೆಗೆ ಚಿಂತನೆ

2032ರ ಹೊತ್ತಿಗೆ ಕರ್ನಾಟಕವನ್ನು ಒಂದು ಟ್ರಿಲಿಯನ್ ಡಾಲರ್ ಆರ್ಥಿಕತೆಯ ರಾಜ್ಯವನ್ನಾಗಿಸುವುದು ನಮ್ಮ ಗುರಿ. ಈ ಗುರಿಯನ್ನು ಸಾಧಿಸಲು ನಮಗಿರುವ ಪ್ರಬಲ ಅಸ್ತ್ರವೆಂದರೆ ನಮ್ಮ ಜನ – ಕೌಶಲ್ಯ ಭರಿತ, ಭವಿಷ್ಯಕ್ಕೆ ತಯಾರಾದ ಹಾಗೂ ನಾವೀನ್ಯತೆವುಳ್ಳ ಕಾರ್ಮಿಕಶಕ್ತಿ ಎಂದರು.

ಕೌಶಲ್ಯಾಭಿವೃದ್ಧಿಯಲ್ಲಿ ಕರ್ನಾಟಕ ಸದಾ ಮುಂಚೂಣಿಯಲ್ಲಿರುವ ರಾಜ್ಯವಾಗಿದ್ದು, ದೇಶದಲ್ಲಿ ಪ್ರತ್ಯೇಕವಾಗಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವ ನೋಪಾಯ ಇಲಾಖೆಯನ್ನು ಪ್ರಾರಂಭಿಸಿದ ರಾಜ್ಯಗಳಲ್ಲಿ ಒಂದಾಗಿದೆ. ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯ ಮೂಲಕ ಕೌಶಲ್ಯವನ್ನು ರಾಜ್ಯದ ಮೂಲೆ ಮೂಲೆಗೂ ಕೊಂಡೊಯ್ದಿದ್ದೇವೆ. 5 ಲಕ್ಷ ಯುವಜನರನ್ನು ತಲುಪುವ ಗುರಿ ಹೊಂದಿದ್ದರೂ ನಾವು ಅದಕ್ಕೂ ಹೆಚ್ಚು ಜನರನ್ನು ತಲುಪಿದ್ದೇವೆ. ಯುವಯುಗ ಯೋಜನೆಯಡಿ ಸುಧಾರಿತ ಡಿಜಿಟಲ್ ಕೌಶಲ್ಯವನ್ನು 1.10 ಲಕ್ಷ ಜನರಿಗೆ ಒದ ಗಿಸುವ ಮೂಲಕ ಕರ್ನಾಟಕ ಕೈಗಾರಿಕಾ ಕ್ರಾಂತಿಯನ್ನು 4 ನೇ ಸ್ಥಾನದಲ್ಲಿದೆ ಎಂದು ವಿವರಿಸಿದರು.

ಕಳೆದ ಎರಡು ವರ್ಷಗಳಲ್ಲಿ ರಾಜ್ಯಾದ್ಯಂತ 34 ಮೆಗಾ ಉದ್ಯೋಗ ಮೇಳಗಳನ್ನು ಹಮ್ಮಿಕೊಂಡಿದ್ದು 1.43 ಲಕ್ಷ ಉದ್ಯೋಕಾಂಕ್ಷಿಗಳು ಭಾಗವಹಿ ಸಿದ್ದಾರೆ. 27, 123 ಜನರಿಗೆ ಉದ್ಯೋಗಾವಕಾಶಗಳು ಲಭಿಸಿವೆ. ಬದಲಾಗುತ್ತಿರುವ ಜಾಗತಿಕ ಆರ್ಥಿಕತೆಗೆ ತಕ್ಕಂತೆ ರಾಜ್ಯದ ಕೌಶಲ್ಯ ದೃಷ್ಟಿಯನ್ನು ಪರಿವರ್ತಿಸಲಾಗಿದೆ ಎಂದು ಅವರು ತಿಳಿಸಿದರು.

## ಉಪ ರಾಷ್ಟ್ರಪತಿ ಆಗಮನ: ಅಗತ್ಯ ಸಿದ್ಧತೆಗೆ ಸೂಚನೆ



**ಹಾಸನ:** ಶ್ರವಣಬೆಳಗೊಳಕ್ಕೆನ.09 ರಂದು ಮಾನ್ಯ ಉಪ ರಾಷ್ಟ್ರಪತಿ ಅವರು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಕಾರ್ಯಕ್ರಮದಅಗತ್ಯ ಸಿದ್ಧತೆಗೆ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಲತಾಕುಮಾರಿಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಶ್ರವಣಬೆಳಗೊಳದ ಪ್ರವಾಸಿ ಮಂದಿರದಲ್ಲಿಂದು ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರುಯಾವುದೇ ಲೋಪಕ್ಕೆ ಅವಕಾಶ ನೀಡದಂತೆ ಅಧಿಕಾರಿಗಳು ಸಮನ್ವಯತೆಯಿಂದ ಕರ್ತವ್ಯ ನಿರ್ವಹಿಸಲು ಸೂಚಿಸಿದರಲ್ಲದೆ, ಅಧಿಕಾರಿಗಳು ಕಾರ್ಯಕ್ರಮದ ಹಿನ್ನೆಲೆಯಲ್ಲಿ ಮಾಡಿಕೊಂಡಿರುವ ತಯಾರಿ ಬಗ್ಗೆ ವರದಿ ನೀಡುವಂತೆ ತಿಳಿಸಿದರು.

ಮಾರ್ಗಸೂಚಿಯಂತೆ ವೇದಿಕೆ ಮೇಲೆ ಎಲ್ಲಾ ಕುರ್ಚಿಗಳು ಒಂದೇ ರೀತಿ ಇರಬೇಕು. ಪ್ರತಿಯೊಬ್ಬರು ತಮ್ಮ ತಮ್ಮ ಜವಾಬ್ದಾರಿಯನ್ನು ಎಚ್ಚರಿಕೆಯಿಂದ ನಿರ್ವಹಿಸಿ ಎಂದು ತಿಳಿಸಿದರಲ್ಲದೆ,ಎಸ್ಕಾರ್ಟ್ಸ್ ವಾಹನಗಳ ಸಂಖ್ಯೆ, ಯಾವ ಮಾದರಿ ವಾಹನ ಹಾಗೂ ವಾಹನ ಚಾಲಕರ ಮೊಬೈಲ್ ನಂಬರ್ ಪಡೆದುಕೊಳ್ಳಿ ಎಂದು ತಿಳಿಸಿದರು.

ನಿರಂತರವಾಗಿ ವಿದ್ಯುತ್ ಸಂಪರ್ಕ ಇರುವಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಕಾರ್ಯಕ್ರಮದ ಸ್ಥಳದಲ್ಲಿ ಸಿ.ಸಿ.ಕ್ಯಾಮರ ಅಳವಡಿಸುವಂತೆ ಸೂಚನೆ ನೀಡಿದರು.

ರಸ್ತೆಗಳ ಅಕ್ಕಪಕ್ಕದಲ್ಲಿ ಸ್ವಚ್ಛತೆಗೆ ಕ್ರಮ, ಕಾರ್ಯಕ್ರಮದ ದಿನದಂದು ತಾತ್ಕಾಲಿಕವಾಗಿ ಮಟ್ಟನ್, ಚಿಕನ್ ಅಂಗಡಿಗಳ ಮುಚ್ಚಲು ಕ್ರಮವಹಿಸಿ ಎಂದರಲ್ಲದೆ, ಬೀದಿ ನಾಯಿಗಳ ಹಾವಳಿ ತಡೆಗೆ ಕೂಡ ಕ್ರಮವಹಿಸುವಂತೆ ತಿಳಿಸಿದರಲ್ಲದೆ, ಸೈನೇಜ್ ಬೋರ್ಡ್ ಹಾಕುವಂತೆ ಸೂಚಿಸಿದರು.

## ಜ್ಯೋತಿಗೌಡನಪುರ ಪ್ರಕರಣ: ಆರೋಪಿ ಬಂಧನ

ಚಾಮರಾಜನಗರ: ತಾಲ್ಲೂಕಿನ ಜ್ಯೋತಿಗೌಡಪುರ ಗ್ರಾಮದಲ್ಲಿ ಕಳೆದ ಕೆಲವು ದಿನಗಳ ಹಿಂದೆ ನಡೆದಿದ್ದ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರ ಇರುವ ಫ್ಲೆಕ್ಸ್ ವಿರೂಪಗೊಳಿಸಿ, ಬುದ್ದ ವಿಹಾರದಲ್ಲಿದ್ದ ವಿಗ್ರಹವನ್ನು ಧ್ವಂಸ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯೊಬ್ಬನನ್ನು ಪೊಲೀಸರು ಬಂಧಿಸಿರುವುದಾಗಿ ಎಸ್ಪಿ ಡಾ. ಕವಿತಾ ರವರು ಹೇಳಿದರು.

ಚಾಮರಾಜನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಮಂಗಳವಾರ ಕರೆದಿದ್ದ ಸುದ್ದಿ ಗೋಷ್ಠಿ ಯಲ್ಲಿ ಮಾತನಾಡಿದ ಪೊಲೀಸ್ ವರಿಷ್ಠಾಧಿಕಾರಿ ಡಾ. ಕವಿತಾ ರವರು, ಜೋತಿಗೌಡನಪುರ ಗ್ರಾಮದಲ್ಲಿ ಕಳೆದ 2 ತಿಂಗಳ ಹಿಂದೆ ಮಂಜುನಾಥ್ ಅಲಿಯಾಸ್ ಪೆಂಡಾಲ್ ಎಂಬ ವ್ಯಕ್ತಿ ಮದ್ಯಪಾನ ಮಾಡಿ ಪರಿಶಿಷ್ಟ ಸಮುದಾಯದ ಮಹಿಳೆಯೊಂದಿಗೆ ಜಗಳವಾಡುವ ವೇಳೆ ಚಪ್ಪಲಿಯಿಂದ ಮಹಿಳೆಗೆ ಹೊಡೆದಿದ್ದನು ಎನ್ನುವ ಕಾರಣಕ್ಕೆ ಗ್ರಾಮದಲ್ಲಿ ನ್ಯಾಯ ಪಂಚಾಯ್ತಿ ಮಾಡಿ 60 ಸಾವಿರ ರೂಪಾಯಿ ದಂಡ ವಿಧಿಸಿದ್ದರು. ಇದರಿಂದ ಕುಪಿತಗೊಂಡಿದ್ದ ಮಂಜುನಾಥ ಅಕ್ಟೋಬರ್ 23 ರ ರಾತ್ರಿ ಮದ್ಯಪಾನ ಮಾಡಿ ಅಂಬೇಡ್ಕರ್ ಭಾವಚಿತ್ರ ಇರುವ ಫ್ಲೆಕ್ಸ್ ವಿರೂಪಗೊಳಿಸಿ, ಬುದ್ದನ ವಿಗ್ರಹವನ್ನು ಧ್ವಂಸ ಮಾಡಿದ್ದು ದೃಡಪಟ್ಟಿದ್ದು , ಈತನನ್ನು ವಶಕ್ಕೆ ಪಡೆದ ಪೊಲೀಸರು ವಿಚಾರಣೆ ನಡೆಸಿದ ಬಳಿಕ ಬಂಧಿಸಿದ್ದಾರೆ.

## ಸಾಧನೆಗೆ ಆತ್ಮವಿಶ್ವಾಸ, ಛಲ, ಗುರಿ ಮುಖ್ಯ: ಎಂ.ಕೆ. ಸವಿತಾ



ಮೈಸೂರು : ಸಾಧನೆಗೆ ಆತ್ಮವಿಶ್ವಾಸ, ಛಲ ಮತ್ತು ಗುರಿ ಮುಖ್ಯ ಎಂದು ಮೈಸೂರು ವಿಶ್ವವಿದ್ಯಾನಿಲಯ ಕುಲಸಚಿವೆ ಎಂ.ಕೆ. ಸವಿತಾ ಹೇಳಿದರು.

ಕನ್ನಡ ಜಾನಪದ್ ಪರಿಷತ್ ವತಿಯಿಂದ ಜಯಲಕ್ಷ್ಮೀಪುರಂ ಸಂತ ಜೋಸೆಫರ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಂಗಳವಾರ ಏರ್ಪಡಿಸಿದ್ದ ಕನ್ನಡ ರಾಜ್ಯೋತ್ಸವ ಹಾಗೂ ರಾಷ್ಟಕವಿ ಕುವೆಂಪು ರಚಿಸಿರುವ ನಾಡಗೀತೆಗೆ ನೂರರ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡ ಮಾಧ್ಯಮದಲ್ಲಿ ಓದಿದರೆ ಕೆಲಸ ಸಿಗುವುದಿಲ್ಲ ಎಂಬ ಮನೋಭಾವ ಬಿಡಿ ಎಂದು ಕಿವಿಮಾತು ಹೇಳಿದರು.

ಹಳ್ಳಿಯಿಂದಲೇ ಬಂದ ನಾನು ಪತ್ರಿಕೆ ಹಾಗೂ ಪುಸ್ತಕಗಳನ್ನು ಓದುತ್ತಾ ಕೆಎಎಸ್ ಪರೀಕ್ಷೆಯನ್ನು ಪಾಸು ಮಾಡಿ, ಈಗ ಈ ಸ್ಥಾನದಲ್ಲಿದ್ದೇನೆ ಎಂದು ಅವರು ನಿದರ್ಶನವಾಗಿ ನೀಡಿದರು.

ಆಚರಣೆಗಿಂತ ಭಾಷಾಭಿಮಾನ ಮುಖ್ಯ. ಹುಯಿಲುಗೊಳ ನಾರಾಯಣರಾಯರ 'ಉದಯವಾಗಲಿ ನಮ್ಮ ಚೆಲುವ ಕನ್ನಡನಾಡು', ಡಿ.ಎಸ್. ಕರ್ಕಿ ಅವರ 'ಹಚ್ಚೇವು ಕನ್ನಡದ ದೀಪ', ಕುವೆಂಪು ಅವರ 'ಬಾರಿಸು ಕನ್ನಡ ಡಿಂಡಿಮ' ಮೊದಲಾದ ಗೀತೆಗಳನ್ನು ಕೇಳುತ್ತಿದ್ದರೆ ಮೆ□ರೋಮಾಂಚನವಾಗುತ್ತದೆ. ಆದರೆ ಇವತ್ತಿನ ಯುವಪೀಳಿಗೆ ಸಾಮಾಜಿಕ ಜಾಲತಾಣಗಳ ಪ್ರಭಾವದಿಂದಾಗಿ ಸರಿಯಾದ ಸಾಹಿತ್ಯ ಇಲ್ಲದ ಗೀತೆಗಳನ್ನು ಹಾಡುತ್ತಾ ಕೆಟ್ಟ ಪರಂಪರೆಗೆ ನಾಂದಿ ಹಾಡುತ್ತಿದ್ದಾರೆ ಎಂದು ಅವರು ವಿಷಾದಿಸಿದರು.

ನಾಲ್ವಡಿ ಕೃಷ್ಣರಾಜ ಒಡೆಯರ್, ಸರ್ ಎಂ. ವಿಶ್ವೇಶ್ವರಯ್ಯ, ಡಾ.ಎಸ್. ರಾಧಾಕೃಷ್ಣನ್ ಮೊದಲಾದವರು ನೀಡಿರುವ ಕೊಡುಗೆಯನ್ನು ಸ್ಮರಿಸಿಕೊಳ್ಳಿ. ಕನ್ನಡ ಮಾತನಾಡಲು ಹಿಂಜರಿಕೆ ಬಿಡಿ ಎಂದರು.

ಪ್ರಾಥಮಿಕ ಹಂತದಿಂದಲೇ ಕನ್ನಡ ಕಲಿಸಬೇಕು. ಇಲ್ಲದಿದ್ದಲ್ಲಿ ಮುಂಬರುವ ವರ್ಷಗಳಲ್ಲಿ ಕನ್ನಡ ರಾಜ್ಯೋತ್ಸವವನ್ನು ಬಲವಂತವಾಗಿ ಆಚರಿಸಬೇಕಾದ ಪರಿಸ್ಥಿತಿ ಬರುತ್ತದೆ ಎಂದು ಅವರು ಎಚ್ಚರಿಸಿದರು.

ಎಂಡಿಇಎಸ್ ಕಾರ್ಯದರ್ಶಿ ರೆ.ಫಾ. ಎಡ್ವರ್ಡ್ ವಿಲಿಯಂ ಸಲ್ಡಾನ ಅಧ್ಯಕ್ಷತೆ ವಹಿಸಿದ್ದರು. ಖಜಾಂಚಿ ರೆ.ಫಾ. ನವೀನ್ ಕುಮಾರ್, ತರಬೇತಿ ಮತ್ತು ಅಭಿವೃದ್ಧಿ ವಿಭಾಗದ ಸಿಇಒ ಸೆಬಿ ಮಾವೇಲಿ, ಪಿಯು ಕಾಲೇಜು ಪ್ರಾಂಶುಪಾಲ ಪ್ರಾಂಶುಪಾಲ ಆಂಟೋ ರಿಚರ್ಡ್ ವೇದಿಕೆಯಲ್ಲಿದ್ದರು. ಪದವಿ ಕಾಲೇಜು ಪ್ರಾಂಶುಪಾಲ ಎಚ್.ಎನ್. ಚಂದ್ರಶೇಖರ್ ಸ್ವಾಗತಿಸಿದರು. ಕಜಾಪ ಜಿಲ್ಲಾಧ್ಯಕ್ಷ ಕ್ಯಾತನಹಳ್ಳಿ ಪ್ರಕಾಶ್ ಪ್ರಾಸ್ತಾವಿಕ ಭಾಷಣ ಮಾಡಿದರು. ವಿಭಾಗೀಯ ಸಂಚಾಲಕಿ ಡಾ.ಕಾವೇರಿ ಪ್ರಕಾಶ್ ಪ್ರಶಸ್ತಿ ಪುರಸ್ಕೃತರನ್ನು ಪರಿಚಯಿಸಿದರು.

ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ಎಂ. ನಾಗರಾಜು, ಕಜಾಪ ಕಾರ್ಯದರ್ಶಿ ಬೆಸೂರು ಮೋಹನ್ ಪಾಳೇಗಾರ್, ಖಜಾಂಚಿ ಜಂಟಿ ಕಾರ್ಯದರ್ಶಿ ಜಿ. ರವಿಶಂಕರ್. ಸುರೇಶಚಂದ್ರ, ದೊರೆಸ್ವಾಮಿ ಮೊದಲಾದವರು ಉಪಸ್ಥಿತರಿದ್ದರು.

## ಶಿಕ್ಷಣದ ಜೊತೆ ಹಸಿವನ್ನು ನೀಗಿಸುವ ಮಹಾರಾಣಿ ಕಲಾ ಕಾಲೇಜು

**ಮೈಸೂರು:** ಹಸಿದ ವಿದ್ಯಾರ್ಥಿನಿಯರಿಗೆ ಮಧ್ಯಾಹ್ನ ಉಚಿತವಾಗಿ ಬಿಸಿ ಊಟ ಒದಗಿಸುವ ವಿಶಿಷ್ಟ ಕಾರ್ಯಕ್ರಮಕ್ಕೆ ಇಂದು ಮಹಾರಾಣಿ ಮಹಿಳಾ ಕಲಾಕಾಲಜಿನಲ್ಲಿ ಚಾಲನೆ ನೀಡಲಾಯಿತು. ಅಕ್ಷಯ ಆಹಾರ ಪ್ರತಿಷ್ಠಾನ ಮತ್ತು ಮಹಾರಾಣಿ ಮಹಿಳಾ ಕಲಾಕೊಲೇಜಿನ ಸಂಯುಕ್ತ ಆಶ್ರಯದಲ್ಲಿ ಕಾಲೇಜಿನ ಸುಮಾರು 200 ವಿದ್ಯಾರ್ಥಿನಿಯರಿಗೆ ದಿನನಿತ್ಯ ಮಧ್ಯಾಹ್ನದ ಬಿಸಿಊಟ ಕೊಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.

ಅಕ್ಷಯ ಆಹಾರ ಪ್ರತಿಷ್ಠಾನದ ರಾಜೇಂದ್ರ ಅವರು ವಿದ್ಯಾರ್ಥಿನಿಯರನ್ನು ಉದ್ದೇಶಿಸಿ ಮಾತನಾಡುತ್ತಾ "ರೈತ ಬೆಳೆದ ಆಹಾರ ಪದಾರ್ಥಗಳು ಹಸಿದ ಹೊಟ್ಟೆ ಸೇರಬೇಕು ಕಸದ ಬುಟ್ಟಿಯನಲ್ಲ. ರಾಷ್ಟ್ರೀಯ ಸಂಪತ್ತು ಹಾಳಾಗುವುದು ಸರಿಯಲ್ಲ. ಅಕ್ಷಯ ಆಹಾರ ಜೋಡಿಗೆಯ ಚಟುವಟಿಕೆಗಳು ನನ್ನ ಮನಸ್ಸಿಗೆ ಸಮಾಧಾನವನ್ನು ನೀಡಿದೆ. ವಿದ್ಯಾಭ್ಯಾಸದ ದಿನಗಳಲ್ಲಿ ನಾನೂ ಹಸಿವನ್ನು ಅನುಭವಿಸಿದವನು . ನಮಗೆ ತಿನ್ನುವ ಹಕ್ಕಿದೆ ಬಿಸಾಡುವ ಹಕ್ಕಿಲ್ಲ" ಎಂದು ಹೇಳಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಕಾಲೇಜು ಶಿಕ್ಷಣ ಇಲಾಖೆ ಮೈಸೂರು ಪ್ರಾದೇಶಿಕ ಜಂಟಿ ನಿರ್ದೇಶಕರ ಕಚೇರಿಯ ಸಹಾಯಕ ನಿರ್ದೇಶಕರಾದ ಶ್ರೀ ನಾಗೇಂದ್ರ ಪ್ರಸಾದ್ ಎ ಬಿ ಅವರು ಯೋಜನೆಯನ್ನು ಶ್ಲಾಘಿಸಿದರು. ದಾಸೋಹ ನಮ್ಮ ಸಂಸ್ಕೃತಿಗೆ ಹೊಸದಲ್ಲ ಎಂದರು.

# ತಾಯಿ, ಶಿಶು ಮರಣ ಪ್ರಮಾಣ ಶೂನ್ಯಕ್ಕೆ ತರಲು ಪ್ರಯತ್ನಿಸಿ

## ರಾಷ್ಟ್ರೀಯ ಆರೋಗ್ಯ ಅಭಿಯಾನ ಕುರಿತು ನಡೆದ ಸಭೆಯಲ್ಲಿ ಜಿಲ್ಲಾಧಿಕಾರಿ ಲತಾ ಕುಮಾರಿ

**ಹಾಸನ:** ಜಿಲ್ಲೆಯಲ್ಲಿ ತಾಯಿ ಮತ್ತು ಶಿಶು ಮರಣ ಪ್ರಮಾಣ ಶೂನ್ಯಕ್ಕೆ ತರುವ ನಿಟ್ಟಿನಲ್ಲಿ ಮುಂಜಾಗ್ರತೆವಹಿಸಿ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿ ಬಿ.ಸಿ.ರಾಯ್ ಸಭಾಂಗಣದಲ್ಲಿ ಇಂದು ರಾಷ್ಟ್ರೀಯ ಆರೋಗ್ಯ ಅಭಿಯಾನ ಕುರಿತು ನಡೆದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಗರ್ಭಿಣಿ ಸ್ತ್ರೀಯರಿಗೆ ನಿಗದಿತ ಸಮಯದಲ್ಲಿ ನೀಡಬಹುದಾದ ಆರೋಗ್ಯ ಸೇವೆಗಳನ್ನು ತಪ್ಪದೆ ಕಲ್ಪಿಸಲು ಎಚ್ಚರವಹಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರ ಗರ್ಭಿಣಿ ಸ್ತ್ರೀಯರ ಆರೋಗ್ಯಕ್ಕಾಗಿ ವಿವಿಧ ಯೋಜನೆಗಳಡಿ ಸವಲತ್ತುಗಳನ್ನು ಒದಗಿಸುತ್ತಿದೆ ಆದರೂ ಅವರ ಕೈಗೊಳ್ಳುವುದರ ಜೊತೆಗೆ ಸಮಯದಲ್ಲಿ ಅವರು ಮರಣ ಹೊಂದಿದ ಸುರಕ್ಷತಾ ಹೆರಿಗೆಗೆ ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ನಿಗದಿತ ಸಮಯಕ್ಕಿಂತ ಮುಂಚಿತವಾಗಿ ಹೆರಿಗೆ ಆಗುವುದಕ್ಕೆ ಕಾರಣವೇನು ಎಂಬುದರ ಬಗ್ಗೆ ಕೂಡ ಎಚ್ಚರವಹಿಸಬೇಕು ಎಂದು ತಿಳಿಸಿದರು.

ತಾಲ್ಲೂಕು ಆಸ್ಪತ್ರೆಗಳಲ್ಲಿ ವಿಳಂಬ ಮಾಡದೆ ವಯಸ್ಸಿನ ಪ್ರಮಾಣ ಪತ್ರ ಹಾಗೂ ವಿಕಲಚೇತನರಿಗೆ ಯು.ಡಿ.ಐ.ಡಿ.ಪ್ರಮಾಣ ಪತ್ರ ನೀಡಲು ಸ್ಪಂದಿಸಿ ಕೆಲಸ ನಿರ್ವಹಿಸುವಂತೆ ನಿರ್ದೇಶನ ನೀಡಿದರು.

ನಮ್ಮ ಕ್ಲಿನಿಕ್ 13 ಇದ್ದು, ಇವುಗಳಲ್ಲಿ



ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸಲು ಕ್ರಮವಹಿಸುವಂತೆ ಸೂಚಿಸಿದರು.

ಏಪ್ರಿಲ್‌ನಿಂದ ಅಕ್ಟೋಬರ್ ವರೆಗೆ 5 ತಾಯಿ ಮರಣ ಹೊಂದಿದ್ದಾರೆ.ಇವುಗಳಲ್ಲಿ ನಾಲ್ಕು ಹೊರ ಜಿಲ್ಲೆಗಳಿಂದ ಬಂದವರಾಗಿದ್ದು,ಒಬ್ಬರು ಮಾತ್ರ ಹಾಸನ ಜಿಲ್ಲೆಯರಾಗಿದ್ದಾರೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಸಭೆಗೆ ಮಾಹಿತಿ ನೀಡಿದರು.

ಪೌಷ್ಟಿಕಾಂಶದ ಕೊರತೆ ಎದುರಿಸುತ್ತಿರುವ ಮಕ್ಕಳ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು ಎಂದರಲ್ಲದೆ ಅವರ ಆರೋಗ್ಯ ಸುಧಾರಣೆ ಆಗಿದೆಯಾ ಎಂದು ಫಾಲೋ ಆಫ್ ಮಾಡಿ ಎಂದು ತಿಳಿಸಿದರು.

ಎಲ್ಲಾ ಮಕ್ಕಳಿಗೆ ಒಳ್ಳೆಯ ಜೀವನ ಕೂಡುವ ನಿಟ್ಟಿನಲ್ಲಿ ಮೊದಲನೆಯದಾಗಿ ಉತ್ತಮ

ಆರೋಗ್ಯಕ್ಕಾಗಿ ಪೌಷ್ಠಿಕ ಆಹಾರ ಒದಗಿಸಲು ಗಮನಹರಿಸಿಬೇಕು ಎಂದ ಅವರು ಕೂಲಿ ಕಾರ್ಮಿಕರಿಗೆ ಮನಹೋಲಿಸಿ ಮಕ್ಕಳ ಆರೋಗ್ಯದ ಬಗ್ಗೆ ಕಾಳಜಿವಹಿಸಲುತಿಳುವಳಿಕೆ ನೀಡಬೇಕು ಎಂದು ಸೂಚಿಸಿದರು.

ನಿಗದಿತ ಸಮಯದಲ್ಲಿ ಲಸಿಕೆ ಹಾಕಿಸಲು ಹಾಗೂ ಪೌಷ್ಠಿಕ ಆಹಾರ ಒದಗಿಸುವುದರ ಜೊತೆಗೆ ನಿರ್ದಿಷ್ಟ ತೂಕ ಬರುವವರೆಗೆ ಫಾಲೋ ಆಫ್ ಮಾಡಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಗುಡ್ಡಕಾಡು ಪ್ರದೇಶದಲ್ಲಿರುವ ಗರ್ಭಿಣಿಯರು ಹೆರಿಗೆಗಾಗಿ ನಿರೀಕ್ಷಿತ ದಿನಾಂಕಕ್ಕೆ ಎರಡು ದಿನ ಮುಂಚಿತವಾಗಿ ಆಸ್ಪತ್ರೆಗೆ ಬಂದು ದಾಖಲಾಗುವಂತೆ ವೈದ್ಯರು ತಿಳಿಸಿ ಎಂದರಲ್ಲದೆ, ಎಚ್ಚರವಹಿಸಿ ತಪಾಸಣೆ ನಡೆಸಿ ಗಮನಹರಿಸಿ ಎಂದು ತಿಳಿಸಿದರು.

ಒಂದು ಸಮಿತಿ ರಚನೆ ಮಾಡಿ ಯಾವ ಕಾರಣಕ್ಕೆ ಸಾವು ಸಂಭವಿಸಿದೆ ಮತ್ತು ಮರಣ ತಪ್ಪಿಸಲು ಏನು ಮುಂಜಾಗ್ರತೆ ವಹಿಸಬೇಕಾಗಿತ್ತು ಎಂಬುದರ ಬಗ್ಗೆ ಪರಿಶೀಲನೆ ಮಾಡಿ ವರದಿ ನೀಡುವಂತೆ ತಿಳಿಸಿದರಲ್ಲದೆ, ಗಂಡಾಂತರ ಹೆರಿಗೆಗೆ ಹೆಚ್ಚಿನ ಗಮನಹರಿಸಬೇಕು ಎಂದು ತಿಳಿಸಿದರು.

ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ವೈದ್ಯರು ಲಭ್ಯವಿರುವಂತೆ ಜೊತೆಗೆ ಸಿಬ್ಬಂದಿಗಳು ಸಮವಸ್ತ್ರ ಧರಿಸಿರಬೇಕು ಎಂದು ತಿಳಿಸಿದರಲ್ಲದೆ, ಆಸ್ಪತ್ರೆಗಳಲ್ಲಿ ಸ್ವಚ್ಚತೆಗೆ ಹೆಚ್ಚಿನ ಆದ್ಯತೆ ನೀಡಿ ಎಂದು ಸೂಚಿಸಿದರು.

ಶಾಲಾ ಕಾಲೇಜು ಆವರಣದಿಂದ 200 ಗಜದೊಳಗೆ ಯಾವುದೇ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶವಿಲ್ಲ, ಈ ನಿಟ್ಟಿನಲ್ಲಿ ಕಾನೂನು ಉಲ್ಲಂಘಿಸಿದರೆ ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಆಸ್ಪತ್ರೆಗಳ ತ್ಯಾಜ್ಯ ವಿಲೇವಾರಿಗೆಆದ್ಯತೆ ನೀಡಿ ವೈಜ್ಞಾನಿಕವಾಗಿ ವಿಲೇ ಮಾಡಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಆರೋಗ್ಯ ಮತ್ತು ಸ್ವಚ್ಚತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಈ ನಿಟ್ಟಿನಲ್ಲಿ 50 ಕ್ಕಿಂತ ಹೆಚ್ಚು ಹೆಣ್ಣು ಮಕ್ಕಳಿರುವ ಪ್ರೌಢಶಾಲೆಗಳಲ್ಲಿ ಸ್ಯಾನಿಟರಿ ಪ್ಯಾಡ್ ವಿಲೇವಾರಿಗೆ ಅಗತ್ಯ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಮಂಜುನಾಥ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅನಿಲ್, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ. ನಾಗಪ್ಪ, ಆರ್.ಸಿ.ಹೆಚ್.ಅಧಿಕಾರಿ ಡಾ.ಶಿವಶಂಕರ್, ಡಾ.ರಂಗಲಕ್ಷ್ಮಿ, ಮತ್ತಿತರರು ಹಾಜರಿದ್ದರು.

## ಸಾಲು ಸುದ್ದಿ

### ಬಡವರ ಸೇವಕರಾಗಿದ್ದ ಡಾ.ವೆಂಕಟೇಶ್

**ನಾಗಮಂಗಲ:** ಸರ್ಕಾರಿ ವೈದ್ಯರಾಗಿ ಮಾನವೀಯ ಮೌಲ್ಯವುಳ್ಳ, ಸರಳ ಹಾಗೂ ಸಜ್ಜನಿಕಯ ವ್ಯಕ್ತಿಯಾಗಿ ಬಡವರಿಗೆ ಹಗಲು ರಾತ್ರಿ ಎನ್ನದೆ ನಿಜವಾದ ಸೇವೆ ಮಾಡುವ ಮೂಲಕ ಸೇವಕರಂತೆ ಡಾ.ವೆಂಕಟೇಶ್ ಕರ್ತವ್ಯನಿರ್ವಹಿಸಿದ್ದರುಎಂದುಆರೋಗ್ಯಇಲಾಖೆಯ ಉಪನಿರ್ದೇಶಕ ಡಾ.ಟಿ.ಎನ್.ಧನಂಜಯ ಹೇಳಿದರು.

ಪಟ್ಟಣದ ಎಸ್.ಎಲ್.ವಿ.ನರ್ಸಿಂಗ್ ಹೋಂ ಆವರಣದಲ್ಲಿ ಔಷಧ ವ್ಯಾಪಾರಿಗಳ ಸಂಘ, ಸರ್ಕಾರಿ ನೌಕರರ ಸಂಘ ಹಾಗೂ ಪತ್ರಕರ್ತರ ಸಂಘಗಳ ವತಿಯಿಂದಸೋಮವಾರಆಯೋಜಿಸಿದ್ದಡಾ.ಡಿ.ಎಸ್. ವೆಂಕಟೇಶ್ ಅವರಿಗೆ ನುಡಿನಮನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಬಡವರಿಗೆ ಸೇವೆ ಮಾಡುವ ಸದುದ್ದೇಶದಿಂದ ಹಲವು ದೃಢ ನಿರ್ಧಾರಗಳನ್ನು ತೆಗೆದುಕೊಳ್ಳುವ ಮೂಲಕ ನೂರಾರು ಬಡರೋಗಿಗಳಿಗೆ ಅನುಕೂಲ ಮಾಡಿಕೊಟ್ಟಿದ್ದಾರೆ. ಇದೇ ತಾಲೂಕಿನಲ್ಲಿ ಹುಟ್ಟಿದ್ದು, ಇದೇ ತಾಲೂಕಿನ ಜನರ ಸೇವೆ ಮಾಡಲು ನನಗೆ ಅವಕಾಶ ಸಿಕ್ಕಿರುವುದು ನನ್ನ ಪುಣ್ಯ ಎಂದು ಭಾವಿಸಿ ನನ್ನ ಜನ, ನನ್ನ ಆಸ್ಪತ್ರೆ ಎಂಬ ಮನೋಭಾವದಿಂದ ಸೇವೆ ಸಲ್ಲಿಸಿದ್ದರು.

ಆಡಳಿತ ವೈದ್ಯಾಧಿಕಾರಿಯಾಗಿದ್ದರು ಕೂಡ ಹಮ್ಮು ಬಿಮ್ಮುಗಳಿಲ್ಲದೆ ರೋಗಿಗಳಿಗೆ ಸರ್ಕಾರದ ಸೌಲಭ್ಯಗಳು ಸಿಗುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಸರ್ಕಾರಿ ಆಸ್ಪತ್ರೆಯನ್ನು ಕಾರ್ಪೋರೇಟ್ ಆಸ್ಪತ್ರೆಯಂತೆ ಸುಸಜ್ಜಿತವಾಗಿ ಮಾರ್ಪಾಡು ಮಾಡುವಲ್ಲಿ ಪ್ರಮುಖ



ಪಾತ್ರವಹಿಸಿದ್ದರು.ತಾಲೂಕಿನ ಬೋಗಾದಿ ಪ್ರಾಥಮಿಕ ಆಸ್ಪತ್ರೆಯಲ್ಲಿ ಹಲವು ವರ್ಷಗಳು ಸೇವೆ ಸಲ್ಲಿಸಿದ್ದರಿಂದ ಆ ಭಾಗದ ಜನರು ತಮ್ಮ ಮನೆ ಮಗನಂತೆ ಇವರನ್ನು ಕಾಣುತ್ತಿದ್ದು ಅವರ ಸೇವೆಗೆ ಸಿಕ್ಕ ಪ್ರತಿಫಲವಾಗಿದೆ. ಕೋವಿಡ್‌ಸಂದರ್ಭದಲ್ಲಿತಮ್ಮಆರೋಗ್ಯವನ್ನುಲೆಕ್ಕಿಸದೆ ಜನರಿಗೆ ಹಗಲು ರಾತ್ರಿ ಅವರೇ ನಿಂತುಕೊಂಡು ನೀಡಿದ ಸೇವೆಯನ್ನು ತಾಲೂಕಿನ ಜನರು ಮರೆಯುವಂತಿಲ್ಲ ಎಂದರು.

ತಾಲೂಕು ಸಾರ್ವಜನಿಕ ಆಸ್ಪತ್ರೆಯ ಹಿರಿಯ ವೈದ್ಯ ಡಾ.ಹರೀಶ್ ಮಾತನಾಡಿ, ಸರ್ಕಾರಿ ಆಸ್ಪತ್ರೆ ಅಭಿವೃದ್ಧಿಗೆ ಬಹಳ ಶ್ರಮಹಾಕಿದ್ದರು. ಯಾರಿಗೂ ಹೆದರದೆ, ಯಾರ ಮುಲಾಜಿಗೂ ಒಳಗಾಗದೆ ಹಾಗೂ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿದ್ದಂತಹ ಒಬ್ಬ ಉತ್ತಮ ಆಡಳಿತ ವೈದ್ಯಾಧಿಕಾರಿಯನ್ನು ಕಳೆದುಕೊಂಡಿದ್ದೇವೆ. ಎಷ್ಟು ಸ್ನೇಹಜೀವಿಯಾಗಿದ್ದರು ಕೂಡ ಕರ್ತವ್ಯ ಎಂಬುದು ಬಂದಾಗ ಅಷ್ಟೇ ಪ್ರಮಾಣಿಕವಾಗಿದ್ದರು. ಅವರ ಆಡಳಿತದಲ್ಲಿ ನಮಗೆ ಸೇವೆ ಸಲ್ಲಿಸಲು ಒಂದು ಧೈರ್ಯವಿತ್ತು.

ಏನೇ ತೊಂದರೆಗಳು ಬಂದರು ನಿಭಾಯಿಸುವಲ್ಲಿ ನಮಗೆ ಬೆನ್ನೆಲುಬಾಗಿದ್ದರು. ವೈದ್ಯಕೀಯ ವೃತ್ತಿಯ ಜತೆಗೆ ತನ್ನ ಹುಟ್ಟೂರಿಗೆ ಹಾಗೂ ಸರ್ಕಾರಿ ಶಾಲೆಗಳಿಗೆ ಹಲವು ರೀತಿಯಲ್ಲಿ ನೆರವು ನೀಡುವ ಮೂಲಕ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದು ಅವರಲ್ಲಿದ್ದ ಹುಟ್ಟೂರಿನಮಣ್ಣಿನಋಣತೀರಿಸಬೇಕೆಂಬಮಹಾದಾಸೆ ಎಲ್ಲರಿಗೂ ಮಾದರಿಯಾಗಿದ್ದು ಎಂದರು.

ಕಾರ್ಯಕ್ರಮದಲ್ಲಿ ತಾಲೂಕು ಆರೋಗ್ಯಾಧಿಕಾರಿ ಡಾ.ನಾರಾಯಣ್, ಹಿರಿಯ ವೈದ್ಯ ಡಾ.ಆದಿತ್ಯ, ಶಿಕ್ಷಕ ಎನ್.ಸಿ.ಶಿವಕುಮಾರ್, ನಿವೃತ್ತ ಪ್ರಾಂಶುಪಾಲ ಡಾ.ಬಿ.ಕೆ.ಲೋಕೇಶ್, ಮುಖಂಡರಾದ ಹನುಮಂತು, ಕೆಂಪೇಗೌಡ ಮಾತನಾಡಿದರು.

ಈ ಸಂದರ್ಭ ಡಾ.ಬಿ.ಎಸ್.ಶಶಿಕಲಾ, ಮನ್ಮುಲ್ ನಿರ್ದೇಶಕ ಲಕ್ಷ್ಮೀನಾರಾಯಣ್, ಪುರಸಭೆ ಸದಸ್ಯ ತಿಮ್ಮಪ್ಪ,ಡಾ.ಪ್ರದ್ಯುಗ್ನ,ಡಾ.ವಿನುತಾ,ಡಾ.ರಾಘವೇಂದ್ರ, ಡಾ.ಲಾಸ್ಯ, ಪತ್ರಕರ್ತರ ಸಂಘದ ಅಧ್ಯಕ್ಷ ಸೀತರಾಮು, ಎನ್.ಆರ್.ದೇವಾನಂದ್ ಸೇರಿದಂತೆ ಮತ್ತಿತರಿದ್ದರು.

# ತೀವ್ರಗೊಂಡ ಕಬ್ಬು ಬೆಳೆಗಾರರ ಪ್ರತಿಭಟನೆ

## ಅಹೋರಾತ್ರಿ ಧರಣಿ ■ 3,500 ರೂ ಬೆಂಬಲ ಬೆಲೆ ನಿಗದಿಗೆ ಒತ್ತಾಯ■ ಸರ್ಕಾರದ ವಿರುದ್ಧ ಆಕ್ರೋಶ

**ಬೆಳಗಾವಿ:** ಪ್ರತಿ ಟನ್ ಕಬ್ಬಿಗೆ 3,500 ರೂ. ಕನಿಷ್ಠ ಬೆಂಬಲ ಬೆಲೆಗೆ ಆಗ್ರಹಿಸಿ ಬೆಳಗಾವಿಯಲ್ಲಿ ರೈತರು ನಡೆಸುತ್ತಿರುವ ಪ್ರತಿಭಟನೆ ತೀವ್ರಸ್ವರೂಪ ಪಡೆದುಕೊಂಡಿದೆ. ಹಸಿರು ಸೇನೆ ರೈತ ಸಂಘದ ಬ್ಯಾನರ್ ಅಡಿಯಲ್ಲಿ ರೈತರು ಪ್ರತಿಭಟನೆ ನಡೆಸುತ್ತಿದ್ದು, ಪ್ರತಿ ಟನ್‌ಗೆ 3,200 ರೂ ನೀಡುವ ಸಕ್ಕರೆ ಕಾರ್ಖಾನೆಗಳ ಪ್ರಸ್ತಾವನೆಯನ್ನು ತಿರಸ್ಕರಿಸಿದ್ದಾರೆ.

ಮೂಡಲಗಿ ತಾಲೂಕಿನ ಗುರ್ಲಾಪುರದಲ್ಲಿ ಕಳೆದ 5 ದಿನಗಳಿಂದ ನಿರಂತರ ಅಹೋರಾತ್ರಿ ಧರಣಿ ನಡೆಸುತ್ತಿರುವ ಕಬ್ಬು ಬೆಳೆಗಾರರು, ಸಕಾರದ ನಿರ್ಲಕ್ಷ್ಯದ ವಿರುದ್ಧ ಕಿಡಿಕಾರಿದ್ದಾರೆ.

ಕಳೆದ 5 ದಿನಗಳಿಂದ ರೈತರು ಬಿರುಸಿನ ಗಾಳಿಯಲ್ಲೂ, ಚಳಿಯಲ್ಲೂ ಅಹೋರಾತ್ರಿ ಕುಳಿತು ಹೋರಾಟ ನಡೆಸುತ್ತಿದ್ದಾರೆ. ಕೆಲವರು ಸ್ಥಳದಲ್ಲೇ ಅಡುಗೆ, ಊಟ, ನಿದ್ದೆ ಮಾಡುತ್ತಾ ಹೋರಾಟ ಮುಂದುವರೆಸುತ್ತಿದ್ದಾರೆ.



ಪ್ರತಿ ಟನ್ ಕಬ್ಬಿಗೆ ಕನಿಷ್ಠ ಬೆಂಬಲ ಬೆಲೆಗೆ ಆಗ್ರಹಿಸಿ ಬೆಳಗಾವಿಯಲ್ಲಿ ರೈತರು ಪ್ರತಿಭಟನೆ ನಡೆಸಿದರು.

ಗೋಕಾಕ್ ಪಟ್ಟಣದಲ್ಲಿ, ವಿದ್ಯಾರ್ಥಿಗಳು ರೈತರೊಂದಿಗೆ ಸೇರಿ ಪ್ರಮುಖ ರಸ್ತೆಗಳ ತಡೆಹಿಡಿದರು. ಇದರಿಂದ ಬೆಳಗಾವಿ, ಸವದತ್ತಿ, ಮೂಡಲಗಿ ಮತ್ತು ಯರಗಟ್ಟಿಯನ್ನು ಸಂಪರ್ಕಿಸುವ ಪ್ರಮುಖ ಮಾರ್ಗಗಳಲ್ಲಿ ಸಂಚಾರ ಅಸ್ತವ್ಯಸ್ತಗೊಳ್ಳುವಂತಾಯಿತು.

ಹಸಿರು ಬಾವುಟಗಳನ್ನು ಹಿಡಿದಿರುವ ರೈತರು,ರಾಜ್ಯಸರ್ಕಾರ ಮತ್ತು ಸಕ್ಕರೆ ಕಾರ್ಖಾನೆ ಮಾಲೀಕರ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದಾರೆ.ಸರ್ಕಾರರೈತರಹಿತಾಸಕ್ತಿಗಳನ್ನು ನಿರ್ಲಕ್ಷಿಸಿದೆ ಎಂದು ಆರೋಪಿಸಿದ್ದಾರೆ.

ಪ್ರತಿಭಟನೆತೀವ್ರಸ್ವರೂಪಪಡೆದುಕೊಳ್ಳುತ್ತಿದ್ದು, ದಿನ ಕಳೆದಂತೆ ಪ್ರತಿಭಟನಾಕಾರರ ಸಂಖ್ಯೆ ಹೆಚ್ಚುತ್ತಲೇ ಇದೆ. ಪ್ರತಿಭಟನಾ ಸ್ಥಳದಲ್ಲಿಯೇ ರೈತರು ತಾತ್ಕಾಲಿಕ ಅಡುಗೆ ಮನೆಗಳನ್ನು ಸ್ಥಾಪಿಸಿದ್ದು, ಪ್ರತಿಭಟನಾಕಾರರಿಗೆ ಆಹಾರ ವಿತರಿಸುತ್ತಿದ್ದಾರೆ.

ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆ ಮತ್ತು ಹಲವಾರು ರೈತ ಸಂಘಟನೆಗಳು ಆಯೋಜಿಸಿರುವಈಪ್ರತಿಭಟನೆಯಲ್ಲಿಬೆಳಗಾವಿ ಮತ್ತುಹತ್ತಿರದ ಜಿಲ್ಲೆಗಳಾದ್ಯಂತ ರೈತರು ಬೃಹತ್ ಪ್ರಮಾಣದಲ್ಲಿ ಭಾಗವಹಿಸಿದ್ದಾರೆ.

ಮೂಡಲಗಿ,ರಾಯಬಾಗ್ ಮತ್ತುಗೋಕಾಕ್ ವಕೀಲರ ಸಂಘದ ವಕೀಲರು, ವಿವಿಧ ಭಾಗಗಳ ಮಾಜಿ ಸೈನಿಕರು, ವಿವಿಧ ಸಂಸ್ಥೆಗಳ ಮಠಾಧೀಶರು ಕೂಡ ಪ್ರತಿಭಟನಾಕಾರರನ್ನು ಭೇಟಿ ಮಾಡಿ ತಮ್ಮ ಬೆಂಬಲವನ್ನು ಘೋಷಿಸಿದ್ದಾರೆ.

ಪಕ್ಷಪಾತವಿಲ್ಲದೆ ಹಲವಾರು ನಾಯಕರು ಮತ್ತು ಚುನಾಯಿತ ಪ್ರತಿನಿಧಿಗಳು ರೈತರ ಬೆಂಬಲಕ್ಕೆ ನಿಂತಿದ್ದಾರೆ. ಸಂಸದ ಮತ್ತು ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಅವರು ಸೋಮವಾರ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ, ರೈತರ ಬೇಡಿಕೆಗಳನ್ನು ಈಡೇರಿಸುವಂತೆ ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ಇಂದು ಬಿಜೆಪಿ ರಾಜ್ಯ ಅಧ್ಯಕ್ಷ ಬಿ ವೈ ವಿಜಯೇಂದ್ರ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ, ರೈತರಿಗೆ ತಮ್ಮ ಪಕ್ಷದ ಬೆಂಬಲವನ್ನು ನೀಡಿದರು.

ಈ ನಡುವೆ ಪ್ರತಿಭಟನಾ ನಿರತ ರೈತರು ನೆರೆಯ ಮಹಾರಾಷ್ಟ್ರದ ಸಕ್ಕರೆ ಕಾರ್ಖಾನೆಗಳು ಟನ್‌ಗೆ 3,600 ರೂ. ಪಾವತಿಸುತ್ತಿದ್ದರೂ, ಕರ್ನಾಟಕ ಸರ್ಕಾರ ಮಾತ್ರ ನ್ಯಾಯಯುತ ಬೆಲೆ ನಿಗದಿಪಡಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದ್ದಾರೆ.

ಭಾನುವಾರಪ್ರತಿಭಟನಾಸ್ಥಳಕ್ಕೆಭೇಟಿನೀಡಿದ್ದ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಮತ್ತು ಪೊಲೀಸ್ ವರಿಷ್ಠಾಧಿಕಾರಿ ಭೀಮಾಶಂಕರ್ ಗುಳೇದ್ ಅವರು ಪ್ರತಿಭಟನಾಕಾರರ ಮನವೊಲಿಸಲು ಯತ್ನಿಸಿದರು. ಆದರೆ, ಈ ಪ್ರಯತ್ನ ವಿಫಲವಾಯಿತು.

"ಜಿಲ್ಲಾಡಳಿತವು ಕಾರ್ಖಾನೆ ಮಾಲೀಕರೊಂದಿಗೆ ನಡೆಸಿದ ಮಾತುಕತೆಗಳು ತೃಪ್ತಿದಾಯಕ ನಿರ್ಧಾರವನ್ನು ಕೈಗೊಂಡಿದ್ದರೆ, ನಾವು ಪ್ರತಿಭಟನೆಯನ್ನು ಹಿಂತೆಗೆದುಕೊಳ್ಳುವ ಕುರಿತು ಚಿಂತನೆ ನಡೆಸುತ್ತಿದ್ದೆವು. ಆದರೆ, ಅದು ಸಾಧ್ಯವಾಗಿಲ್ಲ. ಹಗಲು ರಾತ್ರಿ ಪ್ರತಿಭಟನೆ ಮುಂದುವರೆಸುತ್ತಿದ್ದೇವೆಂದು ರೈತ ಮುಖಂಡರು ಹೇಳಿದ್ದಾರೆ.

### ಶೀಘ್ರವೇ ಕಬ್ಬಿಗೆ ಬೆಲೆ ನಿಗದಿ: ಪರಮೇಶ್ವರ್

**ಬೆಂಗಳೂರು:** ಸಾಧ್ಯವಾದಷ್ಟು ಬೇಗ ಕಬ್ಬಿನ ಬೆಲೆಯನ್ನು ನಿಗದಿಪಡಿಸಿ ಸಮಸ್ಯೆಯನ್ನು ಪರಿಹರಿಸಲು ಸೂಚನೆ ನೀಡಲಾಗಿದೆ ಎಂದು ಗೃಹ ಸಚಿವ ಪರಮೇಶ್ವರ್ ಅವರು ಮಂಗಳವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಗಾವಿ ಪ್ರತಿಭಟನೆ ಕುರಿತು ಸಚಿವ ಶಿವಾನಂದ ಪಾಟೀಲ್ ಜೊತೆ ಚರ್ಚೆ ನಡೆಸಲಾಗಿದ್ದು, ಆದಷ್ಟು ಬೇಗ ಕಬ್ಬಿಗೆ ಬೆಲೆ ನಿಗದಿ ಮಾಡಿ ಸಮಸ್ಯೆ ಬಗೆಹರಿಸುವಂತೆ ತಿಳಿಸಲಾಗಿದೆ. ಇಲ್ಲದಿದ್ರೆ ಪೊಲೀಸರಿಗೆ ಪರಿಸ್ಥಿತಿ ನಿಭಾಯಿಸುವುದು ಕಷ್ಟ ಆಗುತ್ತದೆ ಎಂದು ತಿಳಿಸಿದ್ದೇನೆಂದು ಹೇಳಿದರು.

ಸತೀಶ್ ಜಾರಕಿಹೊಳಿ ಸೇರಿ ಆ ಭಾಗದ ಸಚಿವರು ಸಮಸ್ಯೆ ಬಗೆಹರಿಸುವ ಭರವಸೆ ಕೊಟ್ಟಿದ್ದಾರೆ. ನಿನ್ನೆ ಒಬ್ಬರು ರೈತರು ಆತ್ಮಹತ್ಯೆ ಪ್ರಯತ್ನಮಾಡಿದ್ದರು. ಪೊಲೀಸರು ಅವರನ್ನು ರಕ್ಷಣೆ ಮಾಡಿದ್ದಾರೆ. ಈ ರೀತಿಯ ಘಟನೆಗಳು ಮರುಕಳಿಸಬಾರದು. ಬಿಜೆಪಿಯವರು ಸಹಜವಾಗಿ ಇಂತಹ ಸಂದರ್ಭದಲ್ಲಿ ಬೆಂಬಲ ಕೊಟ್ಟಿದ್ದಾರೆ. ಇಂತಹ ಅವಕಾಶ ಮತ್ತೆ ಸಿಕ್ಕರೆ ಬಿಡುತ್ತಾರಾ? ಸರ್ಕಾರ ಕುರ್ಚಿ ಕಚ್ಚಾಟದಲ್ಲಿ ತೊಡಗಿದೆ ಎಂದು ಬಿಜೆಪಿಯವರು ಆರೋಪಿಸುತ್ತಿದ್ದಾರೆ. ಅವರು ಅಧಿಕಾರದಲ್ಲಿದ್ದಾಗ ಏನಾಗಿತ್ತು ಎಂದು ಅವರೇ ನೋಡಿಕೊಳ್ಳಲಿ ಎಂದರು.

# 8ರಿಂದ ಕಡಲೆಕಾಯಿ ಪರಿಷೆ

**ಬೆಂಗಳೂರು:** ಕಾಡುಮಲ್ಲೇಶ್ವರ ಗೆಳಯರ ಬಳಗದ ವತಿಯಿಂದ 400 ಕಡಲೆಕಾಯಿ ಮಳಿಗೆ ಶ್ರೀ ಭ್ರಮರಾಂಭ ಸಮೇತ ಶ್ರೀ ಕಾಡುಮಲ್ಲಿಕಾರ್ಜುನ ಸ್ವಾಮಿ ದೇವಾಲಯ, ಮಲ್ಲೇಶ್ವರದಲ್ಲಿ 9ನೇ ವರ್ಷದ ರೈತ ಸ್ನೇಹಿ ಮಲ್ಲೇಶ್ವರ ಕಡಲೆಕಾಯಿ ಪರಿಷೆ ನವೆಂಬರ್ 8, 9 ಮತ್ತು 10ರಂದು ಮೂರು ದಿನಗಳ 9ನೇ ವರ್ಷದ ರೈತ ಸ್ನೇಹಿ ಮಲ್ಲೇಶ್ವರ ಕಡಲೆಕಾಯಿ ಪರಿಷೆ ವಿಜೃಂಭಣೆಯಿಂದ ನಡೆಯಲಿದೆ.

ನವೆಂಬರ್ 8ರಂದು ಸಂಜೆ 5 ಗಂಟೆಗೆ ಮುಜರಾಯಿ ಮತ್ತು ಸಾರಿಗೆ ಸಚಿವರಾದ ರಾಮಲಿಂಗಾರೆಡ್ಡಿ ರವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ವಿಧಾನಪರಿಷತ್ ಸದಸ್ಯರು ಬಿ.ಕೆ. ಹರಿಪ್ರಸಾದ್, ಶ್ರೀಮತಿ ವೆಂಕಟಮ್ಮ ಮಟ್ಟ ಬಾಲ್ರ್ಜ, ಶ್ರೀಮತಿ ಸರೋಜಮ್ಮ ಬನ್ನಪ್ಪ ರವರು ವಿಶೇಷ ಅತಿಥಿಗಳಾಗಿರುತ್ತಾರೆ.

ಕಾರ್ಯಕ್ರಮದ ಅಂಗವಾಗಿ ಸಂಜೆ 6.30ಕ್ಕೆ ಹುಣ್ಣಿಮೆ ಹಾಡು–222 ಕಾರ್ಯಕ್ರಮವು ಖ್ಯಾತ ನಿರ್ದೇಶಕ ಪುಟ್ಟಣ್ಣ ಕಣಗಾಲ್ ಸ್ಮರಣಾರ್ಥವಾಗಿ "ನೆನಪುಗಳ ಕಡಲಲ್ಲಿ" ಎಂಬ ಶೀರ್ಷಿಕೆಯಲ್ಲಿ ಶ್ರೀಮತಿ ಸವಿತಾ ಗಣೇಶ್ ಪ್ರಸಾದ್ ನೇತೃತ್ವದಲ್ಲಿ ನಡೆಯಲಿದೆ. ಮುಖ್ಯ ಅತಿಥಿಗಳಾಗಿ ಶಾಸಕರಾದ ವಿಜಯಾನಂದ ಎಸ್. ಕಾಶಪ್ಪನವರ್ ಹಾಗೂ ವೀರಲೋಕ ಬುಕ್ಸ್ ಸಂಸ್ಥಾಪಕರಾದ ವೀರಕಪುತ್ರ ಎಂ. ಶ್ರೀನಿವಾಸ್ ರವರು ಭಾಗವಹಿಸಲಿದ್ದಾರೆ.

ನವೆಂಬರ್ 9ರಂದು ಸಂಜೆ ಹುಣ್ಣಿಮೆ ಹಾಡು–223 ಕಾರ್ಯಕ್ರಮದಲ್ಲಿ ಶ್ರೀಮತಿ ಮಧು ಮನೋಹರನ್ ಮತ್ತು ಕಾರ್ತಿಕ್ ಪಾಂಡವಪುರ ತಂಡದವರಿಂದ ಭಾವಸಂಗೀತ ಸಂಗಮ ನಡೆಯಲಿದೆ. ಇದೇ ದಿನ ಸಂಜೆ 5 ಗಂಟೆಗೆ ಹುಣ್ಣಿಮೆ ಹಾಡು ವಾರ್ಷಿಕ ಪ್ರಶಸ್ತಿ ಪ್ರಧಾನ ಸಮಾರಂಭ ನಡೆಯಲಿದ್ದು, ಈ ವರ್ಷದ ಗೌರವ ಡಾ. ರಾಜ್ ಕುಮಾರ್ ಮಾಧುರ್ಯದ ನೆನಪು ಪ್ರಶಸ್ತಿ ಖ್ಯಾತ ಸುಗಮ ಸಂಗೀತಗಾರ ಗರ್ತಿಕೆರೆ ರಾಘಣ್ಣ ರವರಿಗೆ ಪ್ರಧಾನವಾಗಲಿದೆ. ಪ್ರಶಸ್ತಿಯು 10,000 ನಗದು ಪುರಸ್ಕಾರವನ್ನು ಒಳಗೊಂಡಿದೆ. ಪ್ರಶಸ್ತಿ ಪ್ರಧಾನವನ್ನು ನಟಿ ಸುಧಾರಾಣಿ ಮತ್ತು ನಟ ವಿಜಯರಾಘವೇಂದ್ರ ರವರು ನೆರವೇರಿಸಲಿದ್ದಾರೆ.

ನವೆಂಬರ್ 10ರಂದು ಸಂಜೆ 5 ಗಂಟೆಗೆ ಸಂಪನ್ನ ಸಮಾರಂಭ ನಡೆಯಲಿದೆ. ಸಂಜೆ 6.30ಕ್ಕೆ ಹುಣ್ಣಿಮೆ ಹಾಡು225 ಕಾರ್ಯಕ್ರಮದಲ್ಲಿ ಕಾರ್ತಿಕ್ ಮಣಿ ಮತ್ತು ಜರ್ಮನಿ ಮೂಲದ ಮ್ಯಾಗ್ನಸ್ ಡವ್ನರ್ ತಂಡದಿಂದ ಕರ್ನಾಟಕ–ಜರ್ಮನಿ ಸಂಯುಕ್ತ ಸಂಗೀತ ತಾಳವಾದ್ಯ ಕಾರ್ಯಕ್ರಮವು ನಡೆಯಲಿದೆ.

ಅಧ್ಯಕ್ಷರಾದ ಬಿ.ಕೆ. ಶಿವರಾಂ ರವರು ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿ, "ಕಾಡುಮಲ್ಲೇಶ್ವರ ಗೆಳಯರ ಬಳಗ ಕಲೆ, ಸಾಹಿತ್ಯ, ಸಂಸ್ಕೃತಿ ಉಳಿಸಿ ಬೆಳೆಸಲು ಶ್ರಮಿಸುತ್ತಿದೆ. ಈ ಪರಿಷೆಯಲ್ಲಿ ರೈತರ ಹಿತದೃಷ್ಟಿಯಿಂದ ಯಾವುದೇ ಶುಲ್ಕ ವಿಧಿಸದೆ ಬೀದಿ ವ್ಯಾಪಾರಿಗಳು ಹಾಗೂ ರೈತರಿಗೆ ನೇರ ಮಾರಾಟದ ಅವಕಾಶ ನೀಡಲಾಗಿದೆ. ಪ್ಲಾಸ್ಟಿಕ್ ಮುಕ್ತ ಪರಿಷೆಯ ಭಾಗವಾಗಿ 1 ಲಕ್ಷಕ್ಕೂ ಹೆಚ್ಚು ಪೇಪರ್ ಬ್ಯಾಗ್ ಹಾಗೂ ಬಟ್ಟೆ ವಿತರಿಸಲಾಗುತ್ತದೆ. ಸ್ವಚ್ಛತಾ ಅಭಿಯಾನಕ್ಕೂ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ," ಎಂದು ತಿಳಿಸಿದರು.



# ಜನರನ್ನು ವಂಚಿಸಿದ್ದ 10 ಮಂದಿ ಬಂಧನ

## 18 ಲಕ್ಷ ರೂ. ಮೌಲ್ಯದ 2 ಸಾವಿರ ರೂ. ನೋಟುಗಳನ್ನು ವಶಕ್ಕೆ ಪಡೆದ ಪೊಲೀಸರು

**ಬೆಂಗಳೂರು:** ಧಾರ್ಮಿಕ ವಿಧಿವಿಧಾನಗಳ ಮೂಲಕ ಹಣದ ಮಳೆ ಸುರಿಸುವುದಾಗಿ ಭರವಸೆ ನೀಡಿ 2,000 ರೂ. ಮುಖಬೆಲೆಯ (ಆರ್‌ಬಿಐ ಹಿಂಪಡೆದುಕೊಂಡಿದೆ) ನೋಟುಗಳನ್ನು ನಾಗರಿಕರಿಂದ ಸಂಗ್ರಹಿಸಿ, ವಂಚಿಸಿದ್ದ 10 ಮಂದಿಯ ಗುಂಪೊಂದನ್ನು ಬೆಂಗಳೂರು ಪೊಲೀಸರು ಬಂಧಿಸಿದ್ದಾರೆ. ಸುಮಾರು 18 ಲಕ್ಷ ರೂ. ಮೌಲ್ಯದ 2,000 ರೂ. ನೋಟುಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.



ಆರ್‌ಬಿಐನಲ್ಲಿ ಠೇವಣಿ ಇಡಲಾಗಿದ್ದ ಕೆಲವು 2,000 ರೂ. ಮುಖಬೆಲೆಯ ನೋಟುಗಳ ಸೀರಿಸ್ ಸಂಖ್ಯೆಗಳು ಮತ್ತು ಕೋಡ್‌ಗಳನ್ನು ತಿರುಚಲಾಗಿದೆ ಎಂದು ಆರ್‌ಬಿಐ ವ್ಯವಸ್ಥಾಪರು ಅಕ್ಟೋಬರ್‌ನಲ್ಲಿ ದೂರು ನೀಡಿದ್ದರು. ಅವರ ದೂರಿನಿಂದಾಗಿ ಪ್ರಕರಣವು ಬೆಳಕಿಗೆ ಬಂದಿದೆ. ತನಿಖೆ ನಡೆಸಿದ ಹಲಸೂರು ಗೇಟ್ ಪೊಲೀಸರು 10 ಮಂದಿಯನ್ನು ಬಂಧಿಸಿದ್ದಾರೆ.

"ಆರೋಪಿಗಳು 2018ರಿಂದ ನಿರ್ದಿಷ್ಟ ಸರಣಿಗಳಲ್ಲಿ ಮುದ್ರಿತವಾದ 2,000 ರೂ. ನೋಟುಗಳನ್ನು ತಮಗೆ ನೀಡಿದರೆ, ಧಾರ್ಮಿಕ ಆಚರಣೆಗಳನ್ನು ನಡೆಸಿ ಹಣವನ್ನು ನೂರು ಪಟ್ಟು ಹೆಚ್ಚಿಸಿ ಹಣದ ಮಳೆ ಸುರಿಸುತ್ತೇವೆಂದು ಜನರಿಗೆ ವಂಚಿಸಿದ್ದಾರೆ. ಸುಳ್ಳು ಆಮಿಷವೊಡ್ಡಿ ಹಳೆಯ 2,000 ರೂ. ನೋಟುಗಳನ್ನು ಹೊಂದಿರುವ ಜನರಿಂದನೋಟುಗಳನ್ನುಪಡೆದುಕೊಂಡಿದ್ದಾರೆ" ಎಂದು ಆರೋಪಿಸಲಾಗಿದೆ.

ತನಿಖೆಯ ಸಮಯದಲ್ಲಿ, ಅಕ್ಟೋಬರ್ 24ರಂದು ಕಬ್ಬನ್‌ಪೇಟೆಯಿಂದ ಮೊದಲ ಆರೋಪಿಯನ್ನು ಪೊಲೀಸರು ಬಂಧಿಸಿದರು. ಅವರು ಕಮಿಷನ್‌ಗಾಗಿ ಬ್ಯಾಂಕಿನಲ್ಲಿ ಅಂತಹ 40,000 ರೂ. ನೋಟುಗಳನ್ನು ಠೇವಣಿ ಇಟ್ಟಿದ್ದಾಗಿ ಒಪ್ಪಿಕೊಂಡಿದ್ದಾರೆ. ಅಲ್ಲದೆ, ತನ್ನ ಇಬ್ಬರು ಸಹಚರರ ಮಾಹಿತಿಯನ್ನು ಪೊಲೀಸರು ನೀಡಿದ್ದರು. ಬಳಿಕ, ಆ ಇಬ್ಬರನ್ನೂ ಪೊಲೀಸರು ಬಂಧಿಸಿದರು.

ಹೆಚ್ಚಿನ ತನಿಖೆ ಮುಂದುವರೆದಂತೆ, ಈ ಮೂವರು ಆರೋಪಿಗಳಿಗೆ ತಮ್ಮ ಖಾತೆಗಳಿಗೆ ಜಮಾ ಮಾಡಲು 8 ಲಕ್ಷ ರೂ. ಮೌಲ್ಯದ 2,000 ರೂ. ಮುಖಬೆಲೆಯ ನೋಟುಗಳನ್ನು ಕೊಟ್ಟಿದ್ದ ಇತರ ಮೂವರು ವ್ಯಕ್ತಿಗಳನ್ನು ಪೊಲೀಸರು ಪತ್ತೆ ಹಚ್ಚಿದ್ದು, ಅಕ್ಟೋಬರ್ 25ರಂದು ಮೆಜೆಸ್ಟಿಕ್ ಬಸ್ ನಿಲ್ದಾಣದಲ್ಲಿ ಬಂಧಿಸಿದ್ದಾರೆ ಎಂದು ವರದಿಯಾಗಿದೆ.

ನಂತರ, ಅಕ್ಟೋಬರ್ 28 ರಂದು ಆಂಧ್ರಪ್ರದೇಶದ ವಿವಿಧ ಭಾಗಗಳಲ್ಲಿ ಇನ್ನೂ ಮೂರು ವ್ಯಕ್ತಿಗಳನ್ನು ಬಂಧಿಸಿದ್ದಾರೆ. ಅವರಿಂದ, 6 ಲಕ್ಷ ರೂ. ಮೌಲ್ಯದ 2,000 ರೂ. ನೋಟುಗಳನ್ನು ವಶಪಡಿಸಿಕೊಂಡಿದ್ದಾರೆ. ತನಿಖೆಯ ಪರಿಣಾಮವಾಗಿ ಯಶವಂತಪುರದಲ್ಲಿ ಮತ್ತೊಬ್ಬ ವ್ಯಕ್ತಿಯನ್ನು ಬಂಧಿಸಲಾಗಿದೆ. ಆತ ವಿಶೇಷ ಪರಿಕರಗಳನ್ನು ಬಳಸಿಕೊಂಡು ನೋಟುಗಳ ಮೇಲೆ ಸರಣಿ ಸಂಖ್ಯೆಗಳನ್ನು ಬದಲಾಯಿಸುತ್ತಿದ್ದರು ಮತ್ತು ವರ್ಷಗಳನ್ನು ಮುದ್ರಿಸುತ್ತಿದ್ದರು ಎಂದು ಆರೋಪಿಸಲಾಗಿದೆ. ಆತನ ನಿವಾಸದಿಂದ ಆ ಪರಿಕರಗಳು ಮತ್ತು 6 ಲಕ್ಷ ರೂ. ನಕಲಿ ನೋಟುಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಈವರೆಗೆ, ಒಟ್ಟು 10 ಮಂದಿ ಆರೋಪಿಗಳು ಮತ್ತು 18 ಲಕ್ಷ ರೂ. 2,000 ಮುಖಬೆಲೆಯ ನೋಟುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಅವರೆಲ್ಲರನ್ನೂ ನವೆಂಬರ್ 3 ರಂದು ನ್ಯಾಯಾಲಯದ ಮುಂದೆ ಹಾಜರುಪಡಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಒಬ್ಬ ಮಹಿಳಾ ಆರೋಪಿಯನ್ನು ಪತ್ತೆಹಚ್ಚುವ ಪ್ರಯತ್ನಗಳು ನಡೆಯುತ್ತಿವೆ ಎಂದು ಪೊಲೀಸರು ತಿಳಿಸಿದ್ದಾರೆ.

# ನಾಗಮಂಗಲದಲ್ಲಿ ರಾಷ್ಟ್ರೀಯ ಜೀವನೋಪಾಯ ಅಭಿಯಾನಕ್ಕೆ ಚಾಲನೆ

**ನಾಗಮಂಗಲ:** ಮಹಿಳೆಯರು ಸ್ವಾವಲಂಬಿ ಬದುಕಿನತ್ತ ಹೆಜ್ಜೆ ಹಾಕಲು ಕುಟುಂಬದ ಆರ್ಥಿಕತೆಯ ಬೆಳವಣಿಗೆ ಪೂರಕವಾಗಿ ಸ್ವಾವಲಂಬಿ ಬದುಕಿನ ಹಾದಿ ಪ್ರಮುಖವಾಗಿದೆ ಎಂದು ತಾಲೂಕು ಕಾರ್ಯನಿರ್ವಹಣಾಧಿಕಾರಿಗಳಾದ ಸತೀಶ್ ತಿಳಿಸಿದರು.

ಅವರು ಇಂದು ನಾಗಮಂಗಲ ತಾಲೂಕು ಪಂಚಾ ಯಿತಿ ಕಾರ್ಯಾಲಯದಲ್ಲಿ ಮೀನು ಗಾರಿಕೆ ಇಲಾಖೆ ಏರ್ಪಡಿಸಿದ್ದ ಸಂಜೀವಿನಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಹಾಗೂ ಗ್ರಾಮ ಪಂಚಾಯಿತಿಗಳ ಸಹಯೋಗದಲ್ಲಿ ಗ್ರಾಮ ಪಂಚಾಯಿತಿಯ ಕೆರೆಗಳಲ್ಲಿ ಮೀನು ಸಾಕಾಣಿಕೆ ಹಾಗೂ ನಿರ್ವಹಣೆ ಕುರಿತು ತರಬೇತಿ ಕಾರ್ಯಾಗಾರವನ್ನು ಎನ್. ಆರ್.ಎಲ್.ಎಂ ಯೋಜನೆಯ 5 ಸಂಜೀವಿನಿ ಗ್ರಾಮ ಪಂಚಾಯಿತಿ ಒಕ್ಕೂಟ (ಕಾಳಿಂಗನಹಳ್ಳಿ, ಭೀಮನಹಳ್ಳಿ, ದೇವರಮಲ್ಲ ನಾಯಕನಹಳ್ಳಿ, ದೊಡ್ಡಬಲ,ತುಪ್ಪಮಡು) ಅಡಿಯಲ್ಲಿ ಬರುವ ಸ್ವ–ಸಹಾಯ ಸಂಘದ ಸದ್ಯಸರಿಗೆ 2 ದಿನದ "ಮತ್ಸ್ಯ ಸಂಜೀವಿನಿ–ಮೀನುಗಾರಿಕೆ ಚಟುವಟಿಕೆಯ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಮಹಿಳೆಯರು ಸಮಾಜದಲ್ಲಿ ಸ್ವ ಸಹಾಯ ಸಂಘಗಳ ಮುಖಾಂತರ ತಮ್ಮ ಬದುಕಿನ ಆರ್ಥಿಕ ಚಟುವಟಿಕೆಗಳತ್ತ ಗಮನ ಕೊಟ್ಟು ತಮ್ಮ ಕುಟುಂಬದ ಅಭಿವೃದ್ಧಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡುವ ಮುಖಾಂತರ ಆರ್ಥಿಕ ಅಭಿವೃದ್ಧಿಗೆ ಹೊಸ ಮನ್ವಂತರ ಹೆಜ್ಜೆ ಹಾಕುವ ಮುಖಾಂತರ ಸ್ವಸ್ಥ ಸಮಾಜ ನಿರ್ಮಾಣ ಮಾಡಲು ಸಮುದಾಯವನ್ನು ಪಾಲ್ಗೊಳ್ಳುವ ನಾಯಕತ್ವ ಬಳಸಿಕೊಳ್ಳಲು ಸಹಾಯವಾಗುವ ಮತ್ಸ್ಯ ಸಂಜೀವಿನಿ ಸರ್ಕಾರದ ಮಹತ್ವಕಾಂಕ್ಷಿಯ ಯೋಜನೆ ಅನುಕೂಲವಾಗುತ್ತದೆ ಎಂದು ಸಿಡಿಪಿಓ ಕೃಷ್ಣಮೂರ್ತಿ ಹೇಳಿದರು. ಆಯ್ಕೆಯ ಗ್ರಾಮಗಳಲ್ಲಿ ಇಂತಹ ಯೋಜನೆ ಅನುಕೂಲಕರವಾಗಿದೆ ಎಂದು ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರಾದ ಜಗದೀಶ್ ತಿಳಿಸಿದರು.

ಆರೋಗ್ಯ ಇಲಾಖೆಯ ಸಿದ್ದಲಿಂಗಯ್ಯ, ಸಿಡಿಪಿಓ ಕೃಷ್ಣಮೂರ್ತಿ ಹಾಜರಿದ್ದರು.




### ಸಂತೋಷ್ ಕುಮಾರ್ ಅವಿರೋಧ ಆಯ್ಕೆ

**ಮಂಡ್ಯ:** ತಾಲೂಕಿನ ಎಚ್.ಮಲ್ಲಿಗೆರೆ ಗ್ರಾಮ ಪಂಚಾಯಿತಿಯ ಉಪಾಧ್ಯಕ್ಷರ ಚುನಾವಣೆಯಲ್ಲಿ ಅಚ್ಚರಿಯ ಬೆಳವಣಿಗೆ ನಡೆದು ಉಪಾಧ್ಯಕ್ಷ ಸ್ಥಾನ ಪರಿಶಿಷ್ಠಜಾತಿಯ ಸದಸ್ಯರಿಗೆ ಒಲಿದು ಸಂತೋಷ್ ಕುಮಾರ್ ಅವಿರೋಧವಾಗಿ ಆಯ್ಕೆಯಾದರು.

ಬಳಿಕ ಮಾತನಾಡಿದ ನೂತನ ಉಪಾಧ್ಯಕ್ಷ ಸಂತೋಷ್ಕುಮಾರ್, ಸದರಿ ಪಂಚಾಯಿತಿ ಆಡಳಿತ ಮಂಡಳಿಯ ಉಪಾಧ್ಯಕ್ಷ ಸ್ಥಾನ ಸಾಮಾನ್ಯ ವರ್ಗಕ್ಕೆ ಇದ್ದರೂ ಎಲ್ಲರ ಸಹಮತದಿಂದ ಪರಿಶಿಷ್ಟ ಜಾತಿಗೆ ಅವಕಾಶ ಮಾಡಿಕೊಟ್ಟು ಸಂಪಹಳ್ಳಿ ಗ್ರಾಮದ ಜೆಡಿಎಸ್ ಬೆಂಬಲಿತ ಅಭ್ಯರ್ಥಿಯಾದ ನನಗೆ ಉಪಾಧ್ಯಕ್ಷ ಸ್ಥಾನ ಕೊಟ್ಟು ಅವಿರೋಧವಾಗಿ ಆಯ್ಕೆ ಮಾಡಿದ್ದಕ್ಕೆ ನಮನಗಳು ಎಂದರು.

ಎಲ್ಲಾ ಗ್ರಾಮ ಪಂಚಾಯಿತಿ ಸದಸ್ಯರು ಮತ್ತು ಅಧ್ಯಕ್ಷರು ಮತ್ತು ಅಧಿಕಾರಿಗಳ ಸಹಕಾರ ಮತ್ತು ಮಾರ್ಗದರ್ಶನದಲ್ಲಿ ಉತ್ತಮ ಆಡಳಿತ ನೆಡೆಸಿ, ಅಧಿವೃದ್ದಿಗೆ ಸಹಕಾರ ಕೋರುತ್ತೇನೆ ಎಂದು ತಿಳಿಸಿದರು.

ಸಂದರ್ಭದಲ್ಲಿ ಮುಖಂಡರಾದ ಸಿ ಮಾದಪ್ಪ, ಎಂ ಕೆ ಜ್ಞಾನಮೂರ್ತಿ, ಎಂ ಮಾದೇಗೌಡ, ಯೋಗಾನಂದ, ಶಿವಶಂಕರ್, ಎಸ್ ಎಸ್ ವಿನಯ್, ಎಸ್ ಸಿ ಬಸವರಾಜು, ಎಸ್ ಕೆ ಬಸವರಾಜ್, ಎಸ್ ಈ ರಾಮಕೃಷ್ಣ, ಎಸ್ ವಿ ವೆಂಕಟೇಶ್, ಎಸ್ ಅಯ್ಯಪ್ಪ, ಪಾರ್ಥಸಾರಥಿ, ಮೋಹನ್, ಜೆಡಿಎಸ್ನ ಕಾರ್ಯಕರ್ತರು ಹಾಜರಿದ್ದು ಅಭಿನಂದಿಸಿದರು.



ಎಚ್.ಮಲ್ಲಿಗೆರೆ ಗ್ರಾಮ ಪಂಚಾಯಿತಿಯ ಉಪಾಧ್ಯಕ್ಷರ ಚುನಾವಣೆಯಲ್ಲಿ ಸಂತೋಷ್‌ಕುಮಾರ್ ಉಪಾಧ್ಯಕ್ಷರಾಗಿಅವಿರೋಧವಾಗಿಆಯ್ಕೆಯಾದರು.

# ಬಿಎಂಟಿಸಿ ಅಧಿಕಾರಿಗೆ 70 ಲಕ್ಷ ರೂ ದಂಡ !

**ಬೆಂಗಳೂರು:** ಅಕ್ರಮ ಆಸ್ತಿ ಗಳಿಕೆ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಬಿಎಂಟಿಸಿ ಅಧಿಕಾರಿಯೊಬ್ಬರಿಗೆ ಮೂರು ವರ್ಷ ಕಠಿಣ ಜೈಲು ಶಿಕ್ಷೆ ಮತ್ತು 70 ಲಕ್ಷ ರೂಪಾಯಿ ದಂಡ ವಿಧಿಸಿ ಲೋಕಾಯುಕ್ತ ವಿಶೇಷ ನ್ಯಾಯಾಲಯ ತೀರ್ಪು ನೀಡಿದೆ.

ಬಿಎಂಟಿಸಿ ವಿಭಾಗೀಯ ಸಂಚಾರ ನಿಯಂತ್ರಕ ಕೆ.ಬಿ. ರಾಮಕೃಷ್ಣ ರೆಡ್ಡಿ ಶಿಕ್ಷೆಗೆ ಗುರಿಯಾದ ಅಧಿಕಾರಿಯಾಗಿದ್ದಾರೆ. ಆದಾಯಕ್ಕಿಂತ ಹೆಚ್ಚಿನ ಆಸ್ತಿ ಹೊಂದಿದ ಆರೋಪದಡಿ 2014ನೇ ಸಾಲಿನಲ್ಲಿ ಕೆ.ಬಿ. ರಾಮಕೃಷ್ಣ ರೆಡ್ಡಿ ಅವರ ಮನೆ, ಕಚೇರಿ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ಮಾಡಿ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದರು.

ನಂತರ ಪ್ರಕರಣದ ವಿಚಾರಣೆ ನಡೆಸಿದ ಲೋಕಾಯುಕ್ತ ಪೊಲೀಸರು ರಾಮಕೃಷ್ಣ ರೆಡ್ಡಿ ಅವರು ಆದಾಯಕ್ಕಿಂತ 61.45 ಲಕ್ಷ ರೂ. ಮೌಲ್ಯದ ಅಧಿಕ ಆಸ್ತಿ ಹೊಂದಿರುವುದನ್ನು ಬಯಲು ಮಾಡಿದ್ದರು. ಈ ಸಂಬಂಧ ತನಿಖೆ ಪೂರ್ಣಗೊಳಿಸಿ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಲೋಕಾಯುಕ್ತಪೊಲೀಸರಪರವಾಗಿಪಬ್ಲಿಕ್‌ಪ್ರಾಸಿಕ್ಯೂಟರ್‌ಮಂಜುನಾಥ ಹೊನ್ನಯ್ಯ ನಾಯಕ್ ಅವರು ಪ್ರಕರಣಕ್ಕೆ ಪೂರಕವಾದ ಸಾಕ್ಷ್ಯಗಳೊಂದಿಗೆ ವಾದಿಸಿದರು.

ಅಂತಿಮವಾಗಿ, ಆರೋಪಿಯು 69.33 ಲಕ್ಷ ರೂ. ಅಕ್ರಮ ಆಸ್ತಿಯನ್ನು ಹೊಂದಿದ್ದಾರೆಂಬುದು ಸಾಬೀತಾಯಿತು. ಆರೋಪಿಯು ತಾನು ನಿರಪರಾಧಿ ಎಂದು ಸಾಬೀತುಪಡಿಸುವಲ್ಲಿ ವಿಫಲನಾಗಿದ್ದಾನೆಂದು ನ್ಯಾಯಾಲಯ ಹೇಳಿತ ಈ ಹಿನ್ನೆಲೆಯಲ್ಲಿ ಅ. 31ರಂದು ಕೆ.ಬಿ. ರಾಮಕೃಷ್ಣ ರೆಡ್ಡಿ ಅವರಿಗೆ 3 ವರ್ಷ ಕಠಿಣ ಜೈಲು ಶಿಕ್ಷೆ, 70 ಲಕ್ಷ ರೂ. ದಂಡ ವಿಧಿಸಿ ಅಂತಿಮ ತೀರ್ಪು ನೀಡಿದೆ. ದಂಡ ಪಾವತಿಸುವಲ್ಲಿ ವಿಫಲರಾದರೆ ಆರು ತಿಂಗಳ ಸಾದಾ ಜೈಲು ಶಿಕ್ಷೆ ಅನುಭವಿಸುವಂತೆ ಉಲ್ಲೇಖಿಸಲಾಗಿದೆ.